24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 77 | ನವದೆಹಲಿ | ಬೆಲೆ ₹10 | ಸೆಪ್ಟೆಂಬರ್ 12 2026 ಶನಿವಾರ

# ಇಂದಿನಿಂದ 18ನೇ ಬ್ರಿಕ್ಸ್ ಶೃಂಗಸಭೆ, ಪ್ರಮುಖ ನಾಯಕರ ಆಗಮನ

## ದೆಹಲಿಯಲ್ಲಿ ಸಿದ್ಧತೆಗಳು ಪೂರ್ಣ: ಭಾರತಕ್ಕೆ ಬಂದಿಳಿದ ರಷ್ಯಾ ಅಧ್ಯಕ್ಷ ಪುಟಿನ್, ಇರಾನ್ ಅಧ್ಯಕ್ಷ ಮಸೂದ್ ಪೆಜೆಶ್ಕಿಯನ್, ಅಬುಧಾಬಿಯ ಯುವರಾಜ ಶೇಖ್ ಖಾಲಿದ್ ಮತ್ತಿತರರು

**ನವದೆಹಲಿ, ಸೆ.11:** ನವದೆಹಲಿಯ ಭಾರತ್ ಮಂಟಪದಲ್ಲಿ ನಡೆಯಲಿರುವ 18ನೇ ಬಿಆರ್ಐಸಿಎಸ್ (ಬ್ರಿಕ್ಸ್) ಶೃಂಗಸಭೆಗೆ ಸರ್ವ ಸಿದ್ಧತೆಗಳು ಪೂರ್ಣಗೊಂಡಿವೆ. ಶೃಂಗಸಭೆಯ ಸಮಯದಲ್ಲಿ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್, ಚೀನಾ ಅಧ್ಯಕ್ಷ ಷಿ ಜಿನ್‌ಪಿಂಗ್, ದಕ್ಷಿಣ ಆಫ್ರಿಕಾ ಅಧ್ಯಕ್ಷ ಸಿರಿಲ್ ರಾಮಫೋಸಾ, ಈಜಿಪ್ಟ್ ಅಧ್ಯಕ್ಷ ಅಬ್ದೆಲ್ ಫತ್ತಾಹ್ ಎಲ್-ಸಿಸಿ, ಇಂಡೋನೇಷ್ಯಾ ಅಧ್ಯಕ್ಷ ಪ್ರಬೋವೊ ಸುಬಿಯಾಂಟೊ, ಇರಾನ್ ಅಧ್ಯಕ್ಷ ಮಸೂದ್ ಪೆಜೆಶ್ಕಿಯನ್ ಮತ್ತು ಅಬುಧಾಬಿಯ ಯುವರಾಜ ಶೇಖ್ ಖಾಲಿದ್ ಬಿನ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಸೇರಿದಂತೆ ವಿಶ್ವದ ನಾಯಕರನ್ನು ಆತಿಥ್ಯವಹಿಸಿ ಸ್ವಾಗತಿಸಲಿದ್ದಾರೆ.

ಭಾರತದ 2026ರ ಅಧ್ಯಕ್ಷತೆಯ ಶೃಂಗಸಭೆ "ಸ್ಥಿತಿಸ್ಥಾಪಕತ್ವ, ನಾವೀನ್ಯತೆ, ಸಹಕಾರ ಮತ್ತು ಸುಸ್ಥಿರತೆಗಾಗಿ ನಿರ್ಮಾಣ" (Building for Resilience, Innovation, Cooperation and Sustainability) ಎಂಬ ಧ್ಯೇಯವಾಕ್ಯದೊಂದಿಗೆ ನಡೆಯಲಿದೆ.

ಶೃಂಗಸಭೆಯು ನಾಳೆ ಬಿಆರ್ಐಸಿಎಸ್ ಸದಸ್ಯ ದೇಶಗಳಿಗಾಗಿ "ಸಮಗ್ರ ಜಾಗತಿಕ ಆಡಳಿತ ಮತ್ತು ಬಹುಪಕ್ಷೀಯತೆಯನ್ನು ಬಲಪಡಿಸುವುದು" ಎಂಬ ವಿಷಯದ ಕುರಿತು ಮುಚ್ಚಿದ ಬಾಗಿಲ ಸಭೆಯೊಂದಿಗೆ ಪ್ರಾರಂಭವಾಗಲಿದೆ. ಬಿಆರ್ಐಸಿಎಸ್ ಸದಸ್ಯ ದೇಶಗಳ ನಾಯಕರು ಭಾರತ್ ಮಂಟಪದಲ್ಲಿ 'ಭಾರತ್ ಇನ್ನೋವೇಟ್ಸ್' ಪ್ರದರ್ಶನವನ್ನು ವೀಕ್ಷಿಸಲಿದ್ದಾರೆ. ಅವರು ಜಂಟಿ ಸಸಿ ನೆಡುವ ಕಾರ್ಯಕ್ರಮದಲ್ಲೂ ಪಾಲ್ಗೊಳ್ಳಲಿದ್ದು, ಇದರ ನಂತರ ಪ್ರಧಾನಿ ಮೋದಿ ಅವರು ಆಯೋಜಿಸುವ ಸತ್ಕಾರ ಕೂಟ ನಡೆಯಲಿದೆ. ಶೃಂಗಸಭೆಯ ನಡುವೆ ಪ್ರಧಾನಿಯವರು ಬಿಆರ್ಐಸಿಎಸ್ ನಾಯಕರೊಂದಿಗೆ ಸರಣಿ ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದಾರೆ. ಭಾನುವಾರದಂದು ಶ್ರೀ ಮೋದಿಯವರು ಬಿಆರ್ಐಸಿಎಸ್ ಪಾಲುದಾರ ದೇಶಗಳ ನಾಯಕರನ್ನು ಮತ್ತು ಆಹ್ವಾನಿತರನ್ನು ಸ್ವಾಗತಿಸಲಿದ್ದಾರೆ. ನಾಯಕರು "ಸ್ಥಿತಿಸ್ಥಾಪಕತ್ವ, ನಾವೀನ್ಯತೆ, ಸಹಕಾರ ಮತ್ತು ಸುಸ್ಥಿರತೆ: ಸಮಗ್ರ ಜಾಗತಿಕ ಬೆಳವಣಿಗೆಗಾಗಿ ಭವಿಷ್ಯವನ್ನು ರೂಪಿಸುವುದು" ಎಂಬ ವಿಷಯದ ಕುರಿತಾದ ಸಭೆಯಲ್ಲಿ ಭಾಗವಹಿಸಲಿದ್ದಾರೆ.

ಜಾಗತಿಕ ಮಟ್ಟದಲ್ಲಿ ಮಹತ್ವದ ಬದಲಾವಣೆಗಳು ನಡೆಯುತ್ತಿರುವ ಸಮಯದಲ್ಲಿ ಭಾರತದ 2026ರ ಬಿಆರ್ಐಸಿಎಸ್ ಅಧ್ಯಕ್ಷತೆ ವಹಿಸಿಕೊಂಡಿದೆ ಎಂದು ನಮ್ಮ ವರದಿಗಾರರು ವರದಿ ಮಾಡಿದ್ದಾರೆ. ಅಂತರರಾಷ್ಟ್ರೀಯ ವ್ಯವಸ್ಥೆಯು ಆರ್ಥಿಕ ವಿಭಜನೆ, ತಾಂತ್ರಿಕ ಅಡಚಣೆ ಮತ್ತು ಭೌಗೋಳಿಕ ರಾಜಕೀಯ ಅನಿಶ್ಚಿತತೆಯನ್ನು ಎದುರಿಸುತ್ತಿದೆ.

ಹವಾಮಾನ ವೈಪರೀತ್ಯ ಮತ್ತು ಸಂಪನ್ಮೂಲಗಳ ಒತ್ತಡವು ಇದನ್ನು ಇನ್ನಷ್ಟು ಜಟಿಲಗೊಳಿಸುತ್ತಿದೆ. ಈ ಪರಸ್ಪರ ಸಂಪರ್ಕಿತ ಸವಾಲುಗಳನ್ನು ಎದುರಿಸಲು ಒಳಗೊಳ್ಳುವ, ಪ್ರಾಯೋಗಿಕ ಮತ್ತು ವೈವಿಧ್ಯಮಯ ರಾಷ್ಟ್ರೀಯ ಪರಿಸ್ಥಿತಿಗಳಿಗೆ ಸ್ಪಂದಿಸುವ ಸಹಕಾರದ ಅಗತ್ಯವಿದೆ. ಭಾರತದ ಅಧ್ಯಕ್ಷತೆಯು ಅಸ್ತಿತ್ವದಲ್ಲಿರುವ ವ್ಯವಸ್ಥೆಗಳ ಪರಿಣಾಮಕಾರಿತ್ವವನ್ನು ಬಲಪಡಿಸುವ ಜೊತೆಗೆ ವಿವಿಧ ಸದಸ್ಯರ ನಡುವೆ ಸಮ್ಮತಿಯನ್ನು ನಿರ್ಮಿಸಲು ಶ್ರಮಿಸುತ್ತದೆ. ಹೆಚ್ಚು ಒಳಗೊಳ್ಳುವ ಜಾಗತಿಕ ವ್ಯವಸ್ಥೆಗಾಗಿ ಬಿಆರ್ಐಸಿಎಸ್ ಅನ್ನು ಒಂದು ರಚನಾತ್ಮಕ ಶಕ್ತಿಯಾಗಿ ಬಲಪಡಿಸುವುದು ಭಾರತದ ಮುಖ್ಯ ಉದ್ದೇಶವಾಗಿದೆ.




## ದ್ವಿಪಕ್ಷೀಯ ವ್ಯಾಪಾರ, ರಕ್ಷಣೆ, ಇಂಧನ ಮತ್ತು ಖನಿಜ ವಲಯದಲ್ಲಿ ಸಹಕಾರ ವೃದ್ಧಿ: ಮೋದಿ-ಪುಟಿನ್ ಚರ್ಚೆ ನಿರೀಕ್ಷೆ

**ನವದೆಹಲಿ, ಸೆ.11:** ಬ್ರಿಕ್ಸ್ 2026 ಶೃಂಗಸಭೆಗೆ ಚಾಲನೆ ದೊರೆತಿದ್ದು, ಪ್ರಧಾನಿ ನರೇಂದ್ರ ಮೋದಿ ಅವರು ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರನ್ನು ಶುಕ್ರವಾರ ಭೇಟಿಯಾಗಿ ವಿಸ್ತೃತ ಮಾತುಕತೆ ನಡೆಸಿದರು. ಈ ಮಾತುಕತೆ 2030ರ ವೇಳೆಗೆ ವಾರ್ಷಿಕ ದ್ವಿಪಕ್ಷೀಯ ವ್ಯಾಪಾರವನ್ನು 100 ಶತಕೋಟಿ ಡಾಲರ್‌ಗೆ ಹೆಚ್ಚಿಸುವುದು ಹಾಗೂ ರಕ್ಷಣೆ, ಇಂಧನ ಮತ್ತು ಪ್ರಮುಖ ಖನಿಜಗಳ ವಲಯದಲ್ಲಿ ಸಹಕಾರವನ್ನು ಮತ್ತಷ್ಟು ಬಲಪಡಿಸುವ ಕುರಿತು ಉಭಯ ನಾಯಕರ ಚರ್ಚೆ ನಡಸುವ ನಿರೀಕ್ಷೆಯಿದೆ.

■ **ಆಪ್ತ ಮಿತ್ರನಿಗೆ ಪ್ರಧಾನಿಯಿಂದ ಪವಿತ್ರ, ವಿಶೇಷ ಉಡುಗೊರೆ**




ಸಭೆಗೂ ಮುನ್ನ, ಮೋದಿ ಅವರು ಪುಟಿನ್ ಅವರಿಗೆ ಪ್ರಾಚೀನ ತಮಿಳು ಕೃತಿಯಾದ 'ತಿರುಕ್ಕುರಲ್'ನ ರಷ್ಯನ್ ಭಾಷಾಂತರವನ್ನು ಉಡುಗೊರೆಯಾಗಿ ನೀಡಿದರು.

ಉಭಯ ದೇಶಗಳು ಬ್ರಹ್ಮೋಸ್ ಕ್ಷಿಪಣಿಗಳ ಉನ್ನತೀಕರಣದ ಕುರಿತು ಪರಿಶೀಲಿಸುತ್ತಿವೆ ಎಂದು ಕ್ರೆಮ್ಲಿನ್ ವಕ್ತಾರ ಡಿಮಿಟ್ರಿ ಪೆಸ್ಕೋವ್ ಮಂಗಳವಾರ ತಿಳಿಸಿದರು. ಅಲ್ಲದೆ, ಬಾಕಿ ಇರುವ ಎಸ್-400 (ಖ-400) ವ್ಯವಸ್ಥೆಯ ಪೂರೈಕೆಯನ್ನು ಪೂರ್ಣಗೊಳಿಸಲು ಮತ್ತು ಪ್ರಸ್ತಾವಿತ ಖಣ-57 ಯುದ್ಧ ವಿಮಾನಗಳ ಪೂರೈಕೆಯ ಕುರಿತು ಚರ್ಚಿಸಲು ಮಾಸ್ಕೋ ಬದ್ಧವಾಗಿದೆ ಎಂದು ಅವರು ಹೇಳಿದರು.

ಉಭಯ ದೇಶಗಳ ನಡುವಿನ ಇಂಧನ ಸಂಬಂಧಗಳು ಬಲವಾಗಿವೆ ಎಂದು ರಷ್ಯಾದ ಅಧಿಕಾರಿ ತಿಳಿಸಿದರು. ಭಾರತವು ಹೊಸ ನಾಗರಿಕ ಪರಮಾಣು ರಿಯಾಕ್ಟರ್‌ಗಳನ್ನು ಸ್ಥಾಪಿಸುವ ಯೋಜನೆಗೆ ಸಂಬಂಧಿಸಿದಂತೆ ಮಾತುಕತೆ ನಡೆಸುವ ಕುರಿತು ಎರಡೂ ಕಡೆಯವರು ಪರಿಶೀಲಿಸುತ್ತಿದ್ದಾರೆ ಎಂದರು.

ಉಕ್ರೇನ್ ಸಂಘರ್ಷ ಮತ್ತು ಶಾಂತಿಯತ್ತ ಸಾಗುವ ಮಾರ್ಗಸೂಚಿಯು ಅವರ ಮಾತುಕತೆಗಳಲ್ಲಿ ಪ್ರಮುಖವಾಗಿ ಚರ್ಚೆಯಾಗುವ ನಿರೀಕ್ಷೆಯಿದೆ. ಸಂಘರ್ಷವನ್ನು ಬಗೆಹರಿಸುವ ಮಾರ್ಗವನ್ನು ಕಂಡುಕೊಳ್ಳಲು ಇತ್ತೀಚಿನ ದಿನಗಳಲ್ಲಿ ಟ್ರಂಪ್ ಆಡಳಿತ ಸೇರಿದಂತೆ ಹಲವು ಕಡೆಯಿಂದ ಹೊಸ ಪ್ರಯತ್ನಗಳು ನಡೆದಿವೆ.

## ಭಾರತ ಭಿನ್ನಾಭಿಪ್ರಾಯಗಳನ್ನು ಸರಿಯಾಗಿ ನಿರ್ವಹಿಸಲಿ ಕ್ಷೀ ಜಿನ್‌ಪಿಂಗ್ ಭಾರತ ಭೇಟಿಗೂ ಮುನ್ನ ಚೀನಾ ಹೇಳಿಕೆ

**ಬೀಜಿಂಗ್, ಸೆ.11:** ಬ್ರಿಕ್ಸ್ ಶೃಂಗಸಭೆಯಲ್ಲಿ ಭಾಗವಹಿಸಲು ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಶನಿವಾರ ನವದೆಹಲಿಗೆ ಆಗಮಿಸಲಿದ್ದಾರೆ. ಉಭಯ ದೇಶಗಳು ತಮ್ಮ ಭಿನ್ನಾಭಿಪ್ರಾಯಗಳನ್ನು ಸೂಕ್ತ ರೀತಿಯಲ್ಲಿ ನಿರ್ವಹಿಸಬೇಕು ಹಾಗೂ ತಮ್ಮ ಸಂಬಂಧವನ್ನು ಕಾರ್ಯತಂತ್ರದ ಮತ್ತು ದೀರ್ಘಕಾಲೀನ ದೃಷ್ಟಿಕೋನದಿಂದ ನೋಡಬೇಕು ಎಂದು ಚೀನಾ ಶುಕ್ರವಾರ ಹೇಳಿದೆ. ಶನಿವಾರ ಮೋದಿ ಅವರೊಂದಿಗೆ ಕ್ಸಿ ಜಿನ್‌ಪಿಂಗ್ ದ್ವಿಪಕ್ಷೀಯ ಸಭೆ ನಿಗದಿಯಾಗಿದೆ.



■ **ಇಂದು ದೆಹಲಿಗೆ ಕ್ಸಿಜಿನ್‌ಪಿಂಗ್**

ಮೋದಿ-ಕ್ಸಿ ಭೇಟಿಯನ್ನು ಚೀನಾ ಹೇಗೆ ನೋಡುತ್ತದೆ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ವಿದೇಶಾಂಗ ಸಚಿವಾಲಯದ ವಕ್ತಾರೆ ಮಾವೋ ನಿಂಗ್, ಕಜಾನ್ ಮತ್ತು ಟಿಯಾಂಜಿನ್‌ನಲ್ಲಿ ನಡೆದ ಸಭೆಗಳ ನಂತರ ಈ ಇಬ್ಬರು ನಾಯಕರು ಸತತ ಮೂರನೇ ವರ್ಷವೂ ಭೇಟಿಯಾಗುತ್ತಿದ್ದಾರೆ ಎಂದು ಮಾಧ್ಯಮಗೋಷ್ಠಿಯಲ್ಲಿ ತಿಳಿಸಿದರು.

"ಇಬ್ಬರು ನಾಯಕರ ಕಾರ್ಯತಂತ್ರದ ಮಾರ್ಗದರ್ಶನದಂತೆ ಕಾರ್ಯನಿರ್ವಹಿಸಲು, ದ್ವಿಪಕ್ಷೀಯ ಸಂಬಂಧಗಳನ್ನು ಕಾರ್ಯತಂತ್ರದ ಉನ್ನತ ಮಟ್ಟದಿಂದ ಮತ್ತು ದೀರ್ಘಕಾಲೀನ ದೃಷ್ಟಿಕೋನದಿಂದ ನಿರ್ವಹಿಸಲು, ಸಂವಹನವನ್ನು ಹೆಚ್ಚಿಸಲು, ಸಹಕಾರವನ್ನು ಬಲಪಡಿಸಲು, ಭಿನ್ನಾಭಿಪ್ರಾಯಗಳನ್ನು ಸೂಕ್ತವಾಗಿ ನಿಭಾಯಿಸಲು ಹಾಗೂ ಉತ್ತಮ ನೆರೆಹೊರೆಯವರಾಗಿ ಸ್ನೇಹದಿಂದ ಮತ್ತು ಪರಸ್ಪರ ಯಶಸ್ಸಿಗೆ ಸಹಕರಿಸುವ ಪಾಲುದಾರರಾಗಿ ಮುನ್ನಡೆಯಲು ಚೀನಾ ಭಾರತದೊಂದಿಗೆ ಕೆಲಸ ಮಾಡಲಿದೆ ಎಂದು ಹೇಳಿದರು.

## ಬ್ರಿಕ್ಸ್ ಶಕ್ತಿ ಸದಸ್ಯ ರಾಷ್ಟ್ರಗಳ ಆರ್ಥಿಕತೆಯ ಗಾತ್ರಕ್ಕೆ ಸೀಮಿತವಾಗಬಾರದು: ಇರಾನ್ ಅಧ್ಯಕ್ಷ ಪೆಜೆಶ್ಕಿಯನ್



**ನವದೆಹಲಿ, ಸೆ.11:** ಬ್ರಿಕ್ಸ್‌ನ ನಿಜವಾದ ಶಕ್ತಿಯು ಕೇವಲ ಅದರ ಸದಸ್ಯ ರಾಷ್ಟ್ರಗಳ ಆರ್ಥಿಕತೆಯ ಗಾತ್ರಕ್ಕೆ ಸೀಮಿತವಾಗಿಲ್ಲ; ಬದಲಿಗೆ ಅವುಗಳ ಸಾಮರ್ಥ್ಯಗಳು ವ್ಯಾಪಾರ, ಹೂಡಿಕೆ ಮತ್ತು ಜಂಟಿ ಹಣಕಾಸು ವ್ಯವಸ್ಥೆಯ ಜಾಲವಾಗಿ ಪರಿವರ್ತನೆಗೊಂಡಾಗ ಅದು ಹೆಚ್ಚು ಸ್ಪಷ್ಟವಾಗುತ್ತದೆ ಎಂದು ಇರಾನ್ ಅಧ್ಯಕ್ಷ ಮಸೂದ್ ಪೆಜೆಶ್ಕಿಯನ್ ಹೇಳಿದ್ದಾರೆ. ಶುಕ್ರವಾರ ನಡೆದ ಬ್ರಿಕ್ಸ್ ಬಿಸಿನೆಸ್ ಫೋರಂನ ನಾಯಕರ ಸಭೆಯಲ್ಲಿ ಮಾತನಾಡಿ, ಸಂಭಾವ್ಯ ಸಹಕಾರದಿಂದ ಕಾರ್ಯರೂಪದ ಸಹಕಾರದತ್ತ ಪರಿವರ್ತನೆ"ಯಾಗುವ ಅಗತ್ಯವನ್ನು ತಿಳಿಸಿದರು. ಪ್ರಸ್ತುತ ಜಗತ್ತು ಅತ್ಯಂತ ಸಂಕೀರ್ಣ ಹಂತದಲ್ಲಿದೆ. ಭೌಗೋಳಿಕ-ರಾಜಕೀಯ ಅನಿಶ್ಚಿತತೆ, ಪೂರೈಕೆ ಸರಪಳಿಗಳಲ್ಲಿನ ಅಡಚಣೆ ಮತ್ತು ರಾಜಕೀಯ ಒತ್ತಡ ಹೇರಲು ಆರ್ಥಿಕ ಅಸ್ತ್ರ ಬಳಕೆಯು ಆರ್ಥಿಕ ವಾತಾವರಣವನ್ನು ಹೆಚ್ಚು ಸಂಕೀರ್ಣಗೊಳಿಸಿದೆ. ಈ ಸವಾಲುಗಳಿಗೆ ಬ್ರಿಕ್ಸ್‌ನ ಪ್ರತಿಕ್ರಿಯೆ ಏನು ಪೆಜೆಶ್ಕಿಯನ್ ಪ್ರಶ್ನೆಯಾಗಿದೆ.



## ನಿತ್ಯ ಪಂಚಾಂಗ 12.09.2026 ಶನಿವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಗ್ರೀಷ್ಮ ಋತು, ಚಾಂದ್ರಮಾನ ಶ್ರಾವಣ-ಭಾದ್ರಪದ ಮಾಸ

ಭಾದ್ರಪದ ಶುದ್ಧ, ಪಾಡ್ಯ, ಉತ್ತರಾ ನಕ್ಷತ್ರ, 2ನೇ ಶನಿವಾರ, ಚಂದ್ರದರ್ಶನ, ಪೆರ್ನಾಳ್ ಆಚರಣೆ, ಸವಣೂರು ಮಂತ್ರವಾಡಿ ರೇವಣಸಿದ್ದೇಶ್ವರ ಜಲ ರಥ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 3.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ರಾಜಕೀಯ ನಿವೃತ್ತಿ ಹೇಳಿಕೆ ಬೇಡ: ಸಿದ್ದರಾಮಯ್ಯಗೆ ರಾಹುಲ್ ಗಾಂಧಿ ಸಲಹೆ

### ಜಾತಿ ಗಣತಿ ವರದಿ ಬಿಡುಗಡೆ, ಸಂಪುಟ ವಿಸ್ತರಣೆ ಸೇರಿ ರಾಜ್ಯದ ಪ್ರಮುಖ ವಿಚಾರಗಳ ಕುರಿತು ಚರ್ಚೆ

**ನವದೆಹಲಿ, ಸೆ.11:** ರಾಜಕೀಯ ನಿವೃತ್ತಿ ಕುರಿತು ಸಾರ್ವಜನಿಕವಾಗಿ ಹೇಳಿಕೆ ನೀಡದಂತೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಲಹೆ ನೀಡಿದ್ದಾರೆ.

ದೆಹಲಿಯಲ್ಲಿ ನಡೆದ ಸಿದ್ದರಾಮಯ್ಯ-ರಾಹುಲ್ ಗಾಂಧಿ ಭೇಟಿಯ ವೇಳೆ ರಾಜ್ಯದ ಪ್ರಸಕ್ತ ರಾಜಕೀಯ ವಿದ್ಯಮಾನಗಳ ಕುರಿತು ಸುದೀರ್ಘ ಸಮಾಲೋಚನೆ ನಡೆದಿದೆ ಎನ್ನಲಾಗಿದೆ. ಈ ಸಂದರ್ಭದಲ್ಲಿ ಸಿದ್ದರಾಮಯ್ಯ ಅವರ ಇತ್ತೀಚಿನ ಚುನಾವಣಾ ರಾಜಕೀಯದಿಂದ ನಿವೃತ್ತಿ ಹೇಳಿಕೆಯೂ ಚರ್ಚೆಗೆ ಬಂದಿದೆ.

ರಾಜಕೀಯ ನಿವೃತ್ತಿ ಕುರಿತು ಪದೇಪದೇ ಮಾತನಾಡುವುದರಿಂದ ಪಕ್ಷ ಹಾಗೂ ಸಾರ್ವಜನಿಕ ವಲಯಕ್ಕೆ ತಪ್ಪು ಸಂದೇಶ ರವಾನೆಯಾಗುವ ಸಾಧ್ಯತೆ ಇದೆ. ಹೀಗಾಗಿ ಮುಂದೆ ಇಂತಹ ಹೇಳಿಕೆಗಳನ್ನು ನೀಡದಿರುವುದು ಸೂಕ್ತ ಎಂದು ರಾಹುಲ್ ಗಾಂಧಿ ಸಲಹೆ ನೀಡಿದ್ದಾರೆ ಎನ್ನಲಾಗಿದೆ.

ಇದಕ್ಕೆ ಪ್ರತಿಕ್ರಿಯಿಸಿರುವ ಸಿದ್ದರಾಮಯ್ಯ, ತಾವು ಚುನಾವಣಾ ರಾಜಕೀಯದಿಂದ ನಿವೃತ್ತಿಯಾಗುವ ಬಗ್ಗೆ ಮಾತ್ರ ಮಾತನಾಡಿದ್ದೇನೆ. ವಯಸ್ಸಿನ ಹಿನ್ನೆಲೆಯಲ್ಲಿ ಮುಂದಿನ ದಿನಗಳಲ್ಲಿ ಚುನಾವಣೆಗೆ ಸ್ಪರ್ಧಿಸುವುದು ಸಾಧ್ಯವಾಗದಿರಬಹುದು. ಆದರೆ ಸಕ್ರಿಯ ರಾಜಕೀಯದಿಂದ ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ. ಪಕ್ಷದ ಚಟುವಟಿಕೆಗಳು ಹಾಗೂ ಸಾರ್ವಜನಿಕ ಜೀವನದಲ್ಲಿ



ಮುಂದುವರಿಯುವುದಾಗಿ ಸ್ಪಷ್ಟಪಡಿಸಿದ್ದಾರೆ ಎನ್ನಲಾಗಿದೆ.

ಆದಾಗ್ಯೂ, ರಾಜಕೀಯ ನಿವೃತ್ತಿ ವಿಚಾರವನ್ನು ಇನ್ನು ಮುಂದೆ ಪ್ರಸ್ತಾಪಿಸದಂತೆ ರಾಹುಲ್ ಗಾಂಧಿ ಮತ್ತೊಮ್ಮೆ ಸಲಹೆ ನೀಡಿದ್ದಾರೆ ಎಂದು ಮೂಲಗಳು ತಿಳಿಸಿವೆ.

**ಜಾತಿ ಗಣತಿ ವರದಿ ಬಿಡುಗಡೆಗೆ ಚರ್ಚೆ**

ಭೇಟಿಯ ಪ್ರಮುಖ ವಿಚಾರಗಳಲ್ಲಿ ಕರ್ನಾಟಕದ ಜಾತಿ ಜನಗಣತಿ ವರದಿ ಕೂಡ ಒಂದಾಗಿದೆ. ರಾಜ್ಯದಲ್ಲಿ ಈಗಾಗಲೇ ಸಿದ್ಧವಾಗಿರುವ ಜಾತಿ ಹಾಗೂ ಸಾಮಾಜಿಕ-ಆರ್ಥಿಕ ಸಮೀಕ್ಷೆಯ ವರದಿಯನ್ನು ಕಾನೂನು ತೊಡಕುಗಳನ್ನು ನಿವಾರಿಸಿ ಶೀಘ್ರ ಬಿಡುಗಡೆ ಮಾಡುವ ಕುರಿತು ಚರ್ಚೆ ನಡೆದಿದೆ. ವರದಿ ಬಿಡುಗಡೆಗೆ ಸಂಬಂಧಿಸಿದ ಕಾನೂನು ಮತ್ತು ಆಡಳಿತಾತ್ಮಕ ಅಡೆತಡೆಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಿ ಮುಂದಿನ ಕ್ರಮ ಕೈಗೊಳ್ಳುವ ಕುರಿತು ಸಮಾಲೋಚನೆ ನಡೆದಿದೆ ಎನ್ನಲಾಗಿದೆ.

**ಸಂಪುಟ ವಿಸ್ತರಣೆಯ ಬಗ್ಗೆಯೂ ಚರ್ಚೆ**

ರಾಜ್ಯ ಸಚಿವ ಸಂಪುಟ ವಿಸ್ತರಣೆ ಹಾಗೂ ಪುನರ್ ರಚನೆಯ ವಿಚಾರವೂ ರಾಹುಲ್ ಗಾಂಧಿ-ಸಿದ್ದರಾಮಯ್ಯ ಭೇಟಿ ವೇಳೆ ಚರ್ಚೆಗೆ ಬಂದಿದೆ. ಸಂಪುಟದಲ್ಲಿ ಅನ್ನಪೂರ್ಣ ತುಕರಾಂ ಹಾಗೂ ಬಸವರಾಜ್ ಶಿವಣ್ಣನವರ್ ಅವರನ್ನು ಸೇರ್ಪಡೆಗೊಳಿಸುವ ಸಾಧ್ಯತೆ ಕುರಿತು ಸಮಾಲೋಚನೆ ನಡೆದಿದೆ ಎಂದು ತಿಳಿದುಬಂದಿದೆ. ಪ್ರಾದೇಶಿಕ ಮತ್ತು ಸಾಮಾಜಿಕ ಸಮತೋಲನ, ಪಕ್ಷದ ಸಂಘಟನಾ ಅಗತ್ಯಗಳು ಸೇರಿದಂತೆ ಹಲವು ಅಂಶಗಳ ಆಧಾರದ ಮೇಲೆ ಸಚಿವ ಸ್ಥಾನ ಹಂಚಿಕೆ ಕುರಿತು ಚರ್ಚೆ ನಡೆದಿದೆ ಎನ್ನಲಾಗಿದೆ.

ಇದರ ಜತೆಗೆ ವಿಧಾನ ಪರಿಷತ್ತಿಗೆ ನೇಮಕಗೊಳ್ಳಬೇಕಿರುವ ಐದು ಸದಸ್ಯರ ಆಯ್ಕೆ ವಿಚಾರವೂ ಚರ್ಚೆಯಾಗಿದೆ. ರಾಜ್ಯದಲ್ಲಿನ ವಿವಿಧ ನಿಗಮ?ಮಂಡಳಿಗಳಿಗೆ ಅಧ್ಯಕ್ಷರು ಹಾಗೂ ಇತರ ಪದಾಧಿಕಾರಿಗಳ ನೇಮಕದ ವಿಚಾರವೂ ಭೇಟಿಯಲ್ಲಿ ಪ್ರಸ್ತಾಪವಾಗಿದೆ. ರಾಹುಲ್ ಗಾಂಧಿ ಭೇಟಿ ಬಳಿಕ ಎಐಸಿಸಿ ಸಂಘಟನಾ ಪ್ರಧಾನ ಕಾರ್ಯದರ್ಶಿ ಕೆ.ಸಿ ವೇಣುಗೋಪಾಲ್ ಅವರನ್ನು ಸಿದ್ದರಾಮಯ್ಯ ಭೇಟಿಯಾದರು.



ಸಿ.ಎಸ್. ಐ ದಕ್ಷಿಣ ಡಯೋಸೀಸ್ ನ ಬಿಷಪ್ ರೈಟ್ ರೆವರೆಂಡ್ ಹೇಮಚಂದ್ರ ನೇತೃತ್ವದ ನಿಯೋಗವು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಶುಕ್ರವಾರ ಗೃಹ ಕಚೇರಿ ಕೃಷ್ಣಾದಲ್ಲಿ ಭೇಟಿಯಾಗಿ ಮಾತುಕತೆ ನಡೆಸಿತು. ಬಿಡಿಎ ಅಧ್ಯಕ್ಷ ಎನ್. ಎ. ಹ್ಯಾರಿಸ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಕಸ್ತೂರಿ ರಂಗನ್ ವರದಿ ಚರ್ಚೆಗೆ ಸೆ.21ರಿಂದ 23ರವರೆಗೆ ವಿಶೇಷ ಅಧಿವೇಶನ

**ಬೆಂಗಳೂರು ಸೆ.11:** ಕಸ್ತೂರಿ ರಂಗನ್ ವರದಿ ವಿಚಾರವಾಗಿ ಚರ್ಚೆ ನಡೆಸಲು ಸೆಪ್ಟೆಂಬರ್ 21 ರಿಂದ 23 ರ ವರೆಗೆ ಮೂರು ದಿನಗಳ ವಿಧಾನಮಂಡಲ ಅಧಿವೇಶನ ಕರೆಯಲಾಗಿದ್ದು, ರೈತರ ಹಿತದೃಷ್ಟಿಯಿಂದ ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು" ಎಂದು ಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ಅರಣ್ಯ ಭವನದಲ್ಲಿ ಶುಕ್ರವಾರ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದರು. ಅಧಿವೇಶನದಲ್ಲಿ ಎಲ್ಲ ಶಾಸಕರು ತಮ್ಮ ಅಭಿಪ್ರಾಯ ಹಾಗೂ ಸಲಹೆಗಳನ್ನು ಮುಕ್ತವಾಗಿ ನೀಡಬೇಕು. ರಾಜ್ಯದ ರೈತರು ಮತ್ತು ಸಾರ್ವಜನಿಕರ ಹಿತದೃಷ್ಟಿಯಿಂದ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದರು.

**ಎಪಿಎಂಸಿ ಭೇಟಿಗೆ ಹೈಕೋರ್ಟ್ ಮೆಚ್ಚುಗೆ**

ಕರ್ನಾಟಕ ಹೈಕೋರ್ಟ್‌ನ ನ್ಯಾಯಾಧೀಶರು ಮುಖ್ಯಮಂತ್ರಿಯವರ ಎಪಿಎಂಸಿ ಭೇಟಿ ಕುರಿತಂತೆ ಮೆಚ್ಚುಗೆ ವ್ಯಕ್ತಪಡಿಸಿದ ಕುರಿತು ಕೇಳಿದಾಗ, "ನಮ್ಮ ಕೆಲಸವನ್ನು ಗುರುತಿಸಿದ ಹೈಕೋರ್ಟ್‌ಗೆ ಕೃತಜ್ಞತೆ ಸಲ್ಲಿಸುತ್ತೇನೆ. ಎಲ್ಲ ಸಚಿವರಿಗೂ ಎಪಿಎಂಸಿಗಳ ಬಗ್ಗೆ ಗಮನ ಹರಿಸುವಂತೆ ಸೂಚಿಸಿದ್ದೇನೆ. ಏಕೆಂದರೆ ಸಾಮಾನ್ಯ ಜನರು ಯಾವುದೇ ಕಾರಣಕ್ಕೂ ತೊಂದರೆ ಅನುಭವಿಸಬಾರದು ಎಂಬುದು ಸರ್ಕಾರದ ನಿಲುವು" ಎಂದರು.

**ವಂದೇ ಮಾತರಂ ವಿಚಾರದಲ್ಲಿ ಕಾಂಗ್ರೆಸ್ ನಿಲುವು ಸ್ಪಷ್ಟ**

ವಂದೇ ಮಾತರಂ ಹಾಡಿನ ವಿಚಾರವಾಗಿ ಕೇಳಿದಾಗ, "ವಂದೇ ಮಾತರಂ ವಿಚಾರದಲ್ಲಿ ಕಾಂಗ್ರೆಸ್ ನಿಲುವು ಬಹಳ ಹಿಂದಿನಿಂದಲೂ ಸ್ಪಷ್ಟವಾಗಿದೆ. ವಂದೇ ಮಾತರಂ, ರಾಷ್ಟ್ರಧ್ವಜ, ರಾಷ್ಟ್ರಗೀತೆ, ಸ್ವಾತಂತ್ರ್ಯ, ಪ್ರಜಾಪ್ರಭುತ್ವ ಮತ್ತು ಸಂವಿಧಾನಕ್ಕೆ ಕಾಂಗ್ರೆಸ್ ಗೌರವ ನೀಡುತ್ತದೆ" ಎಂದು ಹೇಳಿದರು. ನಮ್ಮ ಕ್ಷೇತ್ರದಿಂದ ಗೆದ್ದು ಮುಖ್ಯಮಂತ್ರಿಗಳಾಗಿದ್ದ ರಾಮಕೃಷ್ಣ ಹೆಗಡೆ ಅವರು ತಮ್ಮ ಕಾಲದಲ್ಲಿಯೂ ಅಕ್ರಮ ಬಂದೂಕು ಶಸ್ತ್ರಾಸ್ತ್ರಗಳನ್ನು ಸರ್ಕಾರದ ವಶಕ್ಕೆ ನೀಡಲು ಕರೆ ನೀಡಿದ್ದರು. ಇದರಿಂದ ಸಾವಿರಾರು ಜನ ಮುಂದೆ ಬಂದು ಸರ್ಕಾರದ ವಶಕ್ಕೆ ನೀಡಿದರು" ಎಂದರು.

ಎಐಸಿಸಿ ಸಮಿತಿ ಸದಸ್ಯರಾಗಿ ದೆಹಲಿ ಭೇಟಿ ಸಹಜ: ಡಿಸಿಎಂ ಪರಮೇಶ್ವರ್ ಮಾತನಾಡಿ, ಸಿದ್ದರಾಮಯ್ಯ ಅವರು ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸದಸ್ಯರಾಗಿರುವುದರಿಂದ ದೆಹಲಿಗೆ ತೆರಳಿರುವುದು ಸಹಜ. ಇದಕ್ಕೆ ಬೇರೆ ಯಾವುದೇ ಅರ್ಥ ಕಲ್ಪಿಸಬೇಕಿಲ್ಲ. ಷ್ಟ್ರೀಯ ಹಾಗೂ ರಾಜ್ಯ ರಾಜಕೀಯಕ್ಕೆ ಸಂಬಂಧಿಸಿದ ವಿಚಾರಗಳು, ಲೋಕಸಭೆ ಮತ್ತು ವಿಧಾನಸಭೆ ಚುನಾವಣೆಗಳು ಸೇರಿದಂತೆ ಹಲವು ವಿಷಯಗಳ ಕುರಿತು ಚರ್ಚಿಸಲು ಪಕ್ಷದ ದೆಹಲಿ ನಾಯಕತ್ವವು ಕಾರ್ಯಕಾರಿ ಸಮಿತಿ ಸದಸ್ಯರನ್ನು ಪ್ರತ್ಯೇಕವಾಗಿ ಕರೆಸಿಕೊಳ್ಳುವುದು ವಾಡಿಕೆ. ರಾಜ್ಯಪಾಲರಿಂದ ವಿಧಾನ ಪರಿಷತ್ ಸದಸ್ಯರ ನಾಮನಿರ್ದೇಶನದ ವಿಚಾರವೂ ಚರ್ಚೆಗೆ ಬರಬಹುದು ಎಂದು ತಿಳಿಸಿದ್ದಾರೆ.

**ಅಪೆಕ್ಸ್ ಬ್ಯಾಂಕ್ ನೇಮಕ: ಅಸಮಾಧಾನದ ಪ್ರಶ್ನೆಯೇ ಇಲ್ಲ**

ಇದೇ ವೇಳೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆಪ್ತರಾಗಿರುವ ಎಸ್. ರವಿ ಅವರು ಕರ್ನಾಟಕ ರಾಜ್ಯ ಸಹಕಾರ ಅಪೆಕ್ಸ್ ಬ್ಯಾಂಕ್ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಕುರಿತು ಮಾತನಾಡಿದ ಅವರು, ಚುನಾವಣೆಯಲ್ಲಿ ಸ್ಪರ್ಧೆ ನಡೆಯುವುದಕ್ಕಿಂತ ಅವಿರೋಧ ಆಯ್ಕೆ ಮಾಡುವುದು ಕಾಂಗ್ರೆಸ್‌ನ ಉದ್ದೇಶವಾಗಿತ್ತು ಎಂದರು.ನಮ್ಮ ಪಕ್ಷದ ನಿರ್ಧಾರವೇ ಅಧ್ಯಕ್ಷರನ್ನು ಅವಿರೋಧವಾಗಿ ಆಯ್ಕೆ ಮಾಡಬೇಕು, ಯಾವುದೇ ಚುನಾವಣೆ ನಡೆಯಬಾರದು ಎಂಬುದಾಗಿತ್ತು. ಅಂತಿಮ ಹಂತದಲ್ಲಿ ಎಸ್. ರವಿ ಅವರನ್ನು ಆಯ್ಕೆ ಮಾಡಲಾಯಿತು. ನಿರ್ಣಾಯಕ ಸಭೆಯಲ್ಲಿ ಕೆ.ಎನ್.ರಾಜಣ್ಣ ಅವರು ಉಪಸ್ಥಿತರಿದ್ದು, ಅವರ ಒಪ್ಪಿಗೆಯೊಂದಿಗೆ ನಿರ್ಧಾರ ಕೈಗೊಳ್ಳಲಾಗಿದೆ. ಹೀಗಾಗಿ ಅಸಮಾಧಾನದ ಪ್ರಶ್ನೆಯೇ ಇಲ್ಲ ಎಂದು ಹೇಳಿದರು.

# ನ.1ರೊಳಗೆ ಅಕ್ರಮ ಬಂದೂಕು ಶಸ್ತ್ರಾಸ್ತ್ರಗಳನ್ನು ಸರ್ಕಾರಕ್ಕೆ ಒಪ್ಪಿಸಿ: ಸಿಎಂ ಎಚ್ಚರಿಕೆ

### ಸ್ವಯಂ ಮುಂದಾಗಿ ಒಪ್ಪಿಸಿದರೆ ಪ್ರಕರಣ ದಾಖಲಿಸುವುದಿಲ್ಲ, ಆತ್ಮರಕ್ಷಣೆ, ಪ್ರಾಣಿಗಳ ರಕ್ಷಣೆ ಅಗತ್ಯವಾದರೆ ಪರವಾನಗಿ ಪಡೆಯಿರಿ





**ಬೆಂಗಳೂರು, ಸೆ.11:** ನವೆಂಬರ್ 1ರೊಳಗೆ ಪರವಾನಗಿ ಇಲ್ಲದ ಅಕ್ರಮ ಬಂದೂಕು ಶಸ್ತ್ರಾಸ್ತ್ರಗಳನ್ನು ಸರ್ಕಾರಕ್ಕೆ ಒಪ್ಪಿಸಬೇಕು. ಇಲ್ಲದಿದ್ದರೇ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಎಚ್ಚರಿಸಿದ್ದಾರೆ.

ಮಲ್ಲೇಶ್ವರಂನ ಅರಣ್ಯ ಭವನದಲ್ಲಿ ಶುಕ್ರವಾರ ನಡೆದ ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆಯಲ್ಲಿ ಮಾತನಾಡಿ, ಅಕ್ರಮ ಶಸ್ತ್ರಾಸ್ತ್ರಗಳನ್ನು ತಾವಾಗಿಯೇ ಒಪ್ಪಿಸಿದರೆ ಯಾವುದೇ ಪ್ರಕರಣ ದಾಖಲಿಸುವುದಿಲ್ಲ. ಹೆಚ್ಚಿನ ಅರಣ್ಯ ಇಲಾಖೆ ಸಿಬ್ಬಂದಿಗಳು ಪರವಾನಗಿ ಇಲ್ಲದೇ ಇರುವ ಬಂದೂಕುಗಳಿಂದಲೇ ಜೀವ ಕಳೆದುಕೊಂಡಿದ್ದಾರೆ. ನೀವು ನಿಮ್ಮ ಹಾಗೂ ನಿಮ್ಮ ಪ್ರಾಣಿಗಳ ರಕ್ಷಣೆಗಾಗಿ ಬಂದೂಕು ಇಟ್ಟುಕೊಳ್ಳುವುದಾದರೆ ಪರವಾನಗಿ ಪಡೆಯಿರಿ ಎಂದು ಸಂದೇಶ ನೀಡಿದರು.

ಈ ಹಿಂದೆ ರಾಮಮೂರ್ತಿ ಎನ್ನುವ ಹಿರಿಯ ಅಧಿಕಾರಿ ಅನೇಕರು ಅಕ್ರಮ ನಾಡ ಬಂದೂಕುಗಳನ್ನು ಹೊಂದಿರುವ ಬಗ್ಗೆ ಹೇಳಿದ್ದರು. ಆಗ ನಾನು ನನ್ನ ಕ್ಷೇತ್ರದಲ್ಲಿ 300 ಕ್ಕೂ ಹೆಚ್ಚು ಬಂದೂಕುಗಳನ್ನು ಜನರಿಂದ ಸರ್ಕಾರಕ್ಕೆ ಒಪ್ಪಿಸಿದ್ದೆ. ಇನ್ನೂ ಹೆಚ್ಚಿನ ನಾಡ ಬಂದೂಕುಗಳು ಇರುವ ಬಗ್ಗೆ ಸರ್ಕಾರಕ್ಕೆ ಮಾಹಿತಿಯಿದೆ ಎಂದರು.

ದೇಶದ ಅರಣ್ಯ ಸಂಪತ್ತನ್ನು ಕಾಪಾಡುವವರು ನೀವು. ವನ್ಯಜೀವಿಗಳ ಜೊತೆ ಸಂಘರ್ಷ ಏರ್ಪಟ್ಟು ಅನೇಕ ಸಿಬ್ಬಂದಿಗಳು ಪ್ರಾಣ ತ್ಯಾಗ ಮಾಡಿದ್ದಾರೆ. ಇಲಾಖೆಯ ಸಿಬ್ಬಂದಿಗಳ ಭತ್ಯೆಯ ವಿಚಾರವಾಗಿ ಸಚಿವರ ಮನವಿಯ ಬಗ್ಗೆ ಆಲೋಚಿಸಲಾಗುವುದು. ಆರ್ಥಿಕ ಇಲಾಖೆಯ ಬಳಿ ಚರ್ಚೆ ನಡೆಸಿ ಪೊಲೀಸ್ ಇಲಾಖೆಯನ್ನೂ ಒಳಗೊಂಡಂತೆ ಒಟ್ಟಾಗಿ ತೀರ್ಮಾನ ಮಾಡಲಾಗುವುದು" ಎಂದರು.

ಜನಸಾಮಾನ್ಯರು ಪೊಲೀಸರನ್ನು ಒಪ್ಪಿಕೊಳ್ಳುತ್ತಾರೆ. ಅರಣ್ಯ ಇಲಾಖೆ ಸಿಬ್ಬಂದಿಗಳನ್ನು ಒಪ್ಪುವುದಿಲ್ಲ. ಅರಣ್ಯ ಅಂಚಿನ ಜನರೊಂದಿಗೆ ಸ್ನೇಹದ ವಾತಾವರಣ ನಿರ್ಮಿಸಿಕೊಳ್ಳಿ. ಅರಣ್ಯ ಒತ್ತುವರಿ ಇಂದು ನೆನ್ನೆಯದಲ್ಲ. ಅದನ್ನು ಕಾನೂನು ಪ್ರಕಾರ ಅದನ್ನು ಬಗೆಹರಿಸೋಣ. ಜನರ ಮೇಲೆ ಒತ್ತಡ ಹೇರಬೇಡಿ. ಅರಣ್ಯ ಇಲಾಖೆಯ ಅಧಿಕಾರಿಗಳು ಕೆಲವೊಂದು ವಿಚಾರದಲ್ಲಿ ಅತಿಯಾಗಿ ವರ್ತಿಸುತ್ತೀರಿ. ಅಭಿವೃದ್ಧಿ ಕೆಲಸಗಳಿಗೆ ಅಡ್ಡ ಬರಬಾರದು. ಕೆಲವೊಂದು ವಿನಾಯಿತಿಗಳನ್ನು ನೀಡಬೇಕು" ಎಂದರು.

"ತೇಗದ ಸಿರಿ ಯೋಜನೆ ಯಶಸ್ಸಿಗೆ ಅರಣ್ಯ ಅಧಿಕಾರಿಗಳು ಕೆಲಸ ಮಾಡಬೇಕು. ರೈತರಿಗೆ ಇದರಿಂದ ಹೆಚ್ಚಿನ ಲಾಭವಾಗುತ್ತದೆ. ಅರಣ್ಯ ಇಲಾಖೆಯ ಆದಾಯವನ್ನು ಹೆಚ್ಚು ಮಾಡಿಕೊಳ್ಳುವ ಕಡೆ ಎಲ್ಲರೂ ಗಮನ ಹರಿಸಬೇಕು. ಕಸ್ತೂರಿ ರಂಗನ್ ವರದಿಯನ್ನು ಮೂರು- ನಾಲ್ಕು ಸಲ ವಾಪಸ್ ಕಳುಹಿಸಿದೆವು. ನಮಗೊಂದು ನ್ಯಾಯ, ಕೇರಳಕ್ಕೆ ಒಂದು ನ್ಯಾಯ ನೀಡಲಾಗಿದೆ. ಇದರ ಬಗ್ಗೆ ಚರ್ಚೆ ನಡೆಸಲು ವಿಶೇಷ ಅಧಿವೇಶನ ಕರೆಯಲಾಗುತ್ತದೆ" ಎಂದರು.

ನಗರದಲ್ಲಿರುವ ಅರಣ್ಯ ಇಲಾಖೆಗೆ ಸಂಬಂಧಿಸಿದ ಜಾಗಗಳಲ್ಲಿ ಟ್ರೀ ಪಾರ್ಕ್‌ಗಳನ್ನು ನಿರ್ಮಾಣ ಮಾಡಿ ನಗರದ ಶ್ವಾಸಕೋಶವನ್ನು ಹಿಗ್ಗಿಸುವ ಕೆಲಸ ಮಾಡಲಾಗುವುದು. ಶಾಲಾ ಮಕ್ಕಳಿಂದ ಗಿಡ ನೆಡುವ ಕೆಲಸ ಮಾಡಿಸಲಾಗಿತ್ತು. ಬೆಂಗಳೂರಿನಲ್ಲಿ ಈ ಕಾರ್ಯಕ್ರಮ ಯಶಸ್ವಿಯಾಗಿತ್ತು. ಈ ಕಾರ್ಯಕ್ರಮದ ಬಗ್ಗೆ ಪಾಲಿಕೆಗಳು ಹೆಚ್ಚಿನ ಗಮನ ಹರಿಸಬೇಕು ಎಂದು ಹೇಳಿದ್ದೇನೆ" ಎಂದು ಹೇಳಿದರು.

## ಪಂಚಾಯಿತಿಯಿಂದ ಸಂಸತ್‌ವರೆಗೆ ಹೊಸ ನಾಯಕತ್ವ ಅಗತ್ಯ: ಸಿಎಂ ಡಿ.ಕೆ. ಶಿವಕುಮಾರ್

ಪಂಚಾಯಿತಿಯಿಂದ ಸಂಸತ್ತಿನವರಿಗೆ ಹೊಸ ನಾಯಕತ್ವ ಅಗತ್ಯ. ಅದರಲ್ಲಿಯೂ ಮಹಿಳೆಯರು ನಾಯಕತ್ವ ವಹಿಸಿಕೊಳ್ಳಬೇಕು. ಇದನ್ನು ತಡೆಯಲು ಯಾರಿಗೂ ಸಾಧ್ಯವಿಲ್ಲ ಎಂದು ಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ಮಾಜಿ ಸಚಿವರು ಹಾಗೂ ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ರಾಜ್ಯ ಮುಖ್ಯ ಆಯುಕ್ತ ಪಿ.ಜಿ.ಆರ್. ಸಿಂಧ್ಯಾ ಅವರು ಗೃಹ ಕಚೇರಿ ಕೃಷ್ಣಾದಲ್ಲಿ ಶುಕ್ರವಾರ ಸಿಎಂ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿ ಮಾಡಿದ ಸಂದರ್ಭದಲ್ಲಿ ಮಾತನಾಡಿದರು.

ರಾಜಾಜಿನಗರದ ವಿದ್ಯಾವರ್ಧಕ ಶಾಲೆಯಲ್ಲಿ ಭಾರತ ಸ್ಕೌಟ್ಸ್ ಅಂಡ್ ಗೈಡ್ಸ್‌ನಲ್ಲಿ ಸಕ್ರಿಯವಾಗಿ ಪಾಲ್ಗೊಂಡಿದ್ದೆ. ಸಿಂಧ್ಯಾ ಅವರು ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಇಲಾಖೆ ವತಿಯಿಂದ ನಡೆಯುತ್ತಿರುವ ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ನಲ್ಲಿ ಪಾಲ್ಗೊಂಡಿರುವ ವಿದ್ಯಾರ್ಥಿಗಳಿಗೆ ಇಂಜಿನಿಯರ್ ಹಾಗೂ ವೈದ್ಯಕೀಯ ಸೀಟುಗಳ ಮೀಸಲಾತಿ ಏರಿಕೆ, ನಿವೃತ್ತ ನೌಕರರಿಗೆ ಪಿಂಚಣಿ ಬಿಡುಗಡೆಗೆ ಮನವಿ ಸಲ್ಲಿಸಿದರು. ಧಾರವಾಡ ಮತ್ತು ವಿಜಯಪುರದಲ್ಲಿ ಸ್ಕೌಟ್ಸ್ ಅಂಡ್ ಗೈಡ್ಸ್ ಸ್ಥಳದ ಗುತ್ತಿಗೆ ಅವಧಿ ಮುಗಿದಿದ್ದು ಅವಧಿಯನ್ನು ಮುಂದುವರೆಸಬೇಕೆಂದು ಕೋರಿದರು.

## ಪುಟಿನ್ ಸ್ವಾಗತಿಸಿದ ವಿದೇಶಾಂಗ ಖಾತೆ ರಾಜ್ಯ ಸಚಿವ ಕೀರ್ತಿವರ್ಧನ್‌ಸಿಂಗ್



18ನೇ ಬ್ರಿಕ್ಸ್ ಶೃಂಗಸಭೆಯಲ್ಲಿ ಭಾಗವಹಿಸಲು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರು ಶುಕ್ರವಾರ ನವದೆಹಲಿಗೆ ಆಗಮಿಸಿದರು. ವಿದೇಶಾಂಗ ವ್ಯವಹಾರಗಳ ರಾಜ್ಯ ಸಚಿವ ಕೀರ್ತಿ ವರ್ಧನ್ ಸಿಂಗ್ ಅವರು ವಿಮಾನ ನಿಲ್ದಾಣದಲ್ಲಿ ಅವರನ್ನು ಬರಮಾಡಿಕೊಂಡರು. ತಮ್ಮ ಭೇಟಿಯ ಸಮಯದಲ್ಲಿ, ಅಧ್ಯಕ್ಷ ಪುಟಿನ್ ಅವರು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ ಮತ್ತು ಸರಣಿ ದ್ವಿಪಕ್ಷೀಯ ಸಭೆಗಳಲ್ಲಿ ಭಾಗವಹಿಸಲಿದ್ದಾರೆ. ಭಾರತ ಮತ್ತು ರಷ್ಯಾ ದೇಶಗಳು 'ವಿಶೇಷ ಮತ್ತು ಆದ್ಯತೆಯ ಕಾರ್ಯತಂತ್ರದ ಪಾಲುದಾರಿಕೆ'ಯಲ್ಲಿ ಬೇರೂರಿರುವ ಬಹುಮುಖಿ ಹಾಗೂ ಸುದೀರ್ಘ ಸಂಬಂಧವನ್ನು ಹಂಚಿಕೊಂಡಿವೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ಸೋಶಿಯಲ್ ಮೀಡಿಯಾ ಪೋಸ್ಟ್‌ನಲ್ಲಿ ತಿಳಿಸಿದೆ.

## ಪ್ರಧಾನಿ ಮೋದಿ ಜೊತೆ ದ್ವಿಪಕ್ಷೀಯ ಮಾತುಕತೆ, ಭಾರತ-ರಷ್ಯಾ ಸ್ನೇಹಕ್ಕೆ ಮತ್ತಷ್ಟು ಬಲ..!



**ನವದೆಹಲಿ, ಸೆ.11:** ಭಾರತ ಮಂಟಪದಲ್ಲಿ ಆಯೋಜಿಸಲಾಗಿರುವ ಬ್ರಿಕ್ಸ್ ಶೃಂಗಸಭೆ ಶುಕ್ರವಾರ ಉದ್ಘಾಟನೆಯಾಗಲಿದೆ. ಇದಕ್ಕೂ ಮುನ್ನಾ ಶುಕ್ರವಾರ ಬ್ರಿಕ್ಸ್ ಬಿಸಿನೆಸ್ ಫೋರಂ ಸಭೆ ನಡೆಯಿತು. 'ಗ್ಲೋಬಲ್ ಸೌತ್' (ಅಭಿವೃದ್ಧಿಶೀಲ ರಾಷ್ಟ್ರಗಳ ಒಕ್ಕೂಟ) ವಲಯದಲ್ಲಿ ದಶಕಗಳ ಕಾಲ ಕಂಡುಬಂದ ನಿರಂತರ ಬೆಳವಣಿಗೆಯ ಹಿನ್ನೆಲೆಯಲ್ಲಿ ಜಾಗತಿಕ ಮಟ್ಟದಲ್ಲಿ ಆಗುತ್ತಿರುವ ತೀವ್ರ ಬದಲಾವಣೆಗಳ ನಡುವೆ ಈ ಬ್ರಿಕ್ಸ್ ಸಭೆ ನಡೆಯುತ್ತಿದೆ ಎಂದು ಬ್ರೆಜಿಲ್‌ನ ವಿದೇಶಾಂಗ ಸಚಿವ ಮೌರೊ ವಿಯೆರಾ ಹೇಳಿದರು.

# ಗಾಂಧೀಜಿ, ಪಟೇಲ್, ನೆಹರೂ, ಬೋಸ್‌ಗಿಂತ ಬಿಜೆಪಿಯವರು ದೊಡ್ಡವರೇ: ಸಚಿವ ಪ್ರಿಯಾಂಕ್ ಖರ್ಗೆ ಸವಾಲು

**ಬೆಂಗಳೂರು, ಸೆ.11:** ರಾಷ್ಟ್ರಗೀತೆ ವಂದೇ ಮಾತರಂ ಗಾಯನ ಹಾಗೂ ಭಾರತದ ವಿದೇಶಾಂಗ ನೀತಿಯ ವೈಫಲ್ಯಗಳ ಕುರಿತು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಕೇಂದ್ರ ಬಿಜೆಪಿ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ವಂದೇ ಮಾತರಂ ಗೀತೆಯ 2 ಚರಣಗಳನ್ನು ಮಾತ್ರ ಹಾಡಲು ಕರ್ನಾಟಕ ಸರ್ಕಾರದ ನಿರ್ಧಾರ ಬಗ್ಗೆ ಪ್ರತಿಕ್ರಿಯಿಸಿದ ಅವರು, 1937ರಲ್ಲೇ ಸರ್ದಾರ್ ವಲ್ಲಭಭಾಯಿ ಪಟೇಲ್, ಜವಾಹರಲಾಲ್ ನೆಹರೂ, ಮಹಾತ್ಮ ಗಾಂಧೀಜಿ, ಸುಭಾಷ್ ಚಂದ್ರ ಬೋಸ್ ಹಾಗೂ ರವೀಂದ್ರನಾಥ ಟ್ಯಾಗೋರ್ ಸೇರಿ 8 ರಾಷ್ಟ್ರನಾಯಕರು ಸಭೆ ಸೇರಿ ಎರಡು ಚರಣಗಳನ್ನು ಹಾಡಲು ನಿರ್ಧರಿಸಿದ್ದರು. ಇವರಿಗಿಂತ ಬಿಜೆಪಿಯವರು ದೊಡ್ಡವರಾ ಎಂದು ಪ್ರಶ್ನಿಸಿದ್ದಾರೆ.

ಕಳೆದ 10 ವರ್ಷಗಳಿಂದ ಹಾಗೂ ಈ ಹಿಂದೆ ವಾಜಪೇಯಿ ಅವರ ಕಾಲದಲ್ಲಿ ಅಧಿಕಾರದಲ್ಲಿದ್ದಾಗ ಬಿಜೆಪಿ ಈ ನಿಯಮ ಬದಲಾಯಿಸಲು ಏಕೆ ಮುಂದಾಗಲಿಲ್ಲ ಎಂದು ಪ್ರಶ್ನಿಸಿದ ಅವರು, ಸ್ವಾತಂತ್ರ್ಯ



ಸಂಗ್ರಾಮದಲ್ಲಿ ಬಿಜೆಪಿ ಮತ್ತು ಆರ್‌ಎಸ್‌ಎಸ್ ಕೊಡುಗೆ ಶೂನ್ಯ. ನೇತಾಜಿ ಸುಭಾಷ್ ಚಂದ್ರ ಬೋಸ್ ಬ್ರಿಟಿಷರ ವಿರುದ್ಧ ಸೇನೆ ಕಟ್ಟುತ್ತಿದ್ದ ಸಂದರ್ಭದಲ್ಲಿ ಆರ್‌ಎಸ್‌ಎಸ್ ಹಾಗೂ ಸಾವರ್ಕರ್ ಬ್ರಿಟಿಷ್ ಸೇನೆಗೆ ಜನರನ್ನು ಸೇರಿಸುತ್ತಿದ್ದರು. ಬ್ರಿಟಿಷರಿಂದ 60 ರೂಪಾಯಿ ಪಿಂಚಣಿ ಪಡೆಯುತ್ತಿದ್ದವರಿಂದ ಇಂದು ನಾವು ದೇಶಭಕ್ತಿಯ ಪಾಠ ಕಲಿಯಬೇಕಾಗಿಲ್ಲ ಎಂದು ವ್ಯಂಗ್ಯವಾಡಿದರು.

**ವಿದೇಶಾಂಗ ಸಚಿವ ಅಸಹಾಯಕತೆ**

ಬ್ರಿಕ್ಸ್ ಶೃಂಗಸಭೆ ಹಾಗೂ ಚೀನಾ ವಿಚಾರವಾಗಿ ಪ್ರಧಾನಿ ನರೇಂದ್ರ ಮೋದಿ ಅವರ ವಿದೇಶಾಂಗ ನೀತಿಯನ್ನು ತರಾಟೆಗೆ ತೆಗೆದುಕೊಂಡ ಅವರು, ಮೋದಿಯವರು ಈ ಹಿಂದೆ ಚೀನಾ ಅಧ್ಯಕ್ಷರ ಜೊತೆ ಗುಜರಾತ್‌ನಲ್ಲಿ ಜೋಕಾಲಿ ಆಡಿದರು, ಮಹಾಬಲಿಪುರಂನಲ್ಲಿ ಮಾತುಕತೆ ನಡೆಸಿದರು. ಆದರೆ ಇಂದು ಚೀನಾ ಅರುಣಾಚಲ ಪ್ರದೇಶವನ್ನು ಕಬಳಿಸುತ್ತಿದೆ, ಭಾರತದ ಗಡಿಯೊಳಗೆ ಗ್ರಾಮಗಳನ್ನು ನಿರ್ಮಿಸುತ್ತಿದೆ ಎಂದು ವಾಗ್ದಾಳಿ ನಡೆಸಿದರು. ನಮ್ಮ ವಿದೇಶಾಂಗ ಸಚಿವರೇ ದೊಡ್ಡ ಆರ್ಥಿಕತೆ ಜೊತೆ ಜಗಳವಾಡಲು ಸಾಧ್ಯವೇ ಎಂದು ಅಸಹಾಯಕತೆ ವ್ಯಕ್ತಪಡಿಸುತ್ತಾರೆ. ಮೋದಿಯವರ 56 ಇಂಚಿನ ಎದೆಗಾರಿಕೆ ಕೇವಲ ಕಾಂಗ್ರೆಸ್ ಪಕ್ಷದ ವಿರುದ್ಧ ತೋರಿಸುವುದಕ್ಕಷ್ಟೇ ಸೀಮಿತವೇ. ದೇಶದ ಶತ್ರುಗಳ ಮುಂದೆ ಆ ಶಕ್ತಿ ಏಕೆ ಕಾಣಿಸುವುದಿಲ್ಲ ಎಂದು ಖಾರವಾಗಿ ಪ್ರಶ್ನಿಸಿದರು. ಇಂತಹ ರೇಡ್‌ಗಳನ್ನು ನಡೆಸಲಾಗುತ್ತಿದ್ದು, ಇದು ಪ್ರಜಾಪ್ರಭುತ್ವ ವಿರೋಧಿ ನಡೆ ಎಂದು ಅವರು ಆಕ್ರೋಶ ಹೊರಹಾಕಿದ್ದಾರೆ.

## ಬೆದರಿಕೆ, ರಾಜಕೀಯ ತಂತ್ರಗಳಿಗೆ ಹೆದರುವುದಿಲ್ಲ

ರಾಜ್ಯ ಕಾಂಗ್ರೆಸ್ ಸರ್ಕಾರದ ಹಲವು ಸಚಿವರು ಸದ್ಯದಲ್ಲೇ ಸಚಿವ ಸಂಪುಟದಿಂದ ಹೊರಬೀಳಲಿದ್ದಾರೆ ಎಂಬ ಬಿಜೆಪಿ ನಾಯಕರ ಹೇಳಿಕೆ ಸಚಿವ ಪ್ರಿಯಾಂಕ್ ಖರ್ಗೆ ತಿರುಗೇಟು ನೀಡಿದ್ದಾರೆ. ಈ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮುಂಬರುವ ವಿಧಾನಮಂಡಲ ಅಧಿವೇಶನದಲ್ಲಿ ಸೂಕ್ತ ದಾಖಲೆಗಳನ್ನು ಪ್ರಸ್ತುತಪಡಿಸಿ, ತಾಕತ್ತಿದ್ದರೆ ಸಚಿವರ ರಾಜೀನಾಮೆ ಪಡೆಯಲಿ ಎಂದು ಬಿಜೆಪಿ ಹಾಗೂ ಜೆಡಿಎಸ್‌ಗೆ ಬಹಿರಂಗ ಸವಾಲು ಹಾಕಿದ್ದರೆ. ಆರ್‌ಎಸ್‌ಎಸ್ ಮತ್ತು ಬಿಜೆಪಿ ರೂಪಿಸಿರುವ ಹಿಟ್‌ಲಿಸ್ಟ್‌ನಲ್ಲಿ ತಾವೇ ಮೊದಲ ಸ್ಥಾನದಲ್ಲಿದ್ದರೂ, ಇಂತಹ ಬೆದರಿಕೆಗಳು ಅಥವಾ ರಾಜಕೀಯ ತಂತ್ರಗಳಿಗೆ ತಲೆಬಾಗುವುದಿಲ್ಲ ಎಂದಿದ್ದಾರೆ. ಸಚಿವ ಸತೀಶ್ ಜಾರಕಿಹೊಳಿ ಅವರ ವಿರುದ್ಧ ಇಡಿ ದಾಳಿ ನಡೆದಿರುವುದಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿದ ಪ್ರಿಯಾಂಕ್ ಖರ್ಗೆ, ಈ ದಾಳಿಯು ಕೇವಲ ರಾಜಕೀಯ ಪ್ರೇರಿತವಾಗಿದ್ದು, ಕೇಂದ್ರದ ಆಡಳಿತಾರೂಢ ಬಿಜೆಪಿಯು ತನಿಖಾ ಸಂಸ್ಥೆಗಳನ್ನು ದುರ್ಬಳಕೆ ಮಾಡಿಕೊಳ್ಳುತ್ತಿದೆ ಎಂದು ಆರೋಪಿಸಿದ್ದಾರೆ. ವಿರೋಧ ಪಕ್ಷಗಳ ನಾಯಕರನ್ನು ಗುರಿಯಾಗಿಸಿಕೊಂಡು

## ದೇಶಕ್ಕೆ ವಂದೇಮಾತರಂ ಕೊಟ್ಟಿದ್ದೇ ಕಾಂಗ್ರೆಸ್




**ಬೆಂಗಳೂರು, ಸೆ.11:** ವಂದೇ ಮಾತರಂ, ನಾವು ಹಾಡುವುದು ಎರಡೇ ಸಾಲು. ಈ ಗೀತೆಯನ್ನು ದೇಶಕ್ಕೆ ಕೊಟ್ಟಿದ್ದೇ ಕಾಂಗ್ರೆಸ್ ಪಕ್ಷ. ನಮಗೆ ಇವರು ಹೇಳಿಕೊಡೋ ಅವಶ್ಯಕತೆ ಇಲ್ಲ ಎಂದು ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಪೊನ್ನಣ್ಣ ಹೇಳಿದರು. ವಂದೇ ಮಾತರಂ ಪ್ರಾರಂಭ ಆಗಿದ್ದು ಯಾರಿಂದ ಎಲ್ಲಿಂದ ಪ್ರಾರಂಭ ಆಯ್ತು?, ಅದಕ್ಕೆ ಭಾರತೀಯ ಜನತಾ ಪಕ್ಷ ಕೊಡುಗೆ ಏನಿದೆ?, ಯಾವುದೇ ಒಂದು ರಾಷ್ಟ್ರವಾದದ ಪರ ನಿಲುವು ಏನಿದೆ ಅದೆಲ್ಲ ನಮ್ಮದೇ ಅಂತ ಹೇಳೋದು ಬಿಜೆಪಿಯವರು ರಾಷ್ಟ್ರ ಸಂಕಷ್ಟದಲ್ಲಿ ಇದ್ದಾಗ ಸ್ವತಂತ್ರ ಹೋರಾಟದಲ್ಲಿ ಒಬ್ಬರು ಕೂಡ ಇವರು ಭಾಗವಹಿಸಿದವರು ಅಲ್ಲ ಈಗ ವೇದಿಕೆ ಮೇಲೆ ಬಂದು, ಎಲ್ಲ ನಾವೇ, ಎಲ್ಲವೂ ನಮ್ಮದು ಅಂತ ಹೇಳ್ತಾರೆ ಎಂದು ಟೀಕಿಸಿದರು.

# ಎದೆಗುಂದಬೇಡಿ, ಧೈರ್ಯವಾಗಿರಿ: ಇ.ಡಿ. ದಾಳಿ ಬೆನ್ನಲ್ಲೇ ಜಾರಕಿಹೊಳಿಗೆ ಕಾಂಗ್ರೆಸ್ ನಾಯಕರ ಅಭಯ

**ಬೆಂಗಳೂರು, ಸೆ.11:** ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರ ನಿವಾಸದ ಮೇಲೆ ಇಡಿ ದಾಳಿಯ ಬೆನ್ನಲ್ಲೇ ಕಾಂಗ್ರೆಸ್ ನಾಯಕರು ಸಚಿವರ ನಿವಾಸಕ್ಕೆ ಸಿಎಂ ಡಿ.ಕೆ. ಶಿವಕುಮಾರ್ ಸೇರಿದಂತೆ ಸಚಿವರು ಹಾಗೂ ಕೈ ನಾಯಕರು ಭೇಟಿ ನೀಡಿ ಮಾತುಕತೆ ನಡೆಸಿದ್ದು, ಧೈರ್ಯದಿಂದಿರುವಂತೆ ಬೆಂಬಲಕ್ಕೆ ನಿಂತಿದ್ದಾರೆ.

ಗುರುವಾರ ತಡರಾತ್ರಿ ಸ್ವತಃ ಸಿಎಂ ಡಿ.ಕೆ. ಶಿವಕುಮಾರ್ ಅವರು



ಜಾರಕಿಹೊಳಿ ನಿವಾಸಕ್ಕೆ ತೆರಳಿ ಮಾತುಕತೆ ನಡೆಸಿದರು.

ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್, ಸಚಿವರು ಮತ್ತು ಇತರ ನಾಯಕರು ಬೆಂಗಳೂರಿನ ಕ್ರೆಸೆಂಟ್ ರಸ್ತೆಯಲ್ಲಿರುವ ಸತೀಶ್ ಜಾರಕಿಹೊಳಿ ನಿವಾಸಕ್ಕೆ ತೆರಳಿ ಮಾತುಕತೆ ನಡೆಸಿದರು. ಸತೀಶ್ ಜಾರಕಿಹೊಳಿ ಅವರ ನಿವಾಸದ ಮೇಲೆ ದಾಳಿ ನಡೆಸಿದ ಇ.ಡಿ. ಅಧಿಕಾರಿಗಳು ದೊಡ್ಡ ಪ್ರಮಾಣದ ಹಣವನ್ನು ಸೀಜ್ ಮಾಡಿದ್ದಲ್ಲದೆ, ಕೆಲವೊಂದು ಮಹತ್ವದ ದಾಖಲೆಗಳನ್ನು ಸಂಗ್ರಹ ಮಾಡಿದೆ.

ಇಡಿ ದಾಳಿ ಮುಕ್ತಾಯಗೊಂಡ ಬೆನ್ನಲ್ಲೇ ಕೆಪಿಸಿಸಿ ಅಧ್ಯಕ್ಷ ಬಿಕೆ ಹರಿಪ್ರಸಾದ್ ಸೇರಿದಂತೆ ಹಿರಿಯ ಸಚಿವರು, ಶಾಸಕರು ಜಾರಕಿಹೊಳಿ ನಿವಾಸಕ್ಕೆ ತೆರಳಿ ಮಾತುಕತೆ ನಡೆಸಿ ಧೈರ್ಯ ತುಂಬಿದ್ದಾರೆ. ಬಳಿಕ ಸ್ವತಃ ಡಿಕೆ ಶಿವಕುಮಾರ್ ಅವರು ತಡ ರಾತ್ರಿ ಒಂದು ಗಂಟೆ ಸುಮಾರಿಗೆ ಸತೀಶ್ ಮನೆಗೆ ಭೇಟಿ ನೀಡಿದ್ದಾರೆ. ಜಾರಕಿಹೊಳಿ ಅವರ ಸರ್ಕಾರಿ ನಿವಾಸಕ್ಕೆ ಆಗಮಿಸಿದ ಡಿಕೆಶಿ ಸುಮಾರು ಒಂದು ಗಂಟೆಗಳ ಕಾಲ ಮಾತುಕತೆ ನಡೆಸಿದ್ದಾರೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363



ಶ್ರೀ ಡಿ.ಕೆ. ಶಿವಕುಮಾರ್
ಸನ್ಮಾನ್ಯ ಮುಖ್ಯಮಂತ್ರಿಗಳು



ಶ್ರೀ ಸಿದ್ದರಾಮಯ್ಯ
ಮಾನ್ಯ ನಿಕಟಪೂರ್ವ ಮುಖ್ಯಮಂತ್ರಿಗಳು



ಡಾ. ಜಿ. ಪರಮೇಶ್ವರ
ಮಾನ್ಯ ಉಪ ಮುಖ್ಯಮಂತ್ರಿಗಳು

# ದಿಟ್ಟ ನುಡಿ, ಖಚಿತ ನಡೆ, ಸ್ಪಷ್ಟ ಗುರಿ
# ದೃಢ ಕರ್ನಾಟಕದ ಸಂಕಲ್ಪ

## ಪ್ರತಿ ವಿದ್ಯಾರ್ಥಿಗೂ ಉಚಿತ ಬಸ್ ಪಾಸ್




- ವಿದ್ಯಾರ್ಥಿಗಳು ಕರ್ನಾಟಕ ಸರ್ಕಾರದ ಸೇವಾ ಸಿಂಧು ಪೋರ್ಟಲ್‌ನಲ್ಲಿ ಶಾಲೆಗಳು ಸೇರಿದಂತೆ ಎಲ್ಲಿಂದಲಾದರೂ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಕೆಗೆ ಅವಕಾಶ
- ಈಗಾಗಲೇ ವಿದ್ಯಾರ್ಥಿಗಳಿಗೆ ವಿತರಿಸಿದ ಬಸ್ ಪಾಸ್‌ಗಳು ಯಥಾವತ್ತಾಗಿ ಚಾಲ್ತಿಯಲ್ಲಿರಲಿವೆ. ಆದಾಗ್ಯೂ ವಿದ್ಯಾರ್ಥಿಗಳು ಪಾವತಿಸಿರುವ ಮೊತ್ತ ಹಿಂತಿರಿಗಿಸಲು ಸಾರಿಗೆ ನಿಗಮಗಳಿಗೆ ಸೂಚನೆ
- ಉಚಿತ ಬಸ್ ಪಾಸ್ ಯೋಜನೆ ಜಾರಿಯಾಗುವುದರಿಂದ ಶುಲ್ಕ ಪಡೆದು ವಿತರಿಸಲಾದ ಪಾಸುಗಳ ಸಂಪೂರ್ಣ ಶುಲ್ಕ 15 ದಿನಗಳೊಳಗಾಗಿ ವಿದ್ಯಾರ್ಥಿಗಳಿಗೆ ಮರುಪಾವತಿಗೆ ಕ್ರಮ
- ರಾಜ್ಯದಲ್ಲಿ ವಾಸವಿದ್ದು, ನೆರೆ ರಾಜ್ಯಗಳಲ್ಲಿನ ವಿದ್ಯಾ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಾಗೂ ನೆರೆ ರಾಜ್ಯಗಳಲ್ಲಿ (ರಾಜ್ಯದ ಗಡಿಭಾಗದಲ್ಲಿ) ವಾಸವಿದ್ದು, ರಾಜ್ಯದೊಳಗಿನ ವಿದ್ಯಾ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೂ ಉಚಿತ ಬಸ್ ಪಾಸ್ ಸೌಲಭ್ಯ
- ರಾಜ್ಯದ ಎಲ್ಲ ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ಸೌಲಭ್ಯ ಒದಗಿಸುವ ಮೂಲಕ ಪೋಷಕರ ಮೇಲಿನ ಶೈಕ್ಷಣಿಕ ವೆಚ್ಚದ ಹೊರೆಯನ್ನು ಇಳಿಸಿ ಅವರ ಬದುಕಿಗೆ ಆರ್ಥಿಕ ಚೈತನ್ಯ ನೀಡಿದ ರಾಜ್ಯ ಸರ್ಕಾರ



ಸನ್ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಡಿ.ಕೆ. ಶಿವಕುಮಾರ್ ಅವರೊಂದಿಗೆ ಮಾನ್ಯ ಸಾರಿಗೆ ಸಚಿವರಾದ ಶ್ರೀ ಬಿ.ಎಸ್. ಸುರೇಶ (ಬೈರತಿ).



ದೃಢ ಕರ್ನಾಟಕದ ಸಂಕಲ್ಪ
ಶತಕದ ಪಥ ಪ್ರಗತಿಯ ರಥ

## ಕಲಿಕೆಗೆ ಬಲ, ಕನಸಿಗೆ ವೇಗ

## 100 ದಿನ - 100 ಹೆಜ್ಜೆ - ಒಂದೇ ಸಂಕಲ್ಪ

ಗೃಹಲಕ್ಷ್ಮಿ  ಅನ್ನಭಾಗ್ಯ  ಗೃಹ ಜ್ಯೋತಿ  ಯುವನಿಧಿ  ಶಕ್ತಿ

ನಮ್ಮ ವೈವಿಧ್ಯಮಯ ಸಂಸ್ಕೃತಿ ಮತ್ತು ಪರಂಪರೆಯನ್ನು ಗೌರವಿಸುವುದು ಮತ್ತು ಕಾಪಾಡುವುದು ಪ್ರತಿಯೊಬ್ಬ ಭಾರತೀಯರ ಸಂವಿಧಾನಬದ್ಧ ಮೂಲಭೂತ ಕರ್ತವ್ಯ.

CMofKarnataka  https://dipr.karnataka.gov.in/  Karnatakavarthe  ಕರ್ನಾಟಕ ವಾರ್ತೆ

# ಜಿನ್‌ಪಿಂಗ್ ಭೇಟಿ: ಚೀನಾ ಗಡಿ ಅತಿಕ್ರಮಣ ಪ್ರಶ್ನಿಸುವರೇ ಮೋದಿ?



**ನವದೆಹಲಿ, ಸೆ. 11:** ನವದೆಹಲಿಯಲ್ಲಿ ನಡೆಯುತ್ತಿರುವ ಬ್ರಿಕ್ಸ್ ಶೃಂಗಸಭೆಯ ಹಿನ್ನೆಲೆಯಲ್ಲಿ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಮತ್ತು ಚೀನಾ ಅಧ್ಯಕ್ಷ ಷಿ ಜಿನ್‌ಪಿಂಗ್ ಅವರೊಂದಿಗಿನ ಪ್ರಧಾನಿ ನರೇಂದ್ರ ಮೋದಿ ಅವರ ದ್ವಿಪಕ್ಷೀಯ ಭೇಟಿಗೆ ವೇದಿಕೆ ಸಜ್ಜಾಗಿದೆ. ಆದರೆ, ರಾಜಧಾನಿಯಲ್ಲಿ ನಡೆಯುವ ಈ ಉನ್ನತ ಮಟ್ಟದ ರಾಜತಾಂತ್ರಿಕ ಮಾತುಕತೆಯ ವೇಳೆ, ವಿಶೇಷವಾಗಿ ಜಿನ್‌ಪಿಂಗ್ ಎದುರು ಗಡಿಯಲ್ಲಿ ಚೀನಾ ಮಾಡಿಕೊಂಡಿರುವ ಭಾರಿ ಅತಿಕ್ರಮಣದ ವಿಷಯ ಪ್ರಸ್ತಾಪವಾಗಲಿದೆಯೇ ಎಂಬುದು ಅತಿ ದೊಡ್ಡ ಪ್ರಶ್ನೆಯಾಗಿದೆ.

ಕಳೆದ ಒಂದು ದಶಕದಿಂದ ಗಡಿ ರಕ್ಷಣೆಯ ವಿಚಾರದಲ್ಲಿ ವಾಸ್ತವವನ್ನು ಮುಚ್ಚಿಡುವ, ಚೀನಾದ ಆಕ್ರಮಣಕಾರಿ ನೀತಿಗಳ ಮುಂದೆ ಮೌನ ವಹಿಸುವ ಮತ್ತು ದೇಶದ ಜನರಿಗೆ ತಪ್ಪು ಮಾಹಿತಿ ನೀಡುವ ಮೂಲಕ ಮೋದಿ ಸರ್ಕಾರ ತೀವ್ರ ರಾಜತಾಂತ್ರಿಕ ವೈಫಲ್ಯ ಅನುಭವಿಸಿದೆ. ಹೀಗಾಗಿ ಈ ಶೃಂಗಸಭೆಯಲ್ಲೂ ಗಡಿ ಪ್ರಶ್ನೆ ನೇಪಥ್ಯಕ್ಕೆ ಸರಿಯುವ ಆತಂಕ ಎದುರಾಗಿದೆ.

ವಾಸ್ತವವಾಗಿ ಗಡಿಯಲ್ಲಿ ಭಾರತ ಭಾರೀ ಬೆಲೆ ತೆತ್ತಿದೆ. 2023ರಲ್ಲಿ ನವದೆಹಲಿಯಲ್ಲಿ ನಡೆದ ಪೊಲೀಸ್ ಮಹಾನಿರ್ದೇಶಕರ ಸಮಾವೇಶದ ಅಧಿಕೃತ ವರದಿಯೇ ಮೋದಿ ಸರ್ಕಾರದ ವೈಫಲ್ಯವನ್ನು ಬೆತ್ತಲೆಗೊಳಿಸಿತ್ತು. ಪೂರ್ವ ಲಡಾಖ್‌ನಲ್ಲಿ ಭಾರತೀಯ ಸೇನೆ ಸಾಂಪ್ರದಾಯಿಕವಾಗಿ ಗಸ್ತು ತಿರುಗುತ್ತಿದ್ದ 65 ಗಸ್ತು ಬಿಂದುಗಳ ಪೈಕಿ ಬರೋಬ್ಬರಿ 26 ಪಾಯಿಂಟ್‌ಗಳಲ್ಲಿ ಭಾರತ ತನ್ನ ನಿಯಂತ್ರಣ ಹಾಗೂ ಗಸ್ತು ಹಕ್ಕನ್ನೇ ಸಂಪೂರ್ಣವಾಗಿ ಕಳೆದುಕೊಂಡಿದೆ ಎಂದು ವರದಿಯಲ್ಲಿ ಸ್ಪಷ್ಟವಾಗಿ ಉಲ್ಲೇಖಿಸಲಾಗಿತ್ತು.

ಇನ್ನು ಗಲ್ವಾನ್, ಪ್ಯಾಂಗಾಂಗ್ ತ್ಸೋ, ಡೆಪ್ಸಾಂಗ್ ಸೇರಿದಂತೆ ಹಲವೆಡೆ ಉದ್ವಿಗ್ನತೆ ಶಮನದ ಹೆಸರಿನಲ್ಲಿ ಬಫರ್ ಜೋನ್ (ತಟಸ್ಥ ವಲಯ) ರಚಿಸಲಾಗಿದೆ. ಇದರ ಪರಿಣಾಮವಾಗಿ, ಭಾರತವು ತನ್ನದೇ ಭೂಭಾಗದ ಸುಮಾರು 1,000 ದಿಂದ 2,000 ಚದರ ಕಿಲೋಮೀಟರ್ ವ್ಯಾಪ್ತಿಯ ಸಾಂಪ್ರದಾಯಿಕ ಗಸ್ತು ಹಕ್ಕನ್ನು ಚೀನಾಕ್ಕೆ ಬಿಟ್ಟುಕೊಟ್ಟಂತಾಗಿದೆ ಎಂದು ಅಜಯ್ ಶುಕ್ಲಾ ಅವರಂತಹ ರಕ್ಷಣಾ ವಿಶ್ಲೇಷಕರು ಅಂಕಿ–ಅಂಶಗಳ ಸಮೇತ ಆರೋಪಿಸಿದ್ದಾರೆ.

ರಾಜತಾಂತ್ರಿಕವಾಗಿಯೂ ಕೇಂದ್ರ ಸರ್ಕಾರ ಚೀನಾಕ್ಕೆ ಶರಣಾದಂತೆ ವರ್ತಿಸುತ್ತಿದೆ ಎಂಬುದು ಪ್ರಮುಖ ಟೀಕೆ. 2020ರ ಗಲ್ವಾನ್ ಸಂಘರ್ಷದಲ್ಲಿ 20 ಯೋಧರು ಹುತಾತ್ಮರಾದಾಗ, ಪ್ರಧಾನಿ ಮೋದಿಯವರು ನಮ್ಮ ಗಡಿಯೊಳಗೆ ಯಾರೂ ನುಗ್ಗಿಲ್ಲ ಎಂದು ನೀಡಿದ್ದ ಹೇಳಿಕೆಯನ್ನೇ ಚೀನಾ ತನಗೆ ಸಿಕ್ಕ ಕ್ಲೀನ್ ಚಿಟ್ ಎಂದು ಜಾಗತಿಕ ಮಟ್ಟದಲ್ಲಿ ಬಳಸಿಕೊಂಡಿತು. ಪ್ರಧಾನಿಯವರ ಈ ರಕ್ಷಣಾತ್ಮಕ ಹೇಳಿಕೆ ಭಾರತದ ರಾಜತಾಂತ್ರಿಕ ಹೋರಾಟವನ್ನೇ ದುರ್ಬಲಗೊಳಿಸಿತು. ಅಷ್ಟೇ ಅಲ್ಲ, ಉನ್ನತ ನಾಯಕರು ಸಾರ್ವಜನಿಕ ವೇದಿಕೆಗಳಲ್ಲಿ ಚೀನಾ ಎಂಬ ಹೆಸರನ್ನು ನೇರವಾಗಿ ಉಲ್ಲೇಖಿಸಲು ಹಿಂದೇಟು ಹಾಕುವಂತಹ ನೀತಿ ಸರ್ಕಾರದ ಕಾರ್ಯವೈಖರಿಯನ್ನು ಪ್ರಶ್ನಿಸುವಂತೆ ಮಾಡಿದೆ.

ಅರುಣಾಚಲ ಪ್ರದೇಶದಲ್ಲೂ ಚೀನಾದ ಅತಿಕ್ರಮಣ ಎಗ್ಗಿಲ್ಲದೆ ಸಾಗಿದೆ. ಅಪ್ಪರ್ ಸುಬನ್ಸಿರಿ ಜಿಲ್ಲೆಯ ತ್ಸಾರಿ ಚು ನದಿ ದಂಡೆಯ ಆಯಕಟ್ಟಿನ ಪ್ರದೇಶದಲ್ಲಿ ಚೀನಾ 100ಕ್ಕೂ ಹೆಚ್ಚು ಮನೆಗಳುಳ್ಳ ಕ್ಸಿಯಾವೊಕಾಂಗ್ (ಮಾದರಿ ಗ್ರಾಮ) ಮತ್ತು ಸೇನಾ ಮೂಲಸೌಕರ್ಯಗಳನ್ನು ನಿರ್ಮಿಸಿದೆ. ಸ್ವತಃ ಅರುಣಾಚಲ ಪ್ರದೇಶದ ಬಿಜೆಪಿ ಸಂಸದ ತಾಪಿರ್ ಗಾವೋ ಸಂಸತ್ತಿನಲ್ಲಿ ಈ ಬಗ್ಗೆ ಆತಂಕ ವ್ಯಕ್ತಪಡಿಸಿದ್ದರೂ, ಮೋದಿ ಸರ್ಕಾರ ಕಣ್ಮುಚ್ಚಿ ಕುಳಿತಿದೆ. ಉಪಗ್ರಹ ಚಿತ್ರಗಳು ಹಾಗೂ ಅಮೆರಿಕದ ಪೆಂಟಗನ್ ವರದಿಗಳು ಚೀನಾದ ಈ ನಿಧಾನಗತಿಯ ಅತಿಕ್ರಮಣವನ್ನು ಸಾಬೀತುಪಡಿಸಿದರೂ ಕೇಂದ್ರ ಸರ್ಕಾರ ಅದನ್ನು ಕಟ್ಟುನಿಟ್ಟಾಗಿ ವಿರೋಧಿಸುವ ಧೈರ್ಯ ತೋರಿಲ್ಲ.

ಗಡಿಯಲ್ಲಿ ಇಷ್ಟೆಲ್ಲಾ ಸೇನಾ ದುಸ್ಸಾಹಸ ನಡೆಯುತ್ತಿದ್ದರೂ ದೇಶದ ಸಂಸತ್ತಿನಲ್ಲಿ (ನಿಯಮ 267ರ ಅಡಿಯಲ್ಲಿ) ಈ ಬಗ್ಗೆ ವಿಸ್ತೃತ ಚರ್ಚೆ ನಡೆಸಲು ಸರ್ಕಾರ ನಿರಂತರವಾಗಿ ನಿರಾಕರಿಸುತ್ತಲೇ ಬಂದಿದೆ. ಮತ್ತೊಂದೆಡೆ, ಆರ್ಥಿಕವಾಗಿ ಚೀನಾಕ್ಕೆ ಕಡಿವಾಣ ಹಾಕುವಲ್ಲೂ ಸರ್ಕಾರ ಸಂಪೂರ್ಣ ವಿಫಲವಾಗಿದೆ. ಆ್ಯಪ್‌ಗಳ ನಿಷೇಧದಂತಹ ಕೇವಲ ಸಾಂಕೇತಿಕ ಕ್ರಮಗಳನ್ನು ಕೈಗೊಂಡ ಸರ್ಕಾರ, ದ್ವಿಪಕ್ಷೀಯ ವ್ಯಾಪಾರದಲ್ಲಿ ದಾಖಲೆಯ 100 ಶತಕೋಟಿ ಡಾಲರ್ (8.4 ಲಕ್ಷ ಕೋಟಿ) ವ್ಯಾಪಾರ ಕೊರತೆ ಉಂಟಾಗುವಂತೆ ಮಾಡಿದೆ.

ಈ ಎಲ್ಲಾ ನಕಾರಾತ್ಮಕ ಬೆಳವಣಿಗೆಗಳು ಮತ್ತು ಸರ್ಕಾರದ ನಿರಂತರ ಮೌನ ನೀತಿಯ ಹಿನ್ನೆಲೆಯಲ್ಲಿ ವಿಶ್ಲೇಷಿಸುವುದಾದರೆ, ನವದೆಹಲಿಯಲ್ಲಿ ನಡೆಯಲಿರುವ ಪುಟಿನ್ ಹಾಗೂ ಜಿನ್‌ಪಿಂಗ್ ಭೇಟಿಯ ಸಂದರ್ಭದಲ್ಲಿ, ಗಡಿ ಅತಿಕ್ರಮಣದ ವಿಚಾರವನ್ನು ಪ್ರಧಾನಿ ಮೋದಿ ಚೀನಾ ಅಧ್ಯಕ್ಷರ ಎದುರು ನೇರವಾಗಿ ಹಾಗೂ ದಿಟ್ಟವಾಗಿ ಪ್ರಸ್ತಾಪಿಸುವ ಸಾಧ್ಯತೆಗಳು ತೀರಾ ಕ್ಷೀಣ. ಗಡಿ ಸಾರ್ವಭೌಮತೆ ಮತ್ತು ಕಳೆದುಕೊಂಡ ಗಸ್ತು ಹಕ್ಕುಗಳ ಬಗ್ಗೆ ಪ್ರಶ್ನಿಸುವ ಬದಲು, ಕೇವಲ ವ್ಯಾಪಾರ ಮತ್ತು ಆರ್ಥಿಕ ಒಪ್ಪಂದಗಳ ನೆಪದಲ್ಲಿ ಚೀನಾದ ಆಕ್ರಮಣಶೀಲತೆಯನ್ನು ಮತ್ತೊಮ್ಮೆ ಮರೆಮಾಚುವ ಯತ್ನವೇ ಈ ಶೃಂಗಸಭೆಯಲ್ಲೂ ಮುಂದುವರಿಯುವ ಲಕ್ಷಣಗಳು ಗೋಚರಿಸುತ್ತಿವೆ.

# ಬ್ರಿಕ್ಸ್ ಶೃಂಗಸಭೆ: ಚಿದಂಬರಂ ಪ್ರಶ್ನೆಗೆ ಶಶಿತರೂರ್ ಭಿನ್ನ ವಾದ



**ನವದೆಹಲಿ, ಸೆ.11:** ನವದೆಹಲಿಯಲ್ಲಿ ನಡೆಯಲಿರುವ ಬ್ರಿಕ್ಸ್ ಶೃಂಗಸಭೆಯ ಹಿನ್ನೆಲೆಯಲ್ಲಿ ಕಾಂಗ್ರೆಸ್‌ನ ಹಿರಿಯ ನಾಯಕರಾದ ಪಿ. ಚಿದಂಬರಂ ಮತ್ತು ಶಶಿ ತರೂರ್ ನಡುವೆ ಒಕ್ಕೂಟದ ಪ್ರಸ್ತುತತೆ ಹಾಗೂ ಪ್ರಯೋಜನಗಳ ಕುರಿತು ವಿಭಿನ್ನ ಅಭಿಪ್ರಾಯಗಳು ವ್ಯಕ್ತವಾಗಿವೆ.

ಮಾಜಿ ಸಚಿವ ಪಿ. ಚಿದಂಬರಂ ಅವರು ಇತ್ತೀಚೆಗೆ ಬ್ರಿಕ್ಸ್, ಕ್ವಾಡ್, ಜಿ–20 ಮತ್ತು ಎಸ್‌ಸಿಒ ನಂತಹ ಬಹುಪಕ್ಷೀಯ ವೇದಿಕೆಗಳಿಂದ ಭಾರತಕ್ಕೆ ಸಿಗುತ್ತಿರುವ ಪ್ರತ್ಯಕ್ಷ ಪ್ರಯೋಜನಗಳ ಕುರಿತು ಪ್ರಶ್ನಿಸಿದ್ದರು. ಕಳೆದ 2–3 ಶೃಂಗಸಭೆಗಳಿಂದ ಭಾರತಕ್ಕೆ ಯಾವುದೇ ನಿರ್ದಿಷ್ಟ ಅಥವಾ ದೊಡ್ಡ ಲಾಭಗಳು ದೊರೆತಿಲ್ಲ ಎಂಬುದು ಚಿದಂಬರಂ ಅವರ ವಾದವಾಗಿತ್ತು. ಆದರೆ, ಈ ಕುರಿತು ಶಶಿತರೂರ್ ಅವರು ತಮ್ಮದೇ ಪಕ್ಷದ ನಾಯಕನ ವಾದಕ್ಕೆ ಭಿನ್ನವಾಗಿ ಮಾತನಾಡಿ, ಬ್ರಿಕ್ಸ್ ಒಕ್ಕೂಟದ ಪ್ರಾಮುಖ್ಯತೆಯನ್ನು ಎತ್ತಿಹಿಡಿದಿದ್ದಾರೆ.

ಹಲವು ದೇಶಗಳ ಮುಖ್ಯಸ್ಥರು ಮತ್ತು ಪ್ರಧಾನಿಗಳು ದೆಹಲಿಯ ಶೃಂಗಸಭೆಗೆ ಆಗಮಿಸುತ್ತಿರುವುದು ಭಾರತದ ರಾಜತಾಂತ್ರಿಕ ಸಮಾವೇಶ ಸಾಮರ್ಥ್ಯಕ್ಕೆ ಸಾಕ್ಷಿಯಾಗಿದೆ ಎಂದು ಶಶಿ ತರೂರ್ ಹೇಳಿಕೊಂಡಿದ್ದಾರೆ.

ಕಾಂಗ್ರೆಸ್ ಸಂಸದ ಶಶಿ ತರೂರ್ ಅವರು ತಮ್ಮ ಪಕ್ಷದ ಅಧಿಕೃತ ನಿಲುವು ಅಥವಾ ಹಿರಿಯ ನಾಯಕರ ಹೇಳಿಕೆಗಳಿಗಿಂತ ಭಿನ್ನವಾದ ಸಾರ್ವಜನಿಕ ಅಭಿಪ್ರಾಯ ವ್ಯಕ್ತಪಡಿಸುತ್ತಿರುವುದು ಇದೇ ಮೊದಲೇನಲ್ಲ. ವಿದೇಶಾಂಗ ನೀತಿ, ರಾಷ್ಟ್ರೀಯ ಭದ್ರತೆ ಹಾಗೂ ಕೆಲವು ಪ್ರಮುಖ ಸರ್ಕಾರದ ನಿರ್ಧಾರಗಳ ವಿಷಯದಲ್ಲಿ ತರೂರ್ ಹಲವು ಬಾರಿ ಕಾಂಗ್ರೆಸ್ ಪಕ್ಷಕ್ಕಿಂತ ವಿಭಿನ್ನ ನಿಲುವು ತಳೆದು ಸುದ್ದಿಯಾಗಿದ್ದಾರೆ.

ಪಹಲ್ಗಾಮ್ ಭಯೋತ್ಪಾದನಾ ದಾಳಿಯ ನಂತರ ಭಾರತೀಯ ಸೇನೆ ಕೈಗೊಂಡ ಆಪರೇಷನ್ ಸಿಂಧೂರ ಕಾರ್ಯಾಚರಣೆಯನ್ನು ಶಶಿ ತರೂರ್ ಮುಕ್ತವಾಗಿ ಬೆಂಬಲಿಸಿದ್ದರು. ಆದರೆ ಕಾಂಗ್ರೆಸ್ ನಾಯಕತ್ವವು ಸರ್ಕಾರದ ನಿರ್ಧಾರವನ್ನು ಟೀಕಿಸುತ್ತಿದ್ದಾಗ, ತರೂರ್ ದೇಶದ ಭದ್ರತೆಯ ವಿಷಯದಲ್ಲಿ ಸರ್ಕಾರದ ನಡೆಯನ್ನು ಶ್ಲಾಘಿಸಿದ್ದು ಪಕ್ಷಕ್ಕೆ ಅಸಮಾಧಾನ ತಂದಿತ್ತು.

ಪ್ರಧಾನಿ ನರೇಂದ್ರ ಮೋದಿ ಅವರ ಜಾಗತಿಕ ರಾಜತಾಂತ್ರಿಕ ನಡೆಗಳು ಹಾಗೂ ಪ್ರವಾಸಗಳನ್ನು ತರೂರ್ ಹಲವು ಬಾರಿ ಶ್ಲಾಘಿಸಿದ್ದಾರೆ. ಮೋದಿ ಅವರ ಜಾಗತಿಕ ಪ್ರಭಾವ ಮತ್ತು ಗ್ಲೋಬಲ್ ಸೌತ್‌ಗೆ ನೀಡಿದ ಆದ್ಯತೆಯನ್ನು ಅವರು ಸಾರ್ವಜನಿಕವಾಗಿ ಎತ್ತಿಹಿಡಿದಿದ್ದರು.

ಕೇಂದ್ರ ಸರ್ಕಾರವು ಭಾರತೀಯ ವಿದೇಶಾಂಗ ನಿಲುವನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ಯಲು ಆಯೋಜಿಸಿದ್ದ ಜಂಟಿ ನಿಯೋಗದಲ್ಲಿ ತರೂರ್ ಭಾಗವಹಿಸಿದ್ದರು. ಇದನ್ನು ಕಾಂಗ್ರೆಸ್ ನಾಯಕರು ಟೀಕಿಸಿದ್ದರೂ, ಪಕ್ಷಕ್ಕಿಂತ ದೇಶ ಮುಖ್ಯ ಎಂದು ತರೂರ್ ತಮ್ಮ ನಿರ್ಧಾರವನ್ನು ಸಮರ್ಥಿಸಿಕೊಂಡಿದ್ದರು.

ಈ ಹಿಂದೆ ಇಂದಿರಾ ಗಾಂಧಿಯವರು ಹೇರಿದ್ದ ತುರ್ತು ಪರಿಸ್ಥಿತಿಯ ದಿನಗಳನ್ನು ಪ್ರಜಾಪ್ರಭುತ್ವದ ಕತ್ತಲೆಯ ಕಾಲ ಎಂದು ತರೂರ್ ಬರೆದಿದ್ದ ಲೇಖನವೂ ಕಾಂಗ್ರೆಸ್ ಒಳಗಡೆ ಭಾರಿ ಚರ್ಚೆಗೆ ಗ್ರಾಸವಾಗಿತ್ತು. ಶಶಿ ತರೂರ್ ಅವರು ರಾಜತಾಂತ್ರಿಕ ಹಾಗೂ ಅಂತಾರಾಷ್ಟ್ರೀಯ ವಿಚಾರಗಳಲ್ಲಿ ಪಕ್ಷದ ಕಟ್ಟುನಿಟ್ಟಾದ ಗಡಿಗಳನ್ನು ಮೀರಿದ ಸ್ವತಂತ್ರ ನಿಲುವುಗಳನ್ನು ತೆಗೆದುಕೊಳ್ಳುತ್ತಾ ಬಂದಿದ್ದು, ಸ್ವಪಕ್ಷದಲ್ಲೇ ವಿರೋಧ ಎದುರಿಸಿದ ಉದಾಹರಣೆಗಳು ಹೆಚ್ಚಿವೆ.

# ದೆಹಲಿಯಲ್ಲಿ ನಡೆದ ಸಿಜೆಪಿ ಪ್ರತಿಭಟನೆ: ತನಿಖಾ ಸಮಿತಿ ಪುನರ್‌ರಚನೆಗೆ ಸುಪ್ರೀಂ ನಕಾರ



**ನವದೆಹಲಿ, ಸೆ.11:** ದೆಹಲಿಯಲ್ಲಿ ನಡೆದ ಸಿಜೆಪಿ (ಸಿಜೆಪಿ) ಪ್ರತಿಭಟನಾಕಾರರ ಮೇಲಿನ ಪೊಲೀಸ್ ದೌರ್ಜನ್ಯ ಹಾಗೂ ಪೊಲೀಸರ ಮೇಲಿನ ಹಿಂಸಾಚಾರದ ಆರೋಪಗಳ ತನಿಖೆ ನಡೆಸುತ್ತಿರುವ ಐವರು ಸದಸ್ಯರ ಉನ್ನತಾಧಿಕಾರ ಸಮಿತಿಯನ್ನು ಪುನರ್‌ರಚಿಸುವಂತೆ ಕೋರಿ ಸಲ್ಲಿಸಲಾದ ಅರ್ಜಿಗಳನ್ನು ಸುಪ್ರೀಂ ಕೋರ್ಟ್ ಗುರುವಾರ ತಿರಸ್ಕರಿಸಿದೆ. ಹಾಗೂ ತಾನೇ ರಚಿಸಿರುವ ಸಮಿತಿಯ ವಿರುದ್ಧ ಪಕ್ಷಪಾತದ ಪೂರ್ವಗ್ರಹಗಳನ್ನು ಒಪ್ಪಿಕೊಳ್ಳಲು ಸಾಧ್ಯವಿಲ್ಲ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ.

ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾಯಮೂರ್ತಿಗಳಾದ ಜಾಯ್‌ಮಲ್ಯ ಬಾಗ್ಚಿ ಮತ್ತು ವಿ. ಮೋಹನಾ ಅವರನ್ನೊಳಗೊಂಡ ಪೀಠವು, ನಿವೃತ್ತ ಸುಪ್ರೀಂ ಕೋರ್ಟ್ ನ್ಯಾಯಮೂರ್ತಿ ಆರ್. ಸುಭಾಷ್ ರೆಡ್ಡಿ ನೇತೃತ್ವದ ಸಮಿತಿಯು ನ್ಯಾಯಾಲಯದ ಮೇಲ್ವಿಚಾರಣೆಯಲ್ಲೇ ಕಾರ್ಯನಿರ್ವಹಿಸಲಿದೆ ಎಂದು ತಿಳಿಸಿದೆ.

ನಾವು ಯಾವುದೇ ಬದಲಾವಣೆಗೆ ಒಪ್ಪುವುದಿಲ್ಲ. ಸಮಿತಿಯು ಸುಪ್ರೀಂ ಕೋರ್ಟ್‌ನ ಮೇಲ್ವಿಚಾರಣೆಯಲ್ಲಿ ಕಾರ್ಯನಿರ್ವಹಿಸಲಿದೆ. ನಾವು ಸಮಿತಿಯನ್ನು ಪುನರ್‌ರಚಿಸುವುದಿಲ್ಲ. ಸಮಿತಿಯು ಕಾರ್ಯನಿರ್ವಹಿಸಲಿ, ನೋಡೋಣ. ನಾವು ಯಾವುದರಿಂದಲೂ ಹಿಂದೆ ಸರಿಯುತ್ತಿಲ್ಲ. ಸಮಿತಿ ಎಲ್ಲಾದರೂ ತಪ್ಪು ಮಾಡಿದೆ ಎಂದು ಯಾರಿಗಾದರೂ ಅನಿಸಿದರೆ, ನಮಗೆ ತಿಳಿಸಿ. ನಾವು ಮುಕ್ತ ವಿಚಾರಣೆ ನಡೆಸುತ್ತೇವೆ ಎಂದು ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಹೇಳಿದರು.

**ಸಮಿತಿ ಪುನರ್‌ರಚನೆಗೆ ಒತ್ತಾಯಿಸಿ ಅರ್ಜಿ** ಸಲ್ಲಿಸಿದ್ದವರ ಪರ ವಾದಿಸಿದ ವಕೀಲ ಪ್ರಶಾಂತ್ ಭೂಷಣ್, ಸಮಿತಿಯಲ್ಲಿರುವ ಈಶಾನ್ಯ ರಾಜ್ಯವೊಂದರ ಮಾಜಿ ಪೊಲೀಸ್ ಮಹಾನಿರ್ದೇಶಕರೊಬ್ಬರು ಪಕ್ಷಪಾತ ಮಾಡುವ ಸಂಭವವಿದೆ. ಸಮಿತಿಯ ಪರಿಶೀಲನೆಗೆ ಒಳಪಡುವ ಸಾಧ್ಯತೆಯಿರುವ ಉನ್ನತ ಹುದ್ದೆಯಲ್ಲಿರುವ ವ್ಯಕ್ತಿಯೊಬ್ಬರೊಂದಿಗೆ ಅವರು ಆಪ್ತ ಸ್ನೇಹ ಹೊಂದಿದ್ದಾರೆ ಎಂದು ಭೂಷಣ್ ಆರೋಪಿಸಿದರು. ಹಿರಿಯ ವಕೀಲ ಗೋಪಾಲ್ ಶಂಕರನಾರಾಯಣನ್ ಕೂಡ ಅರ್ಜಿದಾರರ ವಾದವನ್ನು ಬೆಂಬಲಿಸಿದರು. ಸಮಿತಿಗೆ ಸರ್ಕಾರದ ವಕೀಲರ ಬದಲಿಗೆ ಸ್ವತಂತ್ರ ಅಮಿಕಸ್ ಕ್ಯೂರಿ ಹಾಗೂ ಅಡ್ವೊಕೇಟ್ ಆನ್ ರೆಕಾರ್ಡ್ ಒದಗಿಸಬೇಕು ಎಂದು ಅವರು ಮನವಿ ಮಾಡಿದರು.

ಆದರೆ, ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಈ ವಾದಗಳನ್ನು ತೀವ್ರವಾಗಿ ವಿರೋಧಿಸಿದರು. ಆರೋಪಗಳನ್ನು ಪರಿಗಣಿಸದೆ ತಿರಸ್ಕರಿಸುವಂತೆ ಅವರು ನ್ಯಾಯಾಲಯವನ್ನು ಒತ್ತಾಯಿಸಿದರು. ಅವರ ಪ್ರಕಾರ, ಒಬ್ಬರು ಅಥವಾ ಇಬ್ಬರನ್ನು ಹೊರತುಪಡಿಸಿ ಇಡೀ ದೇಶವೇ ಅಪ್ರಾಮಾಣಿಕವಾಗಿದೆ ಎಂದು ವ್ಯಂಗ್ಯವಾಡಿದರು.

ಪ್ರಕರಣದ ಮುಂದಿನ ವಿಚಾರಣೆಯಲ್ಲಿ ಸಮಿತಿಯು ಸಾರ್ವಜನಿಕ ಪ್ರಕಟಣೆ ಹೊರಡಿಸುವಂತೆ ಆದೇಶಿಸುವ ಸಾಧ್ಯತೆಯಿದೆ. ಅದರ ಮೂಲಕ ಯಾರಾದರೂ ತಮ್ಮ ಅಭಿಪ್ರಾಯಗಳು, ಮಾಹಿತಿ, ದಾಖಲೆಗಳು ಅಥವಾ ಸಾಕ್ಷ್ಯಗಳನ್ನು ಸಮಿತಿಗೆ ಸಲ್ಲಿಸಲು ಅವಕಾಶ ಕಲ್ಪಿಸಲಾಗುತ್ತದೆ ಎಂದು ಪೀಠ ಸೂಚಿಸಿತು.

# ಸ್ಪೆಲ್ಲಿಂಗ್ ತಪ್ಪು, ಹೆಸರು ವ್ಯತ್ಯಾಸ: 1.22 ಕೋಟಿ ಮತದಾರರ ಭವಿಷ್ಯ ಅತಂತ್ರ



**ಮುಂಬೈ, ಸೆ.11:** ಮಹಾರಾಷ್ಟ್ರದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯ ಕರಡು ವರದಿ ಪ್ರಕಟವಾಗಿದೆ. ಕರಡು ಪಟ್ಟಿಯಲ್ಲಿ 7.71 ಕೋಟಿ ಮತದಾರರ ಹೆಸರಿದ್ದು, ಈ ಪೈಕಿ ಬರೋಬ್ಬರಿ 1.22 ಕೋಟಿಗೂ ಹೆಚ್ಚು ಮತದಾರರಿಗೆ ನೋಟಿಸ್ ನೀಡಲು ಚುನಾವಣಾ ಆಯೋಗ ಮುಂದಾಗಿದೆ. ನೋಟಿಸ್ ಪಡೆಯಲಿರುವ ಮತದಾರರಲ್ಲಿ 62,48,281 ಮತದಾರರ ಸಂಬಂಧಿಕರ ವಿವರಗಳಲ್ಲಿ ವ್ಯತ್ಯಾಸಗಳಿದ್ದರೆ, 59,75,726 ಮತದಾರರು ತಮ್ಮ ಸಂಬಂಧಿಕರ ಹಳೆಯ ದಾಖಲೆಗಳೊಂದಿಗೆ ಮ್ಯಾಪಿಂಗ್ ಆಗಿಲ್ಲ ಎಂದು ಆಯೋಗ ಹೇಳಿಕೊಂಡಿದೆ. ಇದೀಗ, 1.22 ಕೋಟಿ ಮತದಾರರ ಮತದಾನದ ಹಕ್ಕಿನ ಭವಿಷ್ಯ ಅತಂತ್ರಕ್ಕೆ ಸಿಲುಕಿದೆ.

ಗಮನಾರ್ಹವಾಗಿ, ಎಸ್‌ಐಆರ್ ಪ್ರಕ್ರಿಯೆ ಆರಂಭಕ್ಕೂ ಮುನ್ನ, ಮಹಾರಾಷ್ಟ್ರದಲ್ಲಿ ಒಟ್ಟು 9.78 ಕೋಟಿ ನೋಂದಾಯಿತ ಮತದಾರರಿದ್ದರು. ಆದರೆ, ಕರಡು ಪಟ್ಟಿಯಲ್ಲಿ 7.71 ಕೋಟಿ ಮತದಾರರಷ್ಟೇ ಸೇರ್ಪಡೆಯಾಗಿದ್ದಾರೆ. ಅಂದರೆ, ಸುಮಾರು 2.06 ಕೋಟಿಗೂ ಹೆಚ್ಚು ಹೆಸರುಗಳನ್ನು ಎಎಸ್ಡಿಡಿಒ ಅಡಿಯಲ್ಲಿ ಈಗಾಗಲೇ ಹೊರಹಾಕಲಾಗಿದೆ. ಇದೀಗ, ನೋಟಿಸ್ ನೀಡುವ ಮೂಲಕ 1.22 ಕೋಟಿ ಮತದಾರರನ್ನು ಕಚೇರಿಗೆ ಅಲೆಯುವಂತೆ ಮಾಡಲಾಗುತ್ತಿದೆ. ಇವರಲ್ಲಿಯೇ ಬಹುಸಂಖ್ಯಾತರು ಮತದಾರನ ಹಕ್ಕು ಕಳೆದುಕೊ ಳ್ಳುವ ಆತಂಕವಿದೆ.

ಇಂದಿನ ಮತ್ತು ಹಳೆಯ ಮತದಾರರ ಪಟ್ಟಿಯ ನಡುವಿನ ಮಾಹಿತಿಯಲ್ಲಿ ಹೊಂದಾಣಿಕೆಯಿಲ್ಲ, ಹೆಸರಿನಲ್ಲಿನ ಸ್ಪೆಲ್ಲಿಂಗ್ ವ್ಯತ್ಯಾಸ, ಮನೆತನದ ಹೆಸರು ಬದಲಾವಣೆಗಳ ಮತದಾರರಿಗೆ ನೋಟಿಸ್ ನೀಡಲಾಗುತ್ತಿದೆ. ಅಲ್ಲದೆ, ಕುಟುಂಬದ ಸದಸ್ಯರ ಹಳೆಯ ದಾಖಲೆಗಳಲ್ಲಿನ ಬದಲಾವಣೆಗಳಿಂದಾಗಿ ಹಲವರನ್ನು Unmapped ಪಟ್ಟಿಯಲ್ಲಿ ಸೇರಿಸಲಾಗಿದೆ. ಈಗ ಈ ಎಲ್ಲರಿಗೂ ನೋಟಿಸ್ ನೀಡಲಾಗಿದ್ದು, ನೋಟಿಸ್ ಪಡೆದವರು ನಾನಾ ದಾಖಲೆಗಳನ್ನು ಹೊಂದಿಸಿಕೊಂಡು, ಚುನಾವಣಾಧಿಕಾರಿಗಳ ಕಚೇರಿಗೆ ಅಲೆಯಬೇಕಾಗಿದೆ.

ಮಹಾರಾಷ್ಟ್ರದ ಮಲಾಡ್, ಧರಾವಿ, ಪನ್ವೇಲ್, ಕಲ್ಯಾಣ್ ರೂರಲ್, ಖಡಕ್ವಾಸ್ಲಾ, ಹಡಪ್ಸರ್, ನಾಗಪುರ ಹಾಗೂ ಸೋಲ್ಲಾಪುರ ಸೇರಿದಂತೆ ಪ್ರಮುಖ ವಿಧಾನಸಭಾ ಕ್ಷೇತ್ರಗಳಲ್ಲಿ ಒಂದೊಂದೇ ಕ್ಷೇತ್ರದಲ್ಲಿ ಲಕ್ಷಕ್ಕೂ ಹೆಚ್ಚು ಮತದಾರರ ದಾಖಲೆಗಳಲ್ಲಿ ವ್ಯತ್ಯಾಸಗಳು ಕಂಡುಬಂದಿವೆ.

ದಾಖಲೆಗಳಲ್ಲಿನ ವ್ಯತ್ಯಾಸದ ಕಾರಣಕ್ಕಾಗಿ ನೋಟಿಸ್ ನೀಡಿರುವ ಮತದಾರರ ಹೆಸರುಗಳನ್ನು ಸಾರ್ವಜನಿಕವಾಗಿ ಪ್ರಕಟಿಸುವಂತೆ ವಿರೋಧ ಪಕ್ಷಗಳು ಒತ್ತಾಯಿಸಿವೆ. ಆದರೂ, ಸಾರ್ವಜನಿಕವಾಗಿ ಪ್ರಕಟಿಸುವುದಿಲ್ಲ ಎಂದು ಆಯೋಗ ನಿರ್ಧರಿಸಿದೆ. ಸಾರ್ವಜನಿಕವಾಗಿ ಪಟ್ಟಿ ಪ್ರಕಟಿಸಿದರೆ ಅಂತಹ ಮತದಾರರ ಖಾಸಗಿತನಕ್ಕೆ ಧಕ್ಕೆ ಬರಬಹುದು ಮತ್ತು ಅವರನ್ನೇ ನಿರ್ದಿಷ್ಟವಾಗಿ ಗುರಿಯಾಗಿಸುವ ಸಾಧ್ಯತೆಯಿರುತ್ತದೆ ಎಂದು ಆಯೋಗ ನೆಪವೊಡ್ಡಿದೆ.

ಯಾವುದೇ ನಿರ್ದಿಷ್ಟ ಸಮುದಾಯ ಅಥವಾ ವರ್ಗದ ಮತದಾರರ ಹೆಸರುಗಳನ್ನು ಗುರಿಯಾಗಿಸಿ ಆಕ್ಷೇಪಣೆ ಸಲ್ಲಿಸುವ ಆತಂಕಗಳಿರುವುದರಿಂದ, ಪ್ರತಿಯೊಬ್ಬ ಮತದಾರನಿಗೂ ತಮ್ಮ ಪರ ದಾಖಲೆಗಳನ್ನು ಸಲ್ಲಿಸಲು ಮತ್ತು ವಿಚಾರಣೆಗೆ ಹಾಜರಾಗಲು ಪೂರ್ಣ ಅವಕಾಶ ನೀಡುವಂತೆ ಜಿಲ್ಲಾಧಿಕಾರಿಗಳಿಗೆ ಆಯೋಗ ಸೂಚಿಸಿರುವುದಾಗಿ ತಿಳಿಸಿದೆ.



ನವದೆಹಲಿಯಲ್ಲಿ ನಡೆಯಲಿರುವ ಬ್ರಿಕ್ಸ್ ಶೃಂಗಸಭೆಗೆ ಸಜ್ಜುಗೊಂಡಿ1ರುವ ಭಾರತ ಮಂಟಪದ ದೃಶ್ಯ

# ರಾಮನಂದಿ ಹೋಟೆಲ್ಸ್ ಮೇಲೆ ಇ.ಡಿ ದಾಳಿ

**ನವದೆಹಲಿ, ಸೆ.11:** ಬರೋಬ್ಬರಿ 132 ಕೋಟಿ ರೂ. ಮೊತ್ತದ ಬ್ಯಾಂಕ್ ವಂಚನೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಹಾರದ ಗಯಾ ಮೂಲದ ರಾಮನಂದಿ ಹೋಟೆಲ್ಸ್ ಸಮೂಹದ ವಿರುದ್ಧ ಜಾರಿ ನಿರ್ದೇಶನಾಲಯ (ಇ.ಡಿ) ಅಧಿಕಾರಿಗಳು ಬಿರುಸಿನ ಶೋಧ ಕಾರ್ಯಾಚರಣೆ ನಡೆಸಿದ್ದಾರೆ. ಅಕ್ರಮ ಹಣ ವರ್ಗಾವಣೆ ಹಾಗೂ ಬ್ಯಾಂಕ್‌ಗಳಿಗೆ ವಂಚಿಸಿದ ಆರೋಪದ ಹಿನ್ನೆಲೆಯಲ್ಲಿ ಈ ಪ್ರಕರಣ ದಾಖಲಾಗಿದೆ.

ಬ್ಯಾಂಕ್ ವಂಚನೆ ಹಾಗೂ ಸಾಲದ ಹಣ ದುರ್ಬಳಕೆ ಆರೋಪದಡಿ ಈ ಬೃಹತ್ ಕಾರ್ಯಾಚರಣೆ ಕೈಗೊಳ್ಳಲಾಗಿದೆ. ಬಿಹಾರ, ಹರಿಯಾಣ ಮತ್ತು ದೆಹಲಿ ರಾಜ್ಯಗಳಲ್ಲಿ ಹೋಟೆಲ್ ಸಮೂಹ ಹಾಗೂ ಅದರ ಪ್ರವರ್ತಕರಿಗೆ ಸೇರಿದ ವಿವಿಧ ನಿವಾಸ ಮತ್ತು ಕಚೇರಿಗಳ ಮೇಲೆ ಇಡಿ ಅಧಿಕಾರಿಗಳ ತಂಡ ಏಕಕಾಲದಲ್ಲಿ ದಾಳಿ ನಡೆಸಿ ಮಹತ್ವದ ದಾಖಲೆಗಳ ಪರಿಶೀಲನೆ ನಡೆಸುತ್ತಿದೆ.

ತನಿಖಾ ಸಂಸ್ಥೆಯು ಬಿಡುಗಡೆ ಮಾಡಿರುವ ಅಧಿಕೃತ ಮಾಹಿತಿಯ ಪ್ರಕಾರ, ದೇಶಾದ್ಯಂತ ಒಟ್ಟು 9 ಪ್ರಮುಖ ಸ್ಥಳಗಳಲ್ಲಿ ಇ.ಡಿ ಶೋಧ ಕಾರ್ಯ ನಡೆಸಿದೆ. ಬಿಹಾರದ ಗಯಾದಲ್ಲಿ ಗರಿಷ್ಠ ಆರು, ಹರಿಯಾಣದ ಗುರುಗ್ರಾಮದಲ್ಲಿ ಎರಡು ಹಾಗೂ ನವದೆಹಲಿಯಲ್ಲಿ ಒಂದು ಸ್ಥಳದಲ್ಲಿ ಅಧಿಕಾರಿಗಳು ತಪಾಸಣೆ ನಡೆಸಿದ್ದಾರೆ. ಸೆಂಟ್ರಲ್ ಬ್ಯಾಂಕ್ ಆಫ್ ಇಂಡಿಯಾ ನೇತೃತ್ವದ ಬ್ಯಾಂಕ್‌ಗಳ ಒಕ್ಕೂಟಕ್ಕೆ ಒಟ್ಟು 132 ಕೋಟಿ ರೂ. ವಂಚಿಸಲಾಗಿದೆ ಎಂಬುದು ಈ ಪ್ರಕರಣದ ಪ್ರಮುಖ ಆರೋಪವಾಗಿದೆ. ಹೋಟೆಲ್ ಯೋಜನೆಗಳ ಅಭಿವೃದ್ಧಿಯ ಹೆಸರಿನಲ್ಲಿ ಬ್ಯಾಂಕ್‌ಗಳಿಗೆ ತಪ್ಪು ಮಾಹಿತಿ ನೀಡಿ, ಉದ್ದೇಶಪೂರ್ವಕವಾಗಿ ಈ ವಂಚನೆ ಎಸಗಲಾಗಿದೆ ಎಂದು ಜಾರಿ ನಿರ್ದೇಶನಾಲಯದ ಅಧಿಕಾರಿಗಳು ವಿವರಿಸಿದ್ದಾರೆ. ಬ್ಯಾಂಕ್‌ಗಳ ಒಕ್ಕೂಟವು ಈ ಹೋಟೆಲ್ ಸಮೂಹದ ಯೋಜನೆಗಳಿಗಾಗಿ ಒಟ್ಟು 85 ಕೋಟಿ ಸಾಲವನ್ನು ವಿತರಿಸಿತ್ತು. ಆದರೆ, ಆರೋಪಿಗಳು ಈ ಪೈಕಿ ಬರೋಬ್ಬರಿ 58 ಕೋಟಿ ಹಣವನ್ನು ನಿಗದಿತ ಹೋಟೆಲ್ ಯೋಜನೆಗೆ ಬಳಸದೆ, ಬೇರೆ ಉದ್ದೇಶಗಳಿಗಾಗಿ ಅಕ್ರಮವಾಗಿ ವರ್ಗಾವಣೆ ಮಾಡುವ ಮೂಲಕ ಹಣದುರ್ಬಳಕೆ ಮಾಡಿದ್ದಾರೆ ಎಂದು ತನಿಖಾ ಸಂಸ್ಥೆ ಗಂಭೀರ ಆರೋಪ ಮಾಡಿದೆ. ಸಾಲ ಪಡೆಯಲು ನಕಲಿ ದಾಖಲೆಗಳನ್ನು ಸೃಷ್ಟಿಸಿರುವ ವಿಚಾರವೂ ಈ ಶೋಧ ಕಾರ್ಯಾಚರಣೆಯ ವೇಳೆ ಬೆಳಕಿಗೆ ಬಂದಿದೆ. ವಾಸ್ತವದಲ್ಲಿ ಹೋಟೆಲ್ ಕಾಮಗಾರಿ ಪೂರ್ಣಗೊಂಡಿಲ್ಲದಿದ್ದರೂ, ನಕಲಿ ಯೋಜನಾ ಪೂರ್ಣಗೊಳಿಸುವಿಕೆ ವರದಿ?ಗಳನ್ನು ಸೃಷ್ಟಿಸಿ ಬ್ಯಾಂಕ್‌ಗಳಿಗೆ ಸಲ್ಲಿಸುವ ಮೂಲಕ ಸುಳ್ಳು ಹೇಳಿ ಸಾಲದ ಹಣ ಪಡೆಯಲಾಗಿದೆ ಎಂದು ಇ.ಡಿ ಮೂಲಗಳು ಸ್ಪಷ್ಟಪಡಿಸಿವೆ.

# ಮದುವೆ ಭರವಸೆ ಈಡೇರದ ಒಪ್ಪಿತ ಸಂಬಂಧ ಅತ್ಯಾಚಾರವಲ್ಲ: ಸುಪ್ರೀಂ

**ನವದೆಹಲಿ, ಸೆ. 11:** ವಂಚನೆಯ ಉದ್ದೇಶವಿಲ್ಲದೆ, ಮದುವೆಯಾಗುವ ಭರವಸೆ ನೀಡಿ ಪರಸ್ಪರ ಸಮ್ಮತಿಯೊಂದಿಗೆ ಲೈಂಗಿಕ ಸಂಬಂಧ ಆರಂಭವಾಗಿದ್ದು, ನಂತರ ಕುಟುಂಬದ ವಿರೋಧ ಅಥವಾ ಅನಿವಾರ್ಯ ಪರಿಸ್ಥಿತಿಯಿಂದ ವಿವಾಹವಾಗದಿದ್ದರೆ, ಅದನ್ನು ಅತ್ಯಾಚಾರ ಅಥವಾ ವಂಚನೆ ಎಂದು ಪರಿಗಣಿಸಲಾಗುವುದಿಲ್ಲ ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಯುವತಿಯೊಬ್ಬರು ತಮ್ಮನ್ನು ಮದುವೆಯಾಗುವುದಾಗಿ ನಂಬಿಸಿ, ದೈಹಿಕ ಸಂಬಂಧ ಬೆಳೆಸಿ, ಈಗ ಮದುವೆಯಾಗದೆ ವಂಚಿಸಿದ್ದಾರೆ ಎಂದು ಆರೋಪಿ ಯುವಕ ಕುನಾಲ್ ರಮೇಶ್‌ಭಾಯಿ ಕಲ್ಯಾಣಿ ವಿರುದ್ಧ ದೂರು ದಾಖಲಿಸಿದ್ದರು. ಅವರ ದೂರಿನ ಆಧಾರದ ಮೇಲೆ, ವಡೋದರಾದ ಸಯಾಜಿಗಂಜ್ ಪೊಲೀಸ್ ಠಾಣೆಯಲ್ಲಿ 2025ರ ಮೇ 20ರಂದು ಎಫ್‌ಐಆರ್ ದಾಖಲಾಗಿತ್ತು. ತಮ್ಮ ವಿರುದ್ಧದ ಈ ಪ್ರಕರಣವನ್ನು ರದ್ದುಗೊಳಿಸುವಂತೆ ಕೋರಿ ಕುನಾಲ್ ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದರು. ಅರ್ಜಿಯನ್ನು ನ್ಯಾಯಮೂರ್ತಿಗಳಾದ ಜೆ.ಬಿ. ಪಾರ್ದಿವಾಲಾ ಮತ್ತು ಕೆ. ವಿನೋದ್ ಚಂದ್ರನ್ ಅವರಿದ್ದ ಪೀಠ ವಿಚಾರಣೆ ನಡೆಸಿದೆ. ಆರೋಪಿ ಅರ್ಜಿದಾರನ ಮನವಿಯನ್ನು ಪುರಸ್ಕರಿಸಿದೆ. ಭಾರತೀಯ ನ್ಯಾಯ ಸಂಹಿತೆಯ ಸೆಕ್ಷನ್ 69ರ ಅಡಿಯಲ್ಲಿ ಪ್ರಕರಣ ದಾಖಲಿಸಲು ಆರೋಪಿಯು ಮದುವೆಯಾಗುವುದಾಗಿ ಭರವಸೆ ನೀಡಿದ ಸಂದರ್ಭದಲ್ಲಿಯೇ ಆತನಿಗೆ ಅದನ್ನು ಈಡೇರಿಸುವ ಉದ್ದೇಶವೇ ಇರಲಿಲ್ಲ ಎಂಬುದು ಸಾಬೀತಾಗಬೇಕು ಎಂದು ಸ್ಪಷ್ಟಪಡಿಸಿದೆ. ಮದುವೆಯ ಭರವಸೆಯನ್ನು ಆರಂಭದಲ್ಲಿ ಸದುದ್ದೇಶದಿಂದ ನೀಡಲ್ಪಟ್ಟಿದ್ದರೂ, ನಂತರ ಕುಟುಂಬದ ವಿರೋಧ, ಅನಿವಾರ್ಯ ಪರಿಸ್ಥಿತಿ ಅಥವಾ ತನ್ನ ನಿಯಂತ್ರಣದಾಚೆಯ ಕಾರಣಗಳಿಂದ ಮದುವೆ ಸಾಧ್ಯವಾಗದಿದ್ದರೆ, ಅದನ್ನು ಆರಂಭಿಕ ವಂಚನೆಯ ಉದ್ದೇಶವೆಂದು ಹೇಳಲಾಗುವುದಿಲ್ಲ ಎಂದು ನ್ಯಾಯಾಲಯ ಹೇಳಿದೆ. ಪ್ರಕರಣದ ಅರ್ಜಿದಾರ ಯುವಕ ಮತ್ತು ದೂರುದಾರ ಯುವತಿ ಇಬ್ಬರೂ ಡಿಜಿಟಲ್ ವೇದಿಕೆಯ ಮೂಲಕ ಪರಿಚಿತರಾಗಿ ನಂತರ ಸ್ನೇಹ ಬೆಳೆಸಿಕೊಂಡಿದ್ದು, ಅದು ಪ್ರೇಮ ಸಂಬಂಧವಾಗಿ ಮಾರ್ಪಟ್ಟಿತ್ತು. ಇಬ್ಬರೂ 2024ರ ಫೆಬ್ರವರಿ 12ರಂದು ಮೊದಲ ಬಾರಿಗೆ ನೇರವಾಗಿ ಭೇಟಿಯಾಗಿದ್ದರು. ನಂತರ, 2024ರ ಏಪ್ರಿಲ್‌ನಲ್ಲಿ ಇಬ್ಬರೂ ಪರಸ್ಪರ ಸಮ್ಮತಿಯಿಂದ ದೈಹಿಕ ಸಂಬಂಧ ಹೊಂದಿದ್ದರು ಎಂಬುದನ್ನು ಸುಪ್ರೀಂ ಕೋರ್ಟ್ ಗಮನಿಸಿದೆ. ಯುವತಿಯ ದೂರಿನಲ್ಲೇ, ಮೊದಲ ನೇರ ಭೇಟಿಯ ವೇಳೆ ಆರೋಪಿ ಯುವಕ ಮದುವೆಯಾಗುವ ಇಚ್ಛೆ ವ್ಯಕ್ತಪಡಿಸಿದ್ದನು ಎಂಬುದನ್ನು ಉಲ್ಲೇಖಿಸಲಾಗಿದೆ. ಈ ಹಿನ್ನೆಲೆಯಲ್ಲಿ, ಸಂಬಂಧವು ಪರಸ್ಪರ ಸಮ್ಮತಿಯದ್ದಾಗಿದ್ದು, ಆತನಿಗೆ ಆರಂಭದಿಂದಲೇ ವಂಚಿಸುವ ಉದ್ದೇಶವಿತ್ತು ಎಂಬುದಕ್ಕೆ ಸ್ಪಷ್ಟ ಆಧಾರ ಕಾಣುತ್ತಿಲ್ಲ ಎಂದು ಪೀಠ ಅಭಿಪ್ರಾಯಪಟ್ಟಿದೆ. ದೂರಿನಲ್ಲಿರುವ ಹೇಳಿಕೆಗಳು ಪರಸ್ಪರ ಸಮ್ಮತಿಯ ಸಂಬಂಧವನ್ನೇ ಸೂಚಿಸುತ್ತವೆ. ಮೋಸದ ನಡವಳಿಕೆಯನ್ನು ತೋರಿಸುವ ಯಾವುದೇ ಸ್ಪಷ್ಟ ಅಂಶ ನಮಗೆ ಕಾಣಿಸುತ್ತಿಲ್ಲ. ಆರೋಪಿ ಮದುವೆಯಾಗಲು ನಿರಾಕರಿಸಿದ ಕಾರಣ ಅವನ ತಾಯಿ ಒಪ್ಪದಿರುವುದು ಎಂಬುದನ್ನು ದೂರಿನಲ್ಲೇ ಹೇಳಲಾಗಿದೆ. ಇದರಿಂದ, ಆರಂಭದಲ್ಲಿ ನೀಡಲಾಗಿದ್ದ ಮದುವೆಯ ಭರವಸೆಯು ಸದುದ್ದೇಶದಿಂದಲೇ ನೀಡಲ್ಪಟ್ಟಿತ್ತು ಎಂಬುದೇ ಗೋಚರಿಸುತ್ತದೆ ಎಂದು ಪೀಠ ಹೇಳಿದೆ. ಆರೋಪಿ ಯುವಕನ ವಿರುದ್ಧದ ಎಫ್‌ಐಆರ್ ಮತ್ತು ಅದರ ಆಧಾರದ ಮೇಲಿನ ಕ್ರಿಮಿನಲ್ ಪ್ರಕರಣವನ್ನು ಕೋರ್ಟ್ ರದ್ದುಪಡಿಸಿದೆ.

# ವಾರದಲ್ಲಿ 5 ದಿನ ಮಾತ್ರ ಕೆಲಸಕ್ಕೆ ಬ್ಯಾಂಕ್ ನೌಕರರ ಆಗ್ರಹ

**ನವದೆಹಲಿ, ಸೆ.11:** ವಾರದಲ್ಲಿ ಐದು ದಿನಗಳ ಕೆಲಸದ ಅವಧಿಯನ್ನು ಜಾರಿಗೆ ತರಬೇಕು ಮತ್ತು ಪರಿಷ್ಕೃತ ಕಾಮಗಾರಿ ಆಧಾರಿತ ಪ್ರೋತ್ಸಾಹಕ ಯೋಜನೆಯನ್ನು ಹಿಂಪಡೆಯಬೇಕು ಎಂಬ ದೀರ್ಘಕಾಲದ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ದೇಶದ ಪ್ರಮುಖ ಬ್ಯಾಂಕ್ ಯೂನಿಯನ್‌ಗಳು ಕರೆ ನೀಡಿದ್ದ ದೇಶಾದ್ಯಂತ ಸಾರ್ವಜನಿಕ ವಲಯದ ಬ್ಯಾಂಕಿಂಗ್ ಸೇವೆಗಳು ವ್ಯತ್ಯಯಗೊಂಡಿವೆ.

ಯುನೈಟೆಡ್ ಫೋರಂ ಆಫ್ ಬ್ಯಾಂಕ್ ಯೂನಿಯನ್ಸ್ ನೇತೃತ್ವದಲ್ಲಿ ಎಐಬಿಇಎ, ಎಐಬಿಓಸಿ ಸೇರಿದಂತೆ 9 ಪ್ರಮುಖ ಬ್ಯಾಂಕ್ ಉದ್ಯೋಗಿ ಹಾಗೂ ಅಧಿಕಾರಿಗಳ ಸಂಘಟನೆಗಳು ಈ ಪ್ರತಿಭಟನೆಯಲ್ಲಿ ಪಾಲ್ಗೊಂಡಿವೆ. ಪ್ರತಿಭಟನೆಯ ಪರಿಣಾಮವಾಗಿ ದೇಶದ ವಿವಿಧೆಡೆ ನಗದು ಠೇವಣಿ, ಹಿಂತೆಗೆದುಕೊಳ್ಳುವಿಕೆ, ಚೆಕ್ ಕ್ಲಿಯರೆನ್ಸ್ ಹಾಗೂ ಶಾಖೆಗಳ ಮೂಲಕ ನಡೆಯುವ ಸಾಮಾನ್ಯ ಹಣಕಾಸು ವ್ಯವಹಾರಗಳು ಬಾಧಿತಗೊಂಡಿವೆ.

ಪ್ರಸ್ತುತ ಮೊದಲ ಮತ್ತು ಮೂರನೇ ಶನಿವಾರ ಕಾರ್ಯನಿರ್ವಹಿಸುವ ವ್ಯವಸ್ಥೆಯನ್ನು ರದ್ದುಗೊಳಿಸಿ, ವಾರದ ಸೋಮವಾರದಿಂದ ಶುಕ್ರವಾರದವರೆಗೆ ಮಾತ್ರ ಕೆಲಸದ ದಿನಗಳನ್ನಾಗಿ ಘೋಷಿಸಬೇಕು. ಸೋಮವಾರದಿಂದ ಶುಕ್ರವಾರಕ್ಕೆ ಪ್ರತಿದಿನ 40 ನಿಮಿಷಗಳ ಹೆಚ್ಚುವರಿ ಕೆಲಸದ ಸಮಯವನ್ನು ನೀಡಲು ಯೂನಿಯನ್‌ಗಳು ಒಪ್ಪಿಕೊಂಡಿದ್ದು, ಈ ಕುರಿತು ಭಾರತೀಯ ಬ್ಯಾಂಕ್‌ಗಳ ಸಂಘ ಹಾಗೂ ಯೂನಿಯನ್‌ಗಳ ನಡುವೆ ನಡೆದಿದ್ದ ಒಪ್ಪಂದವನ್ನು ಸರ್ಕಾರ ಕೂಡಲೇ ಜಾರಿಗೆ ತರಬೇಕೆಂದು ಒತ್ತಾಯಿಸುತ್ತಿವೆ.

ಹಾಗೆಯೇ ಬ್ಯಾಂಕ್‌ನ ಒಟ್ಟಾರೆ ಸಾಧನೆ ಆಧರಿಸಿ ಪ್ರೋತ್ಸಾಹಕ ನೀಡುವುದನ್ನು ಬಿಟ್ಟು, ಉದ್ಯೋಗಿಗಳ ಪ್ರತ್ಯೇಕ ಕಾರ್ಯಕ್ಷಮತೆ ಆಧಾರಿತ ಹೊಸ ಪಿಎಲ್ ಐ ಯೋಜನೆಯನ್ನು ಜಾರಿಗೆ ತರಲು ಹೊರಟಿರುವ ಸರ್ಕಾರದ ನಿರ್ಧಾರವನ್ನು ಹಿಂಪಡೆಯಬೇಕು ಎಂದು ಆಗ್ರಹಿಸಿದೆ. ಕೇಂದ್ರ ಸರ್ಕಾರ ಹಾಗೂ ಭಾರತೀಯ ಬ್ಯಾಂಕ್‌ಗಳ ಸಂಘವು ತಮ್ಮ ಬೇಡಿಕೆಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸದಿದ್ದಲ್ಲಿ ಮುಂಬರುವ ದಿನಗಳಲ್ಲಿ ಮೂರು ದಿನಗಳ ಸುದೀರ್ಘ ಮುಷ್ಕರ ಹಾಗೂ ತದನಂತರ ಅನಿರ್ದಿಷ್ಟಾವಧಿ ಮುಷ್ಕರ ನಡೆಸುವುದಾಗಿ ಬ್ಯಾಂಕ್ ಸಂಘಟನೆಗಳು ಎಚ್ಚರಿಕೆ ನೀಡಿವೆ.

# ಯುವಕನಲ್ಲಿ ಪತ್ತೆಯಾಯ್ತು ಗರ್ಭಕೋಶ!

**ನವದೆಹಲಿ, ಸೆ.11:** ಸಂತಾನೋತ್ಪತ್ತಿ ಸಮಸ್ಯೆಗೆ ಚಿಕಿತ್ಸೆ ಪಡೆಯಲು ದೆಹಲಿಯ ಆಸ್ಪತ್ರೆಗೆ ತೆರಳಿದ್ದ 24 ವರ್ಷದ ಯುವಕನ ವೈದ್ಯಕೀಯ ಪರೀಕ್ಷೆಯಲ್ಲಿ ಅಪರೂಪದ ಬೆಳವಣಿಗೆಯೊಂದು ಪತ್ತೆಯಾಗಿದೆ. ಸಾಮಾನ್ಯವಾಗಿ ಪುರುಷರಲ್ಲಿ ಇರದ ಗರ್ಭಕೋಶ ಆತನ ದೇಹದೊಳಗೆ ಇರುವುದು ವೈದ್ಯಕೀಯ ತಪಾಸಣೆಯಲ್ಲಿ ಬೆಳಕಿಗೆ ಬಂದಿದೆ. ವೈದ್ಯರು ಇದನ್ನು Persistent Müllerian Duct Syndrome (PMDS) ಎಂಬ ಅಪರೂಪದ ಜನ್ಮಜಾತ ಸ್ಥಿತಿಗೆ ಸಂಬಂಧಿಸಿದೆ ಎಂದು ಗುರುತಿಸಿದ್ದಾರೆ.

ವಿವಾಹದ ಬಳಿಕ ಸಂತಾನವಾಗದ ಹಿನ್ನೆಲೆಯಲ್ಲಿ ಯುವಕ ಸಂತಾನೋತ್ಪತ್ತಿ ತಜ್ಞರನ್ನು ಸಂಪರ್ಕಿಸಿದ್ದ. ಆರಂಭಿಕ ವೀರ್ಯ ಪರೀಕ್ಷೆಯಲ್ಲಿ ವೀರ್ಯಾಣುಗಳು ಪತ್ತೆಯಾಗದ ಹಿನ್ನೆಲೆಯಲ್ಲಿ ಹೆಚ್ಚಿನ ಪರೀಕ್ಷೆಗಳನ್ನು ನಡೆಸಲಾಯಿತು. ನಂತರ ನಡೆಸಿದ ಇಮೇಜಿಂಗ್ ಪರೀಕ್ಷೆಗಳಲ್ಲಿ ದೇಹದೊಳಗೆ ಸಾಮಾನ್ಯ ಪುರುಷರಲ್ಲಿ ಕಾಣಿಸದ ಗರ್ಭಕೋಶದ ರಚನೆ ಇರುವುದನ್ನು ವೈದ್ಯರು ಪತ್ತೆಹಚ್ಚಿದರು. ವರದಿಯ ಪ್ರಕಾರ, ಆತನ ಎರಡು ವೃಷಣಗಳು ಕೂಡ ಹೊಟ್ಟೆಯೊಳಗೇ ಇದ್ದವು.

**ಏನಿದು PMDS?:** Persistent Mullerian Duct Syndrome ಅತ್ಯಂತ ಅಪರೂಪದ ಜನ್ಮಜಾತ ಬೆಳವಣಿಗೆ ವೈಪರೀತ್ಯವಾಗಿದೆ. ಈ ಸ್ಥಿತಿಯಲ್ಲಿ ವ್ಯಕ್ತಿ ಪುರುಷನಂತೆ ದೈಹಿಕವಾಗಿ ಬೆಳವಣಿಗೆಯಾಗಿದ್ದರೂ, ಭ್ರೂಣದ ಬೆಳವಣಿಗೆಯ ಸಂದರ್ಭದಲ್ಲಿ ಸಾಮಾನ್ಯವಾಗಿ ಮಾಯವಾಗಬೇಕಾದ Müllerian ductನಿಂದ ರೂಪುಗೊಳ್ಳುವ ಗರ್ಭಕೋಶ, ಗರ್ಭಕಂಠ ಹಾಗೂ ಫ್ಯಾಲೋಪಿಯನ್ ಟ್ಯೂಬ್‌ಗಳಂತಹ ರಚನೆಗಳು ದೇಹದಲ್ಲಿ ಉಳಿದುಕೊಳ್ಳುತ್ತವೆ. ಸಾಮಾನ್ಯವಾಗಿ ಇದು AMH (Anti-Müllerian Hormone) ಅಥವಾ ಅದರ ರಿಸೆಪ್ಟರ್‌ಗೆ ಸಂಬಂಧಿಸಿದ ಜನ್ಯ ಬದಲಾವಣೆಗಳೊಂದಿಗೆ ಸಂಪರ್ಕ ಹೊಂದಿರುತ್ತದೆ.

ಇಂತಹ ಪ್ರಕರಣಗಳಲ್ಲಿ ವೃಷಣಗಳು ಹೊಟ್ಟೆಯೊಳಗೆ ಉಳಿಯುವುದು ಸಾಮಾನ್ಯವಾಗಿ ಕಂಡುಬರುವ ಲಕ್ಷಣಗಳಲ್ಲಿ ಒಂದಾಗಿದೆ.

# ಸರ್ಕಾರಿ ಶಾಲೆ ಮಕ್ಕಳಿಗೆ ಕಳಪೆ ಶೂ ವಿತರಣೆ

## ಲೋಕಾದಿಂದ ಸ್ವಯಂಪ್ರೇರಿತ ದೂರು ದಾಖಲು, ತನಿಖೆಗೆ ಆದೇಶ




**ಬೆಂಗಳೂರು, ಸೆ.11** ಸರ್ಕಾರಿ ಶಾಲಾ ಮಕ್ಕಳಿಗೆ ಕಳಪೆ ಗುಣಮಟ್ಟದ ಶೂಗಳನ್ನು ವಿತರಿಸಿರುವ ಗಂಭೀರ ಪ್ರಕರಣಕ್ಕೆ 1ಸಂಬಂಧಿಸಿದಂತೆ ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಅವರು ಸ್ವಯಂಪ್ರೇರಿತ ದೂರು ದಾಖಲಿಸಿಕೊಂಡು ತನಿಖೆಗೆ ಆದೇಶಿಸಿದ್ದಾರೆ.

ಮಕ್ಕಳ ಕಲ್ಯಾಣ ಯೋಜನೆಯಲ್ಲಿ ನಡೆದಿರುವ ಈ ಭ್ರಷ್ಟಾಚಾರದ ವಿರುದ್ಧ ಸಾರ್ವಜನಿಕ ವಲಯದಲ್ಲಿ ತೀವ್ರ ಆಕ್ರೋಶ ವ್ಯಕ್ತವಾಗಿತ್ತು. ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳಿಗೆ ವಿತರಿಸಲಾದ ಶೂಗಳು ಕೇವಲ ಒಂದೇ ವಾರದಲ್ಲಿ ಹರಿದುಹೋಗಿರುವ ಬಗ್ಗೆ ಮತ್ತು ಧರಿಸಿದ ಕೆಲವೇ ನಿಮಿಷಗಳಲ್ಲಿ ಹೊಲಿಗೆ ಬಿಟ್ಟುಕೊಂಡಿರುವ ಬಗ್ಗೆ ವ್ಯಾಪಕವಾಗಿ ಮಾಧ್ಯಮದ ವರದಿಗಳಲ್ಲಿ ಪ್ರಕಟವಾಗಿದ್ದವು. ಹಿಂದಿನ ವರ್ಷಗಳ ಪೂರೈಕೆಗೆ ಹೋಲಿಸಿದರೆ ಈ ಬಾರಿ ಖರೀದಿಸಲಾದ ಪಾದರಕ್ಷೆಗಳು ಕಳಪೆಯಾಗಿದ್ದು, ಖರೀದಿ ಪ್ರಕ್ರಿಯೆ ಹಾಗೂ ಮೇಲ್ವಿಚಾರಣೆಯಲ್ಲಿ ವ್ಯವಸ್ಥಿತ ಭ್ರಷ್ಟಾಚಾರ ನಡೆದಿರುವುದು ಮೇಲ್ನೋಟಕ್ಕೆ ಸಾಬೀತಾಗಿದೆ.

**15 ಡಿಡಿಪಿಐಗಳ ವಿರುದ್ಧ ಪ್ರಕರಣ ದಾಖಲು:** ವಿದ್ಯಾರ್ಥಿಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವುದರಲ್ಲಿ ಅಧಿಕಾರಿಗಳ ನಿರ್ಲಕ್ಷ್ಯ ಮುಂದುವರಿದಿರುವುದನ್ನು ನ್ಯಾಯಮೂರ್ತಿಗಳು ಗಂಭೀರವಾಗಿ ಪರಿಗಣಿಸಿದ್ದಾರೆ. ರಾಜ್ಯದ 15 ಜಿಲ್ಲೆಗಳಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು (ಡಿಡಿಪಿಐ) ಹಾಗೂ ಬ್ಲಾಕ್ ಶಿಕ್ಷಣ ಅಧಿಕಾರಿಗಳ (ಬಿಇಒ) ವಿರುದ್ಧ ಔಪಚಾರಿಕ ಪ್ರಕರಣಗಳನ್ನು ದಾಖಲಿಸಲಾಗಿದೆ.

ಸಂಬಂಧಪಟ್ಟ ಜಿಲ್ಲೆಗಳ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಿಗೆ (ಎಸ್‌ಪಿ) ಈ ಕುರಿತು ಸಮಗ್ರ ತನಿಖೆ ನಡೆಸಿ ಎರಡು ವಾರಗಳ ಒಳಗಾಗಿ ವರದಿ ಸಲ್ಲಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.

# ತಂದೆ ಮಕ್ಕಳ ಬಿಜೆಪಿ ಪಕ್ಷಕ್ಕೆ ರಾಜೀನಾಮೆ: ಅಲ್ಪ ಸಂಖ್ಯಾತರು, ಓಬಿಸಿಗಳಿಗೆ ಕಮಲ ಪಕ್ಷದಲ್ಲಿ ನೆಲೆ ಇಲ್ಲ: ನೆ.ಲ. ನರೇಂದ್ರಬಾಬು

**ಬೆಂಗಳೂರು, ಸೆ.11:** ಬಿಜೆಪಿ ತಂದೆ ಮಕ್ಕಳ ಪಕ್ಷವಾಗಿದ್ದು, ಇಲ್ಲಿ ಅಲ್ಪ ಸಂಖ್ಯಾತರು, ಓಬಿಸಿಗಳಿಗೆ ನೆಲ ಇಲ್ಲದ ಕಾರಣ ಪಕ್ಷಕ್ಕೆ ರಾಜೀನಾಮೆ ನೀಡಿದ್ದು, ಸೆ.13ರಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಸಮ್ಮುಖದಲ್ಲಿ ಕಾಂಗ್ರೆಸ್ ಸೇರ್ಪಡೆಯಾಗುವುದಾಗಿ ಮಾಜಿ ಶಾಸಕ ನೆ.ಲ ನರೇಂದ್ರ ಬಾಬು ಘೋಷಿಸಿದ್ದಾರೆ.

ರಾಜಾಜಿನಗರ ಮತ್ತು ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕರಾದ ನೆ.ಲ.ನರೇಂದ್ರ ಬಾಬು ಬಿಜೆಪಿ ಪಕ್ಷದ ಹಿಂದುಳಿದ ವರ್ಗ ರಾಜ್ಯಾಧ್ಯಕ್ಷ ಸ್ಥಾನ ನಿರ್ವಹಿಸಿದ್ದರು. ಬಿಜೆಪಿ ಪಕ್ಷದ ಪ್ರಾಥಮಿಕ ಸದಸ್ಯತ್ವ ಸ್ಥಾನಕ್ಕೆ ರಾಜೀನಾಮೆ ನೀಡಿರುವುದನ್ನು ಪ್ರಕಟಿಸಿದರು.

ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಮಹಾನಗರ ಪಾಲಿಕೆ ಸದಸ್ಯನಾಗಿ ಮೂರು ಬಾರಿ ಮತ್ತು ಎರಡು ಬಾರಿ ಶಾಸಕನಾಗಿ ಕಳೆದ 40 ವರ್ಷಗಳಿಂದ ಸಾರ್ವಜನಿಕರ ಬೆಂಬಲದಿಂದ ರಾಜಕೀಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಾ ಬಂದಿದ್ದೇನೆ. ಬಿಜೆಪಿ ಪಕ್ಷದ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ನೀಡಿದ್ದೇನೆ. ಕಳೆದ 10ವರ್ಷಗಳಿಂದ ಬಿಜೆಪಿ ಪಕ್ಷಕ್ಕೆ ನನ್ನನ್ನು ಸಮರ್ಪಿಸಿಕೊಂಡೆ. ಆದರೆ ರಾಜಾಜಿನಗರ ಮತ್ತು ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದಲ್ಲಿ ನನ್ನ ಕಾರ್ಯಕರ್ತರನ್ನು ನನ್ನಿಂದ ದೂರ ಮಾಡಿದರು ಮತ್ತು ನನ್ನ ವಿರುದ್ಧ ಪಿತೂರಿ ಮಾಡಿದವರ ಮೇಲೆ ಕ್ರಮ ಕೈಗೊಳ್ಳಲಿಲ್ಲ. ರಾಜಾಜಿನಗರ ವಿಧಾನಸಭಾ ಕ್ಷೇತ್ರದ ಸುರೇಶ್ ಕುಮಾರ್, ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದಲ್ಲಿ ಗೋಪಾಲಯ್ಯ ಪರ ಚುನಾವಣೆಯಲ್ಲಿ ಪ್ರಾಮಾಣಿಕವಾಗಿ ಕೆಲಸ ಮಾಡಿದರೂ ನನ್ನನ್ನು ನಿರ್ಲಕ್ಷಿಸಿದ್ದಾರೆ ಎಂದು ಆರೋಪಿಸಿದರು.



ಬಿಜೆಪಿ ತಂದೆ ಮಕ್ಕಳ ಪಕ್ಷವಾಗಿದೆ. ಗೋಪಾಲಯ್ಯ ಸೇರಿದಂತೆ 17 ಮಂದಿ ಶಾಸಕರು ಬಿಜೆಪಿ ಸೇರಿದಾಗ ಮಹಾಲಕ್ಷ್ಮಿ ಲೇಔಟ್ ಕ್ಷೇತ್ರದ ಉಪ ಚುನಾವಣೆ ಸಂದರ್ಭದಲ್ಲಿ ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ಬರಲು ಉಪ ಚುನಾವಣೆಯಲ್ಲಿ ನೀವು ಸಹಕಾರ ನೀಡಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ನಳೀನ್ ಕುಮಾರ್ ಕಟೀಲ್ ಹಾಗೂ ಆರ್.ಎಸ್.ಎಸ್ ಮುಖಂಡ ಬಿ.ಎಲ್. ಸಂತೋಷ್ ತಮ್ಮನ್ನು ಮನವೊಲಿಸಿದರು. ಪಕ್ಷಕ್ಕಾಗಿ ತ್ಯಾಗ ಮಾಡಿದ ತಮಗೆ ನಂತರ ಜವಾಬ್ದಾರಿ ನೀಡುವ ವಿಚಾರದಲ್ಲಿ ಬಿಜೆಪಿ ನಾಯಕರು ಜಾಣ ಕುರುಡು, ಜಾಣ ಮೌನ ವಹಿಸಿದ್ದಾರೆ.

ಸರ್ಕಾರ ಬಂದ ಮೇಲೆ ನಮ್ಮ ಕಡೆ ನೋಡಲಿಲ್ಲ. ಕೆಲಸ ಮಾಡುವವರಿಗೆ ಬಿಜೆಪಿ ಪಕ್ಷದಲ್ಲಿ ಬೆಲೆಯಿಲ್ಲ. ಹಿಂಬಾಲಕರಿಗೆ ಮಾತ್ರ ಅವಕಾಶ ಎಂದು ಕಿಡಿಕಾರಿದರು.

ಬಿಜೆಪಿಯಲ್ಲಿ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ತೀರ್ಮಾನವೇ ಅಂತಿಮವಾಗಿದೆ. ನಿಷ್ಠಾವಂತ ಕಾರ್ಯಕರ್ತರಿಗೆ ಬೆಲೆ ಇಲ್ಲ. ರಾಜ್ಯದ ಸಮಸ್ಯೆಗಳಿಗೆ ಬಿಜೆಪಿ ಸಂಸದರು ಸ್ಪಂದಿಸುವುದಿಲ್ಲ. ಹೀಗಾಗಿ ನನ್ನ ಮತ್ತು ಜೊತೆಯಲ್ಲಿ ಇರುವ ಸ್ನೇಹಿತರು, ಕಾರ್ಯಕರ್ತರ ಜೊತೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗುತ್ತಿದ್ದೇನೆ ಎಂದು ಹೇಳಿದರು.

# ರಾಜ್ಯ ಛಲವಾದಿ ಸಂಗಮ: ದಲಿತರ ಹಕ್ಕುಗಳಿಗಾಗಿ ಬಲಿಷ್ಠ ಹೋರಾಟದ ಘೋಷಣೆ

**ಬೆಂಗಳೂರು, ಸೆ.11:** ದಲಿತರ ಯೋಜನೆಗಳಿಗೆ ಮೀಸಲಾದ ಸುಮಾರು 54,000 ಕೋಟಿ ರೂಪಾಯಿ ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ನಿಧಿಗಳನ್ನು ಸರ್ಕಾರ ತನ್ನ ಐದು ಗ್ಯಾರೆಂಟಿ ಯೋಜನೆಗಳಿಗೆ ದುರುಪಯೋಗ ಪಡಿಸಿಕೊಂಡಿದೆ ಎಂದು ರಾಜ್ಯ ಛಲವಾದಿ ಸಂಗಮ ಆರೋಪಿಸಿದೆ.

ವಿದ್ಯಾರ್ಥಿ ವೇತನ ವಿತರಣೆಯಲ್ಲಿ ವಿಳಂಬ, ನಿಲಯಗಳ ಆಧುನೀಕರಣದ ಕೊರತೆ, ಗುಣಾತ್ಮಕ ಶಿಕ್ಷಣದಿಂದ ವಂಚನೆ, ಹಾಗೂ ವಿಶೇಷ ಘಟಕ ಯೋಜನೆಗಳಿಗೆ ಅನುದಾನ ನೀಡದಿರುವುದು ದಲಿತರ ಸಬಲೀಕರಣವನ್ನು ಕತ್ತಲೆಗೆ ದೂಡಿದೆ ಎಂದು ಸಂಘಟನೆಯು ತಿಳಿಸಿದೆ.

ಹಿಂದಿನ ಬಿಜೆಪಿ ಸರ್ಕಾರ ಜಾರಿಗೆ ತಂದಿದ್ದ ಪರಿಷ್ಕೃತ ಮೀಸಲಾತಿ ವ್ಯವಸ್ಥೆಯನ್ನು ನ್ಯಾಯಾಲಯದಲ್ಲಿ ಉಳಿಸಿಕೊಳ್ಳುವಲ್ಲಿ ಕಾಂಗ್ರೆಸ್ ವಿಫಲವಾಗಿದೆ. ಸಂವಿಧಾನದ ಬಗ್ಗೆ ಬೊಬ್ಬೆ ಹೊಡೆಯುವ ಕಾಂಗ್ರೆಸ್ ಸರ್ಕಾರ ದಲಿತ ವಿರೋಧಿ ನೀತಿಯನ್ನು ಅನುಸರಿಸುತ್ತಿದೆ ಎಂದು ಹೇಳಿದೆ. ಒಳ ಮೀಸಲಾತಿ ನೆಪದಲ್ಲಿ ಬಲಗೈ ಸಮುದಾಯಗಳ ಉಪಜಾತಿಗಳನ್ನು ಇತರ ವರ್ಗಗಳಲ್ಲಿ ಸೇರಿಸಿ ಮೀಸಲಾತಿ ಪ್ರಮಾಣ ಕಡಿತಗೊಳಿಸಿರುವುದು ದೊಡ್ಡ ದ್ರೋಹವೆಂದು ಸಂಘಟನೆಯು ಖಂಡಿಸಿದೆ.

ರಾಜ್ಯದಲ್ಲಿ ದಲಿತ ಮಹಿಳೆಯರ ಮೇಲಿನ ಹಿಂಸಾಚಾರ ಪ್ರಕರಣಗಳು ಹೆಚ್ಚುತ್ತಿರುವುದನ್ನು ಉಲ್ಲೇಖಿಸಿ, ರಾಯಚೂರು ಜಿಲ್ಲೆಯ ಅಶ್ವಿನಿ ಹಾಗೂ ರಾಣಿಮಾ ಪ್ರಕರಣಗಳನ್ನು ಉದಾಹರಣೆ ನೀಡಿದೆ.

ಸಂಘಟನೆಯು ಡಾ. ಬಿ.ಆರ್. ಅಂಬೇಡ್ಕರ್ ಅವರ ಆದರ್ಶಗಳನ್ನು ಯುವಜನತೆಗೆ ತಲುಪಿಸುವುದರ ಜೊತೆಗೆ, ಯಾವುದೇ ಸರ್ಕಾರ ಸಮುದಾಯದ ವಿರುದ್ಧ ನಿಲುವು ತೆಗೆದುಕೊಂಡರೆ ಅದನ್ನು ಖಂಡಿಸುವುದಾಗಿ ಘೋಷಿಸಿದೆ.

# ಕಾಂಗ್ರೆಸ್‌ನ ಇನ್ನೂ 3-4 ನಾಯಕರ ಮೇಲೂ ಇ.ಡಿ. ದಾಳಿ: ಡಿ.ಕೆ ಶಿವಕುಮಾರ್ ಭವಿಷ್ಯ

**ಬೆಂಗಳೂರು, ಸೆ.11:** ಕಾಂಗ್ರೆಸ್ ನಾಯಕರನ್ನು ಗುರಿಯಾಗಿಸಿಕೊಂಡು ಜಾರಿ ನಿರ್ದೇಶನಾಲಯ (ಇ.ಡಿ.) ದಾಳಿ ಹಾಗೂ ತನಿಖೆಗಳು ನಡೆಯುತ್ತಿವೆ ಎಂದು ಆರೋಪಿಸಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮುಂದಿನ ದಿನಗಳಲ್ಲಿ ಇನ್ನೂ 3–4 ಕಾಂಗ್ರೆಸ್ ನಾಯಕರ ಮೇಲೆ ಇ.ಡಿ. ದಾಳಿ ನಡೆಯುವ ಸಾಧ್ಯತೆ ಇದೆ ಎಂದು ಭವಿಷ್ಯ ನುಡಿದಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇ.ಡಿ. ತನಿಖೆಗಳ ವಿಚಾರದಲ್ಲಿ ಕಾಂಗ್ರೆಸ್ ಪಕ್ಷವನ್ನೇ ಗುರಿಯಾಗಿಸಲಾಗುತ್ತಿದೆ. ಇದು ಕೇವಲ ಒಂದು ಸಮುದಾಯಕ್ಕೆ ಸಂಬಂಧಿಸಿದ ವಿಚಾರವಲ್ಲ. ಇಡೀ ಕಾಂಗ್ರೆಸ್ ಪಕ್ಷವೇ ಟಾರ್ಗೆಟ್ ಆಗುತ್ತಿದೆ ಎಂದು ಹೇಳಿದ್ದಾರೆ.



ಸಚಿವ ಸತೀಶ್ ಜಾರಕಿಹೊಳಿ ಅವರ ವಿಚಾರವಾಗಿ ಪ್ರತಿಕ್ರಿಯಿಸಿದ ಡಿ.ಕೆ. ಶಿವಕುಮಾರ್, ಸತೀಶ್ ನನ್ನ ಸಹೋದ್ಯೋಗಿ. ಅವರು ಏನು ತಪ್ಪು ಮಾಡಿಲ್ಲ. ಅವರನ್ನು ಟಾರ್ಗೆಟ್ ಮಾಡಲಾಗಿದೆ. ಕಾನೂನಿನ ಚೌಕಟ್ಟಿನಲ್ಲಿಯೇ ವ್ಯವಹಾರ ನಡೆಸುತ್ತಿದ್ದಾರೆ. ವ್ಯವಹಾರದ ವಿಚಾರವಾಗಿಯೂ ಅವರು ಸ್ಪಷ್ಟನೆ ನೀಡಿದ್ದು, ರಾಜಕಾರಣಿಗಳು ಅಥವಾ ಸಾರ್ವಜನಿಕ ಜೀವನದಲ್ಲಿರುವವರು ಹೊರಗೆ ವ್ಯವಹಾರ ಮಾಡಬಾರದು ಎಂದು ಎಲ್ಲಿಯೂ ಕಾನೂನು ಹೇಳಿಲ್ಲ. ಕಾನೂನುಬದ್ಧವಾಗಿ ವ್ಯವಹಾರ ನಡೆಸುತ್ತಿದ್ದರೆ ಅದರಲ್ಲಿ ತಪ್ಪೇನು ಎಂದು ಪ್ರಶ್ನಿಸಿದ್ದಾರೆ.

ಇ.ಡಿ. ದಾಳಿಗಳನ್ನು ಕೇವಲ ವ್ಯಕ್ತಿಯೊಬ್ಬರ ವಿರುದ್ಧದ ಕ್ರಮವಾಗಿ ನೋಡಬಾರದು. ಇದರ ಹಿಂದೆ ದೊಡ್ಡ ರಾಜಕೀಯ ಉದ್ದೇಶವಿದೆ ಎಂದೆನಿಸುತ್ತಿದೆ. ಕಾಂಗ್ರೆಸ್ ಪಕ್ಷದ ನಾಯಕರನ್ನು ಒಂದೊಂದಾಗಿ ಗುರಿಯಾಗಿಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ಇನ್ನೂ ಕೆಲವು ಕಾಂಗ್ರೆಸ್ ನಾಯಕರ ಮೇಲೆ ದಾಳಿ ನಡೆಯುವ ಸಾಧ್ಯತೆಯನ್ನು ತಳ್ಳಿಹಾಕುವಂತಿಲ್ಲ ಎಂದಿದ್ದಾರೆ.

# ಶ್ರೀಕಾಳಿದಾಸ ಸಹಕಾರ ಬ್ಯಾಂಕ್‌ನ ವಿಯನಗರ ಶಾಖೆ ಉದ್ಘಾಟನೆ: ಎಚ್.ಎಂ.ರೇವಣ್ಣ ಭಾಗಿ

**ಬೆಂಗಳೂರು, ಸೆ.11:** ಬೆಂಗಳೂರಿನ ಗಾಂಧಿನಗರದ ಶ್ರೀಕಾಳಿದಾಸ ಸಹಕಾರ ಬ್ಯಾಂಕ್ ನಿಯಮಿತದ ನೂತನ ವಿಜಯನಗರ ಶಾಖೆಯ ಉದ್ಘಾಟನಾ ಸಮಾರಂಭದಲ್ಲಿ ಕಾಗಿನೆಲೆ ಮಹಾಸಂಸ್ಥಾನ ಕನಕ ಗುರುಪೀಠ ಹೊಸದುರ್ಗ ಶಾಖಾ ಮಠದ ಜಗದ್ಗುರು ಈಶ್ವರಾನಂದ ಮಹಾಸ್ವಾಮೀಜಿ ಅವರೊಂದಿಗೆ ಕರ್ನಾಟಕ ರಾಜ್ಯ ಗ್ಯಾರಂಟಿ ಸ್ಕೀಮ್ಸ್ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಚ್.ಎಂ.ರೇವಣ್ಣ ಭಾಗಿಯಾಗಿ, ವಿಜಯನಗರದಲ್ಲಿಂದು ಉದ್ಘಾಟನೆ ನೆರವೇರಿಸಲಾಯಿತು.

ಈ ಶುಭ ಸಂದರ್ಭದಲ್ಲಿ ವಿಜಯನಗರ ವಿಧಾನಸಭಾ ಕ್ಷೇತ್ರದ ಶಾಸಕ ಎಂ.ಕೃಷ್ಣಪ್ಪರವರು, ಬಿಬಿಎಂಪಿ ನಿಕಟಪೂರ್ವ ಆಡಳಿತ ಪಕ್ಷದ ನಾಯಕ ಎಂ.ಶಿವರಾಜು, ಬೆಂಗಳೂರು ಮಹಾನಗರ ಪಾಲಿಕೆ ನಿಕಟ ಪೂರ್ವ ಮಹಾಪೌರ ಜೆ.ಹುಚ್ಚಪ್ಪ, ಕರ್ನಾಟಕ ಪ್ರದೇಶ ಕುರುಬರ ಸಂಘದ ಖಜಾಂಚಿ ಕೆ.ಎಂ. ಕೃಷ್ಣಮೂರ್ತಿ, ಶ್ರೀಕಾಳಿದಾಸ ಸಹಕಾರ ಬ್ಯಾಂಕ್ ನಿಯಮಿತ ಇದರ ನಿಕಟಪೂರ್ವ ಅಧ್ಯಕ್ಷರಾದ ಶ್ರೀ ಎಂ. ಯದುಕುಮಾರ್ ರವರು ಶ್ರೀ ಕಾಳಿದಾಸ ಸಹಕಾರ ಬ್ಯಾಂಕ್ ನಿಯಮಿತ ಇದರ ಆಡಳಿತ ಮಂಡಳಿಯ ಮಾನ್ಯ ಅಧ್ಯಕ್ಷರಾದ ಶ್ರೀ ಕೆಸಿ ಕೃಷ್ಣಪ್ಪರವರು, ಉಪಾಧ್ಯಕ್ಷೆ ವೈ.ಸರೋಜಮ್ಮ, ನಿರ್ದೇಶಕರುಗಳು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು. ಸಹಕಾರಿ ಕ್ಷೇತ್ರದಲ್ಲಿ ಈ ಬ್ಯಾಂಕ್ ಇನ್ನಷ್ಟು ಎತ್ತರಕ್ಕೆ ಬೆಳೆದು ಸಾರ್ವಜನಿಕರಿಗೆ ಉತ್ತಮ ಸೇವೆ ನೀಡಲಿ ಎಂದು ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಗ್ಯಾರಂಟಿ ಸ್ಕೀಮ್ಸ್ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಚ್.ಎಂ.ರೇವಣ್ಣ ಹಾರೈಸಿದರು.



# ಬರಪೀಡಿತ ತಾಲ್ಲೂಕುಗಳಲ್ಲಿ ಪ್ರಸ್ತುತ ಇರುವ ಏತ ನೀರಾವರಿ ಯೋಜನೆಗಳ ಮೂಲಕ ಕೆರೆ ತುಂಬಿಸುವಿಕೆಗೆ ಮೊದಲ ಆದ್ಯತೆ ನೀಡಿ: ಸಚಿವ ಡಾ. ಅಜಯ್ ಧರಂ ಸಿಂಗ್ ಸೂಚನೆ

– ಲಭ್ಯವಿರುವ ನೀರು ವ್ಯರ್ಥವಾಗದಂತೆ ಕ್ರಮ; ಒಂದು ವಾರದೊಳಗೆ ವರದಿ ಸಲ್ಲಿಸಲು ಅಧಿಕಾರಿಗಳಿಗೆ ನಿರ್ದೇಶನ

– ಪ್ರಸ್ತುತ ನದಿಗಳಲ್ಲಿ ನೀರಿನ ಹರಿವು ಕಡಿಮೆಯಾಗುವ ಸಂಧರ್ಭದಲ್ಲಿ ಇಲಾಖೆಯ ಬ್ಯಾರೇಜು ಹಾಗೂ ಕಿಂಡಿ ಅಣೆಕಟ್ಟುಗಳಿಗೆ ಕೂಡಲೇ ಗೇಟ್‌ಗಳನ್ನು ಅಳವಡಿಸಿ ನೀರನ್ನು ಸಂಗ್ರಹಿಸಲು ಕಟ್ಟುನಿಟ್ಟಿನ ಸೂಚನೆ ನೀಡಲಾಯಿತು.



**ಬೆಂಗಳೂರು, ಸೆ.11:** ಬರಪೀಡಿತ ತಾಲ್ಲೂಕುಗಳಲ್ಲಿ ಕುಡಿಯುವ ನೀರು, ಜಾನುವಾರುಗಳ ನೀರಿನ ಅಗತ್ಯ ಹಾಗೂ ಅಂತರ್ಜಲ ಮರುಪೂರಣಕ್ಕೆ ನೆರವಾಗುವ ನಿಟ್ಟಿನಲ್ಲಿ, ಪ್ರಸ್ತುತ ಇರುವ ಏತ ನೀರಾವರಿ ಯೋಜನೆಗಳು ಹಾಗೂ ಇತರೆ ಲಭ್ಯ ಮೂಲಗಳ ಮೂಲಕ ಸಾಧ್ಯವಿರುವ ಕೆರೆಗಳನ್ನು ತುಂಬಿಸುವುದಕ್ಕೆ ಮೊದಲ ಆದ್ಯತೆ ನೀಡಬೇಕು ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಅಜಯ್ ಧರಂ ಸಿಂಗ್ ಅಧಿಕಾರಿಗಳಿಗೆ ಸೂಚಿಸಿದರು .

ಇಂದು ಬೆಂಗಳೂರಿನಲ್ಲಿ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಸಚಿವರು, ಬರ ಪರಿಸ್ಥಿತಿಯನ್ನು ಎದುರಿಸಲು ಇಲಾಖೆ ತಕ್ಷಣ ಕಾರ್ಯೋನ್ಮುಖವಾಗಬೇಕು ಎಂದು ಹೇಳಿದರಕರ್ನಾಟಕ ರಾಜ್ಯ ಗ್ಯಾರಂಟಿ ಸ್ಕೀಮ್ಸ್ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ4.

ಎಲ್ ನಿನೋ ಪರಿಣಾಮದಿಂದ ಈ ವರ್ಷ ರಾಜ್ಯದ ಬಹುತೇಕ ತಾಲ್ಲೂಕುಗಳಲ್ಲಿ ಮಳೆ ಕೊರತೆ ಉಂಟಾಗಿದ್ದು, ರಾಜ್ಯ ಸರ್ಕಾರ ಈಗಾಗಲೇ 101 ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಿದೆ. ಇನ್ನೂ ಕೆಲವು ತಾಲ್ಲೂಕುಗಳಲ್ಲಿ ಬರ ಪರಿಸ್ಥಿತಿ ಕಂಡುಬರುತ್ತಿದ್ದು, ಅವುಗಳ ಕುರಿತೂ ಸರ್ಕಾರ ಶೀಘ್ರ ನಿರ್ಧಾರ ಕೈಗೊಳ್ಳಲಿದೆ ಎಂದು ತಿಳಿಸಿದರು.

ಬರಪೀಡಿತ ಪ್ರದೇಶಗಳಲ್ಲಿ ಕೆರೆಗಳಿಗೆ ನೀರು ತುಂಬಿಸುವುದು ಕೇವಲ ಜಲಸಂಗ್ರಹವಲ್ಲ; ಅದು ಅಂತರ್ಜಲ ಮರುಪೂರಣ, ಜಾನುವಾರುಗಳಿಗೆ ನೀರು ಹಾಗೂ ಸ್ಥಳೀಯ ಕುಡಿಯುವ ನೀರಿನ ಸಮಸ್ಯೆ ತಗ್ಗಿಸುವ ಪ್ರಮುಖ ಕ್ರಮ. ಏತ ನೀರಾವರಿ ಅಥವಾ ಇತರೆ ಮೂಲಗಳಿಂದ ಸಾಧ್ಯವಿರುವ ಕೆರೆಗಳಲ್ಲಿ ನೀರು ತುಂಬಿಸಲು ತಕ್ಷಣ ಕ್ರಮ ಕೈಗೊಳ್ಳುವಂತೆ ಸಚಿವರು ಸೂಚನೆ ನೀಡಿದರು.

ಸದ್ಯ ಕೆರೆಗಳಲ್ಲಿ ಸಂಗ್ರಹವಾಗಿರುವ ನೀರು ಅನಗತ್ಯವಾಗಿ ಹೊರಹೋಗದಂತೆ ಅಗತ್ಯ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು. ಕೆರೆಗಳ ಸ್ಥಿತಿ, ನೀರು ತುಂಬಿಸುವ ಸಾಧ್ಯತೆ, ಲಭ್ಯ ಜಲಮೂಲ ಹಾಗೂ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಒಂದು ವಾರದೊಳಗೆ ಸಮಗ್ರ ವರದಿ ಸಲ್ಲಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಪ್ರಸ್ತುತ ಹಲವಾರು ನದಿಗಳಲ್ಲಿ ನೀರಿನ ಹರಿವು ಕಡಿಮೆಯಾಗುತ್ತಿದೆ. ನಮ್ಮ ಇಲಾಖೆಯ ಬ್ಯಾರೇಜು ಹಾಗೂ ಕಿಂಡಿ ಅಣೆಕಟ್ಟುಗಳಿಗೆ ಕೂಡಲೇ ಗೇಟ್‌ಗಳನ್ನು ಅಳವಡಿಸಬೇಕು. ಈ ಮೂಲಕ ನೀರಿನ ಹರಿವು ಕಡಿಮೆ ಆಗುತ್ತಿರುವ ಸಂಧರ್ಭದಲ್ಲಿ ಅಗತ್ಯ ನೀರನ್ನು ಸಂಗ್ರಹಿಸಲು ಸಾಧ್ಯವಾಗಲಿದೆ. ಈ ನಿಟ್ಟಿನಲ್ಲಿ ಕ್ರಮ ಕೈಗೊಳ್ಳುವಂತೆ ಸಚಿವರು ಸೂಚನೆ ನೀಡಿದರು.

ಬರಪೀಡಿತ ಮತ್ತು ಓವರ್ ಎಕ್ಸ್‌ಪ್ಲಾಯಿಟೇಡ್ ಪ್ರದೇಶಗಳಲ್ಲಿ ಮರುಪೂರಣಕ್ಕೆ ವಿಶೇಷ ಒತ್ತು

ಬರಪೀಡಿತ ಹಾಗೂ ಅಂತರ್ಜಲ ಓವರ್ ಎಕ್ಸ್‌ಪ್ಲಾಯಿಟೇಡ್ ಪ್ರದೇಶಗಳಲ್ಲಿ ಮರುಪೂರಣ ಕಾರ್ಯಾಚರಣೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸಚಿವರು ಹೇಳಿದರು.

ಏತ ನೀರಾವರಿ ಮೂಲಕ ನೀರು ತುಂಬಿಸುವ ಕೆರೆಗಳು, ಚೆಕ್‌ಡ್ಯಾಂಗಳು ಹಾಗೂ ಬ್ಯಾರೇಜ್‌ಗಳಲ್ಲಿ ರೀಚಾರ್ಜ್ ಶಾಫ್ಟ್‌ಗಳನ್ನು ಅಳವಡಿಸುವ ವಿಶೇಷ ಕಾರ್ಯಾಚರಣೆ ಕೈಗೊಳ್ಳಬೇಕು ಎಂದು ಸೂಚಿಸಿದರು.

ಟೀಮ್ ಕರ್ನಾಟಕ ಸ್ಫೂರ್ತಿಯಲ್ಲಿ ಕಾರ್ಯನಿರ್ವಹಿಸಿ

ಮುಖ್ಯಮಂತ್ರಿಗಳ ಆಶಯದಂತೆ ?ಟೀಮ್ ಕರ್ನಾಟಕ? ಸ್ಫೂರ್ತಿಯಲ್ಲಿ ಇಲಾಖೆಯ ಎಲ್ಲ ಹಂತದ ಅಧಿಕಾರಿಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಡಾ. ಅಜಯ್ ಧರಂ ಸಿಂಗ್ ಹೇಳಿದರು.

ಬಾಕಿ ಇರುವ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸುವುದರ ಜೊತೆಗೆ, ಬರ ಪರಿಸ್ಥಿತಿಗೆ ಸ್ಪಂದಿಸುವ ಯೋಜನೆಗಳಿಗೆ ಆದ್ಯತೆ ನೀಡಿ ಫಲಿತಾಂಶಾಧಾರಿತವಾಗಿ ಕೆಲಸ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯ ಕಾರ್ಯದರ್ಶಿಗಳಾದ ರಾಜೇಶ್ ಅಮ್ಮಿನಬಾವಿ, ಸಚಿವರ ಆಪ್ತ ಕಾರ್ಯದರ್ಶಿಗಳಾದ ಮಲ್ಲಿಕಾರ್ಜುನರೆಡ್ಡಿ ಪಾಟೀಲ್ , ದಕ್ಷಿಣ ವಲಯದ ಮುಖ್ಯ ಅಭಿಯಂತರರಾದ ಸತೀಶ್ ಕುಮಾರ್, ಉತ್ತರ ವಿಭಾಗದ ಮುಖ್ಯ ಅಭಿಯಂತರರಾದ ಆನಂದ್ ಸೇರಿದಂತೆ ಎಲ್ಲಾ ವೃತ್ತಗಳ ಅಧೀಕ್ಷಕ ಅಭಿಯಂತರರು ಹಾಗೂ ವಿಭಾಗಗಳ ಕಾರ್ಯಪಾಲಕ ಅಭಿಯಂತರರು, ಎಇಇಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

# ಜೈಲಿನೊಳಕ್ಕೆ ಮೊಬೈಲ್ ಸಾಗಿಸುತ್ತಿದ್ದ ಜಾಲ ಭೇದಿಸಿದ ಪೊಲೀಸರು

## ಮೂವರು ಕಾರಾಗೃಹ ಸಿಬ್ಬಂದಿ ಸೇರಿ 9 ಮಂದಿ ಬಂಧನ

**ಬೆಂಗಳೂರು, ಸೆ.11:** ಕೇಂದ್ರ ಕಾರಾಗೃಹದೊಳಗೆ ಪೂರೈಕೆಯಾಗುತ್ತಿದ್ದ ಮೊಬೈಲ್ ಸಾಗಾಣಿಕೆ ಜಾಲವನ್ನು ಭೇದಿಸಿರುವ ಪರಪ್ಪನ ಅಗ್ರಹಾರ ಠಾಣೆ ಪೊಲೀಸರು ಮೂವರು ಜೈಲು ಸಿಬ್ಬಂದಿ ಸೇರಿದಂತೆ 9 ಮಂದಿಯನ್ನು ಬಂಧಿಸಿದ್ದಾರೆ.

ಪರಪ್ಪನ ಅಗ್ರಹಾರ ಕಾರಾಗೃಹದ ಸಿಬ್ಬಂದಿಗಳಾದ ಪ್ರಕಾಶ್ ಮಹಾವೀರ್, ವಿಜಯ್‌ಕುಮಾರ್ ಹಾಗೂ ಶ್ರೀನಿವಾಸ್ ನಾಯ್ಕ ಮತ್ತು ವಿಚಾರಣಾಧೀನ ಖೈದಿ ಪ್ರತಾಪ್ ರಾಯ್, ಪ್ರಜ್ವಲ್ ರೇವಣ್ಣ, ನವೀನ್ ಕುಮಾರ್ , ಸಿದ್ಧಿಕ್ , ಮೊಹಮದ್ ತೌಸಿಫ್ ಮತ್ತು ಮಂಜುನಾಥ್ ಬಂಧಿತರು.

ಹಣದ ಆಸೆಗಾಗಿ ಜೈಲಿನೊಳಗಿರುವ ಖೈದಿಗಳಿಗೆ ಒಂದು ಮೊಬೈಲ್‌ಗೆ ಒಂದು ಲಕ್ಷ ರೂ. ಹಾಗೂ ಒಂದು ಸಿಮ್‌ಗೆ 50 ಸಾವಿರ ರೂ. ಪಡೆದು ಕೊಳ್ಳಲಾಗುತ್ತಿತ್ತು ಎಂಬ ಮಾಹಿತಿ ತನಿಖೆಯಿಂದ ತಿಳಿದು ಬಂದಿದೆ.

ಈ ಹಿಂದೆ ಕಾರಾಗೃಹದ ಮೇಲೆ ದಾಳಿ ಮಾಡಿದ ಸಂದರ್ಭದಲ್ಲಿ ನಾಲ್ಕು ಮೊಬೈಲ್‌ಗಳು, ಎರಡು ಸಿಮ್ ಕಾರ್ಡ್‌ಗಳು ಹಾಗೂ ಚಾರ್ಜರ್ ಪತ್ತೆಯಾಗಿರುವ ಬಗ್ಗೆ ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಪೊಲೀಸರು ತನಿಖೆ ಮುಂದುವರೆಸಿದಾಗ ಏರ್‌ಟೇಲ್‌ಗೆ ಸೇರಿದ ಎರಡು ಸಿಮ್‌ಗಳ ಮೇಲೆ ನಮೂದಿಸಿದ್ದ ನಂಬರ್ ಆಧಾರದಲ್ಲಿ ಈ ನಂಬರ್‌ಗಳು ಯಾವ ಮೊಬೈಲ್‌ಗಳಲ್ಲಿ ಬಳಕೆಯಾಗಿವೆ ಎಂಬುವುದನ್ನು ಸಿಇಐಆರ್ ಪೋರ್ಟಲ್ ಮೂಲಕ ತಾಂತ್ರಿಕ ಮಾಹಿತಿಯನ್ನು ಸಂಗ್ರಹಿಸಿದ್ದಾರೆ.

ಈ ಆಧಾರದ ಮೇಲೆ ಎರಡು ಮೊಬೈಲ್‌ಗಳು ಕೇಂದ್ರ ಕಾರಾಗೃಹದ ವೀಕ್ಷಕ ಸಿಬ್ಬಂದಿ ಶ್ರೀನಿವಾಸ್ ನಾಯ್ಕ ಬಳಿ ಇರುವುದು ಪತ್ತೆಯಾಗುತ್ತಿದ್ದಂತೆ ಆತನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ರಾಹುಲ್ ಎಂಬ ಅಪರಿಚಿತನ ಹೆಸರಿನಲ್ಲಿ ಖರೀದಿ ಮಾಡಿರುವುದು ಗೊತ್ತಾಗಿದೆ. ಅಲ್ಲದೇ ಇದೇ ರೀತಿ ಸುಮಾರು 12 ಮೊಬೈಲ್‌ಗಳನ್ನು ಖರೀದಿ ಮಾಡಿ ತನ್ನ ಬಳಿ ಇಟ್ಟುಕೊಂಡು ಅಕ್ರಮವಾಗಿ ಕೇಂದ್ರ ಕಾರಾಗೃಹದೊಳಗೆ ಸರಬರಾಜು ಮಾಡಿರುವುದು ವಿಚಾರಣೆ ವೇಳೆ ಬಹಿರಂಗಗೊಂಡಿದೆ.

ಮತ್ತೊಂದು ಪ್ರಕರಣದಲ್ಲಿ ಕೇಂದ್ರ ಕಾರಾಗೃಹದಲ್ಲಿ ದೊರೆತ ಒಂದು ಮೊಬೈಲ್ ಹಾಗೂ ಸಿಮ್ ಕಾರ್ಡ್ ಬಗ್ಗೆ ಪೊಲೀಸರು ತನಿಖೆ ಚುರುಕುಗೊಳಿಸಿದಾಗ , ಸಿಮ್ ನಂಬರ್ ಆಧಾರದಲ್ಲಿ ಮೊಬೈಲ್ ಕಂಪನಿ ಯೊಂದಿಗೆ ಸಮಾಲೋಚನೆ ನಡೆಸಿದಾಗ ಆ ಮೊಬೈಲ್ ಆಂಧ್ರ




ಪ್ರದೇಶದ ಏಜೆನ್ಸಿಯೊಂದಕ್ಕೆ ಮಾರಾಟವಾಗಿರುವುದು ಗೊತ್ತಾಗಿದೆ.

ಈ ಮಾಹಿತಿ ಲಭ್ಯವಾಗುತ್ತಿದ್ದಂತೆ ಮೊಬೈಲ್ ಮಾರಾಟದ ಸಂಪೂರ್ಣ ವಿವರಗಳನ್ನು ಪಡೆದುಕೊಂಡು ಪರಿಶೀಲನೆ ಮಾಡಿದಾಗ ಭರತ್ ಅಲಿಯಾಸ್ ಭುವನ್ ಎಂಬ ವ್ಯಕ್ತಿ ಖರೀದಿ ಮಾಡಿರುವುದು ಗೊತ್ತಾಗಿದೆ. ಆತನ ಬಗ್ಗೆ ಮಾಹಿತಿ ಕಲೆಹಾಕಿ ಆತನನ್ನು ಪತ್ತೆಹಚ್ಚಿ ಪರಿಶೀಲನೆ ನಡೆಸಿದಾಗ ಕಾರಾಗೃಹದಲ್ಲಿರುವ ಭರತ್ ಅಲಿಯಾಸ್ ಕೆಟಿಎಂ ಭರತ್ ಸೂಚನೆಯಂತೆ ಕೇಂದ್ರ ಕಾರಾಗೃಹದ ಮುಖ್ಯ ವೀಕ್ಷಕ ವಿಜಯ್‌ಕುಮಾರ್ ನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಈ ಪ್ರಕರಣದಲ್ಲಿ ಭಾಗಿಯಾಗಿರುವುದಾಗಿ ಹೇಳಿದ್ದಾನೆ.

ಸಿಸಿಬಿ ಪೊಲೀಸರು ನೀಡಿದ ಇನ್ನೊಂದು ಪ್ರಕರಣದಲ್ಲಿ ಕೇಂದ್ರ ಕಾರಾಗೃಹ ಭದ್ರತಾ ವಿಭಾಗ ಬ್ಯಾರಕ್‌ಗಳಲ್ಲಿ ವಿಚಾರಣಾದಿನ ಖೈದಿ ಪ್ರತಾಪ್ ರಾಯ್ ಹಾಗೂ ಪ್ರಜ್ವಲ್ ರೇವಣ್ಣ ಕೊಠಡಿಯಲ್ಲಿ ದೊರೆತ ಸಿಮ್ ಹಾಗೂ ಮೊಬೈಲ್‌ನ್ನು ಕಾರಾಗೃಹದ ವಾರ್ಡರ್ ಸಿಬ್ಬಂದಿ ಮೂಲಕ ಸಾಗಾಣೆ ಮಾಡಿರುವುದು ಗೊತ್ತಾಗಿದೆ. ಇದಕ್ಕೆ ಸಂಬಂಧಿಸಿದಂತೆ ಐದು ಮಂದಿಯನ್ನು ಬಂಧಿಸಲಾಗಿದೆ.

ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಯಲ್ಲಿ ಮೂರು ಪ್ರಕರಣಗಳು ದಾಖಲಾಗಿದ್ದು, ಪೊಲೀಸರು ತನಿಖೆ ಕೈಗೊಂಡು 9 ಮಂದಿಯನ್ನು ಬಂಧಿಸಿದ್ದಾರೆ.

# ಕರ್ನಾಟಕದಲ್ಲಿ ಭತ್ತ, ದ್ವಿದಳ ಧಾನ್ಯ ಬಿತ್ತನೆ ಕುಸಿತ

**ಬೆಂಗಳೂರು, ಸೆ.11:** ರಾಜ್ಯದಲ್ಲಿ ಮುಂಗಾರು ಮಳೆ ಕೈಕೊಟ್ಟ ಪರಿಣಾಮ ಈ ವರ್ಷ ಖಾರಿಫ್ ಋತುವಿನ ಭತ್ತದ ಬಿತ್ತನೆ ಗಣನೀಯವಾಗಿ ಕುಸಿದಿದೆ. ಕರ್ನಾಟಕದಲ್ಲಿ ಕಳೆದ ವರ್ಷಕ್ಕಿಂತ 4.28 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಭತ್ತದ ಬಿತ್ತನೆ ಕಡಿಮೆಯಾಗಿದೆ ಎಂದು ಕೇಂದ್ರ ಕೃಷಿ ಸಚಿವಾಲಯ ಬಿಡುಗಡೆ ಮಾಡಿರುವ ಅಂಕಿ–ಅಂಶಗಳು ತಿಳಿಸಿವೆ.



ದೇಶಾದ್ಯಂತ ಈ ವರ್ಷ ಖಾರಿಫ್ ಋತುವಿನಲ್ಲಿ ಭತ್ತದ ಬಿತ್ತನೆ ಪ್ರಮಾಣ ಶೇ.3.71ರಷ್ಟು ಕುಸಿದಿದ್ದು, ಒಟ್ಟು 421.82 ಲಕ್ಷ ಹೆಕ್ಟೇರ್ಗೆ ಇಳಿಕೆಯಾಗಿದೆ. ಕಳೆದ ವರ್ಷ ಇದೇ ಅವಧಿಯಲ್ಲಿ 438.19 ಲಕ್ಷ ಹೆಕ್ಟೇರ್‌ನಲ್ಲಿ ಭತ್ತ ಬಿತ್ತನೆಯಾಗಿತ್ತು. ಅಂದರೆ, ದೇಶದಲ್ಲಿ ಒಟ್ಟು 16.37 ಲಕ್ಷ ಹೆಕ್ಟೇರ್ ಇಳಿಕೆ ಕಂಡುಬಂದಿದೆ.

**ಮಳೆ ಕೊರತೆ ಪರಿಣಾಮ**

**ಕೇಂದ್ರ ಕೃಷಿ ಸಚಿವಾಲಯದ ಅಂಕಿಅಂಶಗಳಿಂದ ಮಾಹಿತಿ**

ಈ ಕುಸಿತದಲ್ಲಿ ಕರ್ನಾಟಕವೂ ಪ್ರಮುಖ ರಾಜ್ಯವಾಗಿದ್ದು, ಅತಿ ಹೆಚ್ಚು ಇಳಿಕೆ ಕಂಡ ರಾಜ್ಯಗಳ ಪಟ್ಟಿಯಲ್ಲಿ ಮೊದಲ ಸ್ಥಾನದಲ್ಲಿದೆ. ಕರ್ನಾಟಕದಲ್ಲಿ ಜೂನ್ ಮತ್ತು ಜುಲೈ ತಿಂಗಳಲ್ಲಿ ಹಲವು ಭಾಗಗಳಲ್ಲಿ ನಿರೀಕ್ಷಿತ ಪ್ರಮಾಣದ ಮಳೆಯಾಗದಿರುವುದು ಭತ್ತದ ಕೃಷಿಗೆ ತೀವ್ರ ಹಿನ್ನಡೆ ತಂದಿದೆ. ಮಳೆ ಕೊರತೆಯಿಂದಾಗಿ ಭತ್ತ ಬೆಳೆಯುವ ಪ್ರಮುಖ ಜಿಲ್ಲೆಗಳಾದ ರಾಯಚೂರು, ಕೊಪ್ಪಳ, ಯಾದಗಿರಿ, ಬಳ್ಳಾರಿ, ಶಿವಮೊಗ್ಗ, ಮಂಡ್ಯ, ಮೈಸೂರು ಸೇರಿದಂತೆ ಹಲವು ಪ್ರದೇಶಗಳಲ್ಲಿ ಕೃಷಿ ಚಟುವಟಿಕೆಗಳು ಮಂದಗತಿಗೊಂಡಿವೆ.

ಎಲ್ ನಿನೊ ಪರಿಣಾಮದಿಂದಾಗಿ ನೈಋತ್ಯ ಮುಂಗಾರು ಪ್ರವೇಶ ವಿಳಂಬವಾಗಿದ್ದು, ಮಳೆ ಕೊರತೆಯೂ ಉಂಟಾಯಿತು. ಇದರ ಪರಿಣಾಮವಾಗಿ ನೀರಾವರಿ ಹಾಗೂ ಮಳೆಯನ್ನೇ ಅವಲಂಬಿಸಿರುವ ಭತ್ತದ ಬೆಳೆ ಪ್ರದೇಶಗಳಲ್ಲಿ ರೈತರು ಬಿತ್ತನೆ ಕೈಗೊಳ್ಳಲು ಅಥವಾ ವಿಸ್ತರಿಸಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಯಿತು.

**ದ್ವಿದಳ ಧಾನ್ಯದಲ್ಲೂ ಕರ್ನಾಟಕಕ್ಕೆ ಹಿನ್ನಡೆ**

ಭತ್ತದ ಜತೆಗೆ ದ್ವಿದಳ ಧಾನ್ಯಗಳ ಬಿತ್ತನೆಯಲ್ಲೂ ಕರ್ನಾಟಕ ಹಿನ್ನಡೆ ಕಂಡಿದೆ. ದೇಶದ ಒಟ್ಟಾರೆ ದ್ವಿದಳ ಧಾನ್ಯ ಬಿತ್ತನೆ ಪ್ರಮಾಣ ಕಳೆದ ವರ್ಷಕ್ಕಿಂತ ಹೆಚ್ಚಾಗಿದ್ದರೂ, ಕರ್ನಾಟಕದಲ್ಲಿ ಮಾತ್ರ ಗಣನೀಯ ಇಳಿಕೆ ದಾಖಲಾಗಿದೆ. ದೇಶದಲ್ಲಿ ಕಳೆದ ವರ್ಷ ಇದೇ ಅವಧಿಯಲ್ಲಿ 115.30 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ದ್ವಿದಳ ಧಾನ್ಯಗಳ ಬಿತ್ತನೆಯಾಗಿದ್ದರೆ, ಈ ವರ್ಷ 117.13 ಲಕ್ಷ ಹೆಕ್ಟೇರ್‌ಗೆ ಏರಿಕೆಯಾಗಿದೆ. ಅಂದರೆ, ದೇಶದ ಮಟ್ಟದಲ್ಲಿ 1.84 ಲಕ್ಷ ಹೆಕ್ಟೇರ್ ಹೆಚ್ಚಳವಾಗಿದೆ. ಆದರೆ ಕರ್ನಾಟಕದಲ್ಲಿ 2.07 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ದ್ವಿದಳ ಧಾನ್ಯ ಬಿತ್ತನೆ ಕಡಿಮೆಯಾಗಿದೆ. ಮಹಾರಾಷ್ಟ್ರದಲ್ಲಿ 2.60 ಲಕ್ಷ ಹೆಕ್ಟೇರ್ ಹಾಗೂ ಒಡಿಶಾದಲ್ಲಿ 0.61 ಲಕ್ಷ ಹೆಕ್ಟೇರ್ ಇಳಿಕೆಯಾಗಿದೆ. ಇದಕ್ಕೆ ವಿರುದ್ಧವಾಗಿ ಉತ್ತರ ಪ್ರದೇಶದಲ್ಲಿ 3.97 ಲಕ್ಷ ಹೆಕ್ಟೇರ್, ಜಾರ್ಖಂಡ್‌ನಲ್ಲಿ 0.98 ಲಕ್ಷ ಹೆಕ್ಟೇರ್, ತೆಲಂಗಾಣದಲ್ಲಿ 0.90 ಲಕ್ಷ ಹೆಕ್ಟೇರ್, ರಾಜಸ್ಥಾನದಲ್ಲಿ 0.57 ಲಕ್ಷ ಹೆಕ್ಟೇರ್ ಹಾಗೂ ಮಧ್ಯಪ್ರದೇಶದಲ್ಲಿ 0.38 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ದ್ವಿದಳ ಧಾನ್ಯ ಬಿತ್ತನೆ ಹೆಚ್ಚಾಗಿದೆ.



ಬೆಂಗಳೂರಿನ ಬಸವೇಶ್ವರ ನಗರದಲ್ಲಿ (10ನೇ ಸೆಪ್ಟೆಂಬರ್ 2026) ಕರ್ನಾಟಕ ರಾಜ್ಯದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಧಿಕಾರ ವಹಿಸಿಕೊಂಡು 100 ದಿನಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಕರ್ನಾಟಕ ರಾಜ್ಯ ಗ್ಯಾರಂಟಿ ಸ್ಕೀಮ್ಸ್ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಚ್.ಎಂ.ರೇವಣ್ಣ ಸಾರ್ವಜನಿಕರಿಗೆ ಸಿಹಿ ಹಂಚಿ ಸಂಭ್ರಮಾಚರಿಸಿದರು.

# ಶರಣಬಸವೇಶ್ವರ ಕರೆಯ ಸುತ್ತಲೂ ನಿರ್ಮಿಸಿರುವ ಸುಂದರವದ ವಾಕಿಂಗ್ ಟ್ರ್ಯಾಕ್: ಶರಣಬಸವೇಶ್ವರ ಕೆರೆಗೆ ಸಿಗಲಿದೆ ಹೊಸ ರೂಪ

**ಕಲಬುರಗಿ, ಸೆ. 11:** ನಗರದ ಹೃದಯ ಭಾಗದಲ್ಲಿರುವ ಶರಣ ಬಸವೇಶ್ವರ ಕೆರೆ ಅತ್ಯಾಕರ್ಷಕ, ಪರಿಸರ ಸ್ನೇಹಿ ಹಾಗೂ ಎಲ್ಲ ವರ್ಗದ ಜನರಿಗೆ ಅನುಕೂಲ ವಾಗುವಂತಹ ಸಮಗ್ರ ಜನಸ್ನೇಹಿ ಸಾರ್ವಜನಿಕ ತಾಣವಾಗಿ ಅಭಿವೃದ್ಧಿ ಪಡಿಸಲಾಗುತ್ತಿದೆ.

ನಗರದ ಅಭಿವೃದ್ಧಿಯಲ್ಲಿ ಸಾರ್ವಜನಿಕ ಸ್ಥಳಗಳ ಗುಣಮಟ್ಟ ಹೆಚ್ಚಿಸುವುದು ಸರ್ಕಾರದ ಪ್ರಮುಖ ಆದ್ಯತೆಗಳಲ್ಲಿ ಒಂದು. ಈ ಹಿನ್ನೆಲೆಯಲ್ಲಿ ಶರಣಬಸವೇಶ್ವರ ಕೆರೆಯ ಸುತ್ತ ಮುತ್ತಲಿನ ಪ್ರದೇಶ ಸಮಗ್ರ ಅಭಿವೃದ್ಧಿ ಪಡಿಸಿ, ನಾಗರಿಕರಿಗೆ ಉತ್ತಮ ವಾತಾವರಣ, ಮನರಂಜನೆ, ವಾಯುವಿಹಾರ ಹಾಗೂ ಸಾಮಾಜಿಕ



ಚಟುವಟಿಕೆಗಳಿಗೆ ಅನುಕೂಲವಾಗುವ ಆಧುನಿಕ ಸಾರ್ವಜನಿಕ ಆಕರ್ಷಕ ತಾಣವನ್ನಾಗಿ ರೂಪಿಸುವ ಉದ್ದೇಶ ಹೊಂದಲಾಗಿದೆ.

ಗ್ರಾಮದೇವತೆ ಶರಣಬಸವೇಶ್ವರ ದೇವಸ್ಥಾನದ ಎದುರಲ್ಲಿರುವುದರಿಂದ ಈ ಕರೆಗೆ ಮೊದಲಿಂದಲೂ ಶರಣಬಸವೇಶ್ವರ ಕೆರೆ ಎಂದೇ ಸಾರ್ವಜನಿಕರು ಕರೆಯುತ್ತಾರೆ. ಕೆರೆಯ ದಡವನ್ನು ಸುಂದರವಾಗಿ ಮರುರೂಪಿಸುವುದರ ಜತೆಗೆ, ಕೆರೆಯ ನೈಸರ್ಗಿಕ ಪರಿಸರ ಸಂರಸಿ ಅಭಿವೃದ್ಧಿ ಕಾರ್ಯ ಕೈಗೊಳ್ಳಲಾಗುತ್ತಿದೆ. ಹಸಿರು ಪರಿಸರದೊಂದಿಗೆ ವಿನ್ಯಾಸಗೊಳಿಸಿ ನಡಿಗೆ ಮಾರ್ಗ, ಆಸನ ವ್ಯವಸ್ಥೆ, ಮನರಂಜನಾ ಸ್ಥಳ, ಮಕ್ಕಳ ಆಟದ ವಲಯ ಹಾಗೂ ವಿವಿಧ ಚಟುವಟಿಕೆಗಳಿಗೆ ಅನುಕೂಲವಾಗುವಂತೆ ಈ ಪ್ರದೇಶ ಅಭಿವೃದ್ಧಿಪಡಿಸಲಾಗುತ್ತಿದೆ.

ಕಲಬುರಗಿ ನಗರಕ್ಕೆ ಅಗತ್ಯವಿರುವ ಆಧುನಿಕ ಸಾರ್ವಜನಿಕ ಮೂಲ ಸೌಕರ್ಯ ಹಂತ, ಹಂತವಾಗಿ ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಸರ್ಕಾರ ಬದ್ಧವಾಗಿದೆ. ನಗರದ ಸೌಂದರ್ಯೀಕರಣದ ಜತೆಗೆ ನಾಗರಿಕರ ಜೀವನಮಟ್ಟ ಸುಧಾರಿಸುವಂತಹ ಯೋಜನೆಗಳಿಗೆ ಆದ್ಯತೆ ನೀಡಲಾಗುತ್ತಿದೆ. ಈ ನಿಟ್ಟಿನಲ್ಲಿ ಶರಣಬಸವೇಶ್ವರ ಕೆರೆ ಅಭಿವೃದ್ಧಿ ಯೋಜನೆಯು ಮತ್ತೊಂದು ಪ್ರಮುಖ ಸಾರ್ವಜನಿಕ ಆಸ್ತಿ ರೂಪಿಸಿದೆ.

**ಶರಣಬಸವೇಶ್ವರ ಕೆರೆಯನ್ನು ಸೌಂದರ್ಯೀಕರಣಗೊಳಿಸಿ, ಹಸಿರು ಮತ್ತು ಆರೋಗ್ಯಕರ ಹಾಗೂ ಚೈತನ್ಯಮಯ ಸಾರ್ವಜನಿಕ ತಾಣವನ್ನಾಗಿ ರೂಪಿಸುವುದು ನಮ್ಮ ಉದ್ದೇಶ. ಭವಿಷ್ಯದಲ್ಲಿ ನಗರದ ಈ ಕರೆ ಹೊಸ ಹೆಗ್ಗುರುತಾಗಬೇಕು ಎಂಬುದು ನಮ್ಮೆಲ್ಲರ ಆಶಯ.**

**– ಪ್ರಿಯಾಂಕ್ ಖರ್ಗೆ, ಜಿಲ್ಲಾ ಉಸ್ತುವಾರಿ ಸಚಿವರು.**

# ಬರ ಘೋಷಣೆಗೆ ಆಗ್ರಹಿಸಿ ಉಪವಾಸ ಸತ್ಯಾಗ್ರಹ, ಅಹೋರಾತ್ರಿ ಧರಣಿ

**ಬೀದರ, ಸೆ. 11:** ಮುಂಗಾರು ಮಳೆ ಸಂಪೂರ್ಣ ಕೈಕೊಟ್ಟಿದ್ದರಿಂದ ಪರಿಸ್ಥಿತಿ ಅತ್ಯಂತ ದುರ್ಭರವಾಗಿದೆ. ಆದ್ದರಿಂದ ಹುಲಸೂರ ತಾಲ್ಲೂಕನ್ನು ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸುವ ವರೆಗೆ ಉಪವಾಸ ಸತ್ಯಾಗ್ರಹ ಹಾಗೂ ಅಹೋರಾತ್ರಿ ಧರಣಿ ಕೈಬಿಡುವುದಿಲ್ಲ ಎಂದು ನವಕಲ್ಯಾಣ ಕರ್ನಾಟಕ ಮಹಾಸಭಾ ಕಾರ್ಯದರ್ಶಿ ಡಾ. ಶಂಕರಗೌಡ ಹೇಳಿದರು.

ಜಿಲ್ಲೆಯ ಹುಲ್ಸೂರ ಪಟ್ಟಣದ ಅಲ್ಲಮಪ್ರಭು ಶೂನ್ಯಪೀಠದಿಂದ ತಹಶೀಲ್ದಾರ್ ಕಚೇರಿವರೆಗೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ, ಕಲ್ಯಾಣ ಕರ್ನಾಟಕ ಮಹಾಸಭಾ ಸೇರಿದಂತೆ ವಿವಿಧ ರೈತ ಸಂಘಟನೆಗಳ



ನೇತೃತ್ವದಲ್ಲಿ ಬುಧವಾರ ಪ್ರತಿಭಟನಾ ಮೆರವಣಿಗೆ ನಡೆಸಿ, ಬಳಿಕ ತಹಶೀಲ್ದಾರ್ ಕಚೇರಿ ಎದುರು ಹಮ್ಮಿಕೊಂಡ ಉಪವಾಸ ಸತ್ಯಾಗ್ರಹ ಹಾಗೂ ಅಹೋರಾತ್ರಿ ಧರಣಿಯಲ್ಲಿ ಮಾತನಾಡಿ, ಬೀದರ್ ಜಿಲ್ಲೆಯ ನಾಲ್ಕು ತಾಲ್ಲೂಕುಗಳನ್ನು ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸಲಾಗಿದೆ. ಉಳಿದ ತಾಲ್ಲೂಕುಗಳಿಗೂ ಬರಗಾಲದ ಪರಿಸ್ಥಿತಿ ಇದ್ದು, ಸರ್ಕಾರದ ಮಲತಾಯಿ ಧೋರಣೆ ಸರಿಯಲ್ಲ. ಹುಲಸೂರು ತಾಲ್ಲೂಕು ಬರಗಾಲ ಘೋಷಣೆಗೆ ಅಗತ್ಯ ಅರ್ಹತೆ ಹೊಂದಿದ್ದರೂ ನಿರ್ಲಕ್ಷ್ಯ ವಹಿಸಲಾಗುತ್ತಿದೆ. ಕೂಡಲೇ ಸೂಕ್ತ ನಿರ್ಧಾರ ಕೈಗೊಂಡು ರೈತರಿಗೆ ನ್ಯಾಯ ಒದಗಿಸಬೇಕು. ಇಲ್ಲವಾದಲ್ಲಿ ಹೋರಾಟದ ಸ್ವರೂಪವನ್ನು ಹಂತ ಹಂತವಾಗಿ ತೀವ್ರಗೊಳಿಸಲಾಗುವುದು ಎಂದು ಎಚ್ಚರಿಸಿದರು.

ರೈತ ಮುಖಂಡ ರಾಜಕುಮಾರ ನಿಡೋದೆ ಮಾತನಾಡಿ, ಹುಲಸೂರ ತಾಲ್ಲೂಕಿನ ರೈತರ ಸಂಕಷ್ಟವನ್ನು ಸಂಬಂಧಪಟ್ಟವರು ಗಂಭೀರವಾಗಿ ಪರಿಗಣಿಸಬೇಕು. ಸರ್ಕಾರ ನಿಗದಿಪಡಿಸಿರುವ ಮಾನದಂಡಗಳಂತೆ ತಾಲ್ಲೂಕು ಬರಗಾಲ ಘೋಷಣೆಗೆ ಅರ್ಹವಾಗಿದ್ದರೂ ಘೋಷಣೆ ಮಾಡದಿರುವುದು ಖಂಡನೀಯ ಎಂದರು.

ಪ್ರತಿಭಟನಕಾರರು 'ನ್ಯಾಯ ಬೇಕೇ ಬೇಕು', ಹುಲಸೂರು ತಾಲ್ಲೂಕನ್ನು ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸಬೇಕು ಎಂಬ ಘೋಷಣೆಗಳನ್ನು ಕೂಗಿದರು.

# ಮಳೆ ನೀರು ಶೇಖರಿಸಿ, ಅಂತರ್ಜಲ ಹೆಚ್ಚಿಸಿ: ವೀಣಾ ನಿರಂಜನ್

**ಬೀದರ್, ಸೆ. 11:** ಬರಗಾಲದಂಥ ಪರಿಸ್ಥಿತಿಯಲ್ಲಿ ಅಂತರ್ಜಲವೂ ಇಲ್ಲದಿದ್ದರೆ ಸಮಸ್ತ ಜೀವ ಸಂಕುಲಕ್ಕೆ ಬಹುದೊಡ್ಡ ಹಾನಿಯಾಗಲಿದೆ. ಜೀವಿಗಳು ಉಳಿಯುವುದೇ ಕಷ್ಟವಗಿ ಪರಿಣಮಿಸಬಹುದು. ಮನುಷ್ಯ ಬೇರೆಡೆ ವಕಲಸೆ ಹೋಗಬಹುದು. ಆದರೆ ಪ್ರಾಣಿಗಳೂ ಸೇರಿದಂತೆ ಇತರ ಜೀವಿಗಳು ಏನು ಮಾಡಬೇಕು? ಆದ್ದರಿಂದ ಅಂತರ್ಜಲ ಕಾಯ್ದು ಕೊಳ್ಳುವುದು ಅತ್ಯಂತ ಮಹತ್ವದ್ದಾಗಿದೆ. ಮಳೆ ನೀರು ಶೇಖರಿಸಿ, ಅಂತರ್ಜಲ ಹೆಚ್ಚಿಸಲು ಹೆಚ್ಚಿನ ಒತ್ತು ನೀಡಬೇಕು. ಜಲ ಸಂರಕ್ಷಣಾ ಜಾಗೃತಿ ಕಾರ್ಯ



ಅನಿವಾರ್ಯವಾಗಿದೆ ಎಂದು ಜಲ ಸಂಪನ್ಮೂಲ ಇಲಾಖೆಯ ಸಹಾಯಕ ಕಾರ್ಯಪಾಲಕ ಎಂಜಿನಿಯರ್ ವೀಣಾ ನಿರಂಜನ್ ತಿಳಿಸಿದರು.

ಆಹಾರವಿಲ್ಲದೇ ಕೇವಲ ನೀರು ಸೇವಿಸಿ ಕೆಲ ದಿನಗಳ ವರೆಗೆ ಜೀವಿಗಳು ಬದುಕಲು ಸಾಧ್ಯವಿದೆ. ಆದರೆ, ನೀರೇ ಇಲ್ಲದಿದ್ದರೆ ಯಾವ ಜೀವಿಯೂ ಬದುಕಲು ಸಾಧ್ಯವಿಲ್ಲ. ಅಷ್ಟೇ ಅಲ್ಲ ಪ್ರತಿಯೊಮದು ಸಸ್ಯ ಗಿಡ ಮರಗಳೂ ಕೂಡ ಈ ಭೂಮಿಯ ಮೇಲೆ ನೀರಿಲ್ಲದೇ ಬದುಕಲಾಗದು. ಆದ್ದರಿಂದ ಪ್ರತಿಯೊಂದಕ್ಕೂ ನೀರಿನ ಅಗತ್ಯ ಎಷ್ಟಿದೆ ಎಂಬುದನ್ನು ಪ್ರತಿಯೊಬ್ಬರೂ ತಿಳಿದುಕೊಳ್ಳುವುದು ಮತ್ತು ನೀರನ್ನು ಉಳಿಸುವುದು ಅಗತ್ಯವೆಂದರು.

# ಬಿಜೆಪಿ ಹಿರಿಯ ಕಾರ್ಯಕರ್ತ ಎಸ್.ಬಿ.ತಿಮ್ಮಪ್ಪ ಬಳ್ಳಾರಿ ಚಲೋ ಪಾದಯಾತ್ರೆಯಲ್ಲಿ ಹೃದಯಾಘಾತದಿಂದ ಸಾವು- ಗಾಲಿ ಜನಾರ್ಧನ್ ರೆಡ್ಡಿ ಅರುಣಾಲಕ್ಷ್ಮಿ ಭೇಟಿ, ಸಾಂತ್ವನ



**ಬಳ್ಳಾರಿ ಸೆ 11**. ಎರಡು ದಿನಗಳ ಹಿಂದೆ ಬಳ್ಳಾರಿ ಚಲೋ ಪಾದ ಯಾತ್ರೆಯ ಸಂದರ್ಭದಲ್ಲಿ ಬಿಜೆಪಿ ಪಕ್ಷದ ಹಿರಿಯ ಕಾರ್ಯ ಕರ್ತರಾದ ಎಸ್.ಬಿ. ತಿಮ್ಮಪ್ಪ ಅವರು ಬಿಜೆಪಿ ಅವರು ಹಮ್ಮಿಕೊಂಡಿದ್ದ ಬಳ್ಳಾರಿ ಚಲೋ ಪಾದಯಾತ್ರೆಯಲ್ಲಿ ಹೃದಯಾಘಾತದಿಂದ ಮೃತಪಟ್ಟಿದ್ದಾರೆ.

ಸುದ್ದಿ ತಿಳಿದ ತಕ್ಷಣ ಇಂದು ಅವರ ನಿವಾಸಕ್ಕೆ ಗಾಲಿ ಜನಾರ್ಧನರೆಡ್ಡಿ ಮತ್ತು ಧರ್ಮಪತ್ನಿ ಲಕ್ಷ್ಮಿ ಅರುಣ ಅವರೊಂದಿಗೆ ತೆರಳಿ, ಕುಟುಂಬದ ಸದಸ್ಯರಿಗೆ ಸಾಂತ್ವನ ಹೇಳಿ, ಈ ದುಃಖದ ಸಂದರ್ಭದಲ್ಲಿ ಅವರೊಂದಿಗೆ ನಾವಿದ್ದೇವೆ ಎಂಬ ಭರವಸೆ ನೀಡಿ ಆತ್ಮಸ್ಥೈರ್ಯ ತುಂಬುವ ಕೆಲಸ ಮಾಡಲಾಯಿತು. ಬಳ್ಳಾರಿ ಜಿಲ್ಲಾ ಘಟಕದ ವತಿಯಿಂದ ಆರ್ಥಿಕ ಸಹಾಯ ಮಾಡಲಾಯಿತು.

ಭಗವಂತನು ಅವರ ಆತ್ಮಕ್ಕೆ ಚಿರಶಾಂತಿಯನ್ನು ಕರುಣಿಸಲಿ. ಅವರ ಅಗಲಿಕೆಯ ನೋವನ್ನು ಭರಿಸುವ ಶಕ್ತಿಯನ್ನು ಕುಟುಂಬದ ಸದಸ್ಯರಿಗೆ ನೀಡಲಿ ಎಂದು ಪ್ರಾರ್ಥಿಸಿದ್ದಾರೆ.

ಈ ಸಂದರ್ಭದಲ್ಲಿ ಮೃತ ತಿಮ್ಮಪ್ಪನ ಕುಟುಂಬದ ಸದಸ್ಯರು ಜನಾರ್ದನ ರೆಡ್ಡಿ ಅವರೊಂದಿಗೆ ಮಾತನಾಡುತ್ತಾ ನಾವು ಬಹಳ ಬಡವರು ಆಗಿದ್ದು, ನಮ್ಮ ಕುಟುಂಬಕ್ಕೆ ಮೂಲಸ್ಥಂಭ ಆಗಿದ್ದ ತಿಮ್ಮಪ್ಪನವರು ಪಾದಯಾತ್ರೆಯಲ್ಲಿ ಹೃದಯಾಘಾತದಿಂದ ಸಾವನ್ನಪ್ಪಿರುವುದರಿಂದ ಪಕ್ಷದ ವತಿಯಿಂದ ನಮ್ಮ ಕುಟುಂಬಕ್ಕೆ ಆರ್ಥಿಕ ಸಹಾಯವನ್ನು ಮಾಡಬೇಕೆಂದು ಮನವಿ ಮಾಡಿಕೊಂಡಿದ್ದಾರೆ.

# ಯುವ ಮತದಾರರು ಪ್ರಜಾಪ್ರಭುತ್ವದ ಶಕ್ತಿಯಾಗಬೇಕು




**ಬಳ್ಳಾರಿ, ಸೆ.11.**ಯುವ ಮತದಾರರು ಪ್ರಜಾಪ್ರಭುತ್ವದ ಪ್ರಮುಖ ಶಕ್ತಿಯಾಗಿದ್ದು, ಪ್ರತಿಯೊಬ್ಬ ಅರ್ಹ ಯುವಕ–ಯುವತಿಯೂ ಮತದಾರರಾಗಿ ನೋಂದಾಯಿಸಿ ಕೊಂಡು ತಮ್ಮ ಮತದಾನದ ಹಕ್ಕನ್ನು ಜವಾಬ್ದಾರಿಯುತವಾಗಿ ಚಲಾಯಿಸ ಬೇಕು ಎಂದು ಜಿಲ್ಲಾಧಿಕಾರಿ ಕೆ. ನಾಗೇಂದ್ರ ಪ್ರಸಾದ್ ಅವರು ಕರೆ ನೀಡಿದರು.

ನಗರದ ಬಳ್ಳಾರಿ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಅಂಡ್ ಮ್ಯಾನೇಜ್‌ಮೆಂಟ್ ಸಂಸ್ಥೆಯ ಚುನಾವಣಾ ಸಾಕ್ಷರತಾ ಕ್ಲಬ್, ಭಾರತ ಚುನಾವಣಾ ಆಯೋಗ ಹಾಗೂ ಜಿಲ್ಲಾ ಪಂಚಾಯತ್ ಸಹಯೋಗದಲ್ಲಿ ಶುಕ್ರವಾರ ಆಯೋಜಿಸಿದ್ದ ಮತದಾರರ ಗುರುತಿನ ಚೀಟಿ ನೋಂದಣಿ ಅಭಿಯಾನ–2026ಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಚುನಾವಣಾ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಭಾಗವಹಿಸುವ ಮೂಲಕ ಯುವಜನತೆ ಪ್ರಜಾಪ್ರಭುತ್ವವನ್ನು ಮತ್ತಷ್ಟು ಬಲಪಡಿಸಬೇಕು. ಮತದಾನ ಕೇವಲ ಹಕ್ಕಲ್ಲ, ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದೆ. ಯಾವುದೇ ಪ್ರಲೋಭನೆ, ಧರ್ಮ, ಜಾತಿ, ಭಾಷೆ ಅಥವಾ ಸಮುದಾಯದ ಪ್ರಭಾವಕ್ಕೆ ಒಳಗಾಗದೆ ವಿವೇಚನೆ ಯಿಂದ ಮತ ಚಲಾಯಿಸಬೇಕು ಎಂದು ಅವರು ವಿದ್ಯಾರ್ಥಿಗಳಿಗೆ ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಯುವಜನರಲ್ಲಿ ಚುನಾವಣಾ ಸಾಕ್ಷರತೆ ಮೂಡಿಸುವುದು ಮತ್ತು ಅರ್ಹ ವಿದ್ಯಾರ್ಥಿಗಳನ್ನು ಮತದಾರರಾಗಿ ನೋಂದಾಯಿಸುವುದು ಅತ್ಯಂತ ಮಹತ್ವದ್ದಾಗಿದೆ. ವಿದ್ಯಾರ್ಥಿಗಳು ತಮ್ಮ ಕುಟುಂಬ ಹಾಗೂ ಸಮಾಜದಲ್ಲಿಯೂ ಮತದಾನದ ಮಹತ್ವದ ಕುರಿತು ಜಾಗೃತಿ ಮೂಡಿಸುವಂತೆ ಹೇಳಿದರು.

ಅರ್ಹ ವಯಸ್ಸನ್ನು ತಲುಪಿರುವ ವಿದ್ಯಾರ್ಥಿಗಳು ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು ಮತದಾರರಾಗಿ ನೋಂದಾಯಿಸಿಕೊಳ್ಳುವಂತೆ ತಿಳಿಸಿದರು.

ಕಾರ್ಯಕ್ರಮದ ಅಂಗವಾಗಿ ಅರ್ಹ ವಿದ್ಯಾರ್ಥಿಗಳಿಗೆ ಮತದಾರರ ನೋಂದಣಿ ಪ್ರಕ್ರಿಯೆ, ಅಗತ್ಯ ಕ್ರಮಗಳು ಹಾಗೂ ಮತದಾನದ ಮಹತ್ವದ ಕುರಿತು ಅಧಿಕಾರಿಗಳು ಮತ್ತು ಸಾಕ್ಷರತಾ ಕ್ಲಬ್‌ನ ಸದಸ್ಯರು ಮಾರ್ಗದರ್ಶನ ನೀಡಿದರು.

ಇದೇ ವೇಳೆ ಭಾಗವಹಿಸಿದ್ದ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಮುಕ್ತ, ನ್ಯಾಯಸಮ್ಮತ ಮತ್ತು ಶಾಂತಿಯುತ ಚುನಾವಣೆಗಾಗಿ ಮತದಾರರ ಪ್ರತಿಜ್ಞೆ ಸ್ವೀಕರಿಸಿದರು.

# ಅಂಕೋಲಾ: ದಿನಕರರ ಸ್ಮರಣೆ, ಉಪನ್ಯಾಸ

**ಅಂಕೋಲಾ, ಸೆ.11–** ದಿನಕರ ದೇಸಾಯಿಯವರ ತತ್ವಾದರ್ಶಗಳನ್ನು ಅನುಸರಿಸುವುದೇ ನಾವು ಅವರಿಗೆ ಸಲ್ಲಿಸುವ ನಿಜವಾದ ಗೌರವವಾಗಿದೆ. ದೇಸಾಯಿಯವರು ನಿಸ್ವಾರ್ಥ ಜನಸೇವಕರಾಗಿ ಕಾವ್ಯದಿಂದ ಜನಸೇವೆಗೆ ಸ್ಫೂರ್ತಿ ಪಡೆದವರು. ಸೇವೆಗಾಗಿ ತಮ್ಮ ಬದುಕನ್ನೆ ಸಮರ್ಪಿಸಿದವರು. ಇಂತಹ ಮಹಾನುಭಾವರನ್ನು ನೆನೆಯುವುದು ನಮ್ಮ ಆದ್ಯ ಕರ್ತವ್ಯವಾಗಿದೆ ಎಂದು ಜೈಹಿಂದ್ ಎಜ್ಯುಕೇಶನ್ ಸೊಸೈಟಿಯ ಅಧ್ಯಕ್ಷಸಂಜಯ ಕಾಮತ ಹೇಳಿದರು.



ಪಟ್ಟಣದ ಜೈಹಿಂದ್ ಹೈಸ್ಕೂಲ್ ಸಭಾಭವನದಲ್ಲಿ ದಿನಕರ ದೇಸಾಯಿ ಸ್ಮಾರಕ ಪ್ರತಿಷ್ಠಾನದ ವತಿಯಿಂದ ಏರ್ಪಡಿಸಿದ ದಿನಕರ ದೇಸಾಯಿಯವರ 117ನೇ ಜನ್ಮದಿನದ ಪ್ರಯುಕ್ತ ದಿನಕರರ ಸ್ಮರಣೆ ಹಾಗೂ ಉಪನ್ಯಾಸ ಕಾರ್ಯಮದಅಧ್ಯಕ್ಷತೆ ವಹಿಸಿಅವರು ಮಾತನಾಡಿದರು.

ನಿವೃತ್ತ ಉಪನ್ಯಾಸಕ ಮಹೇಶ ನಾಯಕ ಅವರುದಿನಕರ ದೇಸಾಯಿಯವರ ಬದುಕು ಬರಹ ಕುರಿತು ಉಪನ್ಯಾಸ ನೀಡಿದರು. ನಿವೃತ್ತ ಪ್ರಾಚಾರ್ಯ ಮೋಹನ ಹಬ್ಬು ಮಾತನಾಡಿದರು. ಪ್ರತಿಷ್ಠಾನದ ಕಾರ್ಯದರ್ಶಿ ಜಗದೀಶ ಜಿ. ನಾಯಕ ಹೊಸ್ಕೇರಿ ದಿನಕರ ಪ್ರತಿಷ್ಠಾನದ ಧ್ಯೇಯೋದ್ದೇಶಗಳು ಮತ್ತು ಕಾರ್ಯಚಟುವಟಿಕೆಗಳ ಬಗ್ಗೆ ಪರಿಚಯಿಸಿದರು. ಜೈಹಿಂದ್ ಹೈಸ್ಕೂಲಿನ ಮುಖ್ಯಾಧ್ಯಾಪಕ ಪ್ರಭಾಕರ ಬಂಟ, ದಿನಕರ ಪ್ರತಿಷ್ಠಾನದ ಖಜಾಂಚಿ ಮಹಾಂತೇಶ ರೇವಡಿ ನಿರೂಪಿಸಿದರು.

ನಿವೃತ್ತ ಶಿಕ್ಷಕ ಪ್ರಶಾಂತ ವಾಯ್. ನಾಯ್ಕ ವಂದಿಸಿದರು.

ವೇದಿಕೆಯಲ್ಲಿ ಪ್ರತಿಷ್ಠಾನದ ಸದಸ್ಯರಾದ ಜಯಶೀಲ ಆಗೇರ, ಲಲಿತಾ ನಾಯ್ಕ ಉಪಸ್ಥಿತರಿದ್ದರು. ಸಭೆಯಲ್ಲಿ ಹೊನ್ನಮ್ಮ ನಾಯಕ, ಪ್ರೊ. ಎನ್.ಡಿ. ಅಂಕೋಲೆಕರ, ಅನಂತ ನಾಯ್ಕ, ಆರ್.ವಿ. ನಾಯಕ, ಜೆ. ಪ್ರೇಮಾನಂದ, ಶಿಕ್ಷಕಿಯರಾದ ಮೀನಾಕ್ಷಿ ಜಾಲಿ, ಮಧುರಾ ಭಟ್ಟ, ಸಂಧ್ಯಾ ಹೆಗ್ರೆ ಇತರರಿದ್ದರು.

# ಅಂಕೋಲಾ: ಜಿ.ಟಿ. ನಾಯ್ಕರಿಗೆ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಸ್ಥಾನ

ಅಂಕೋಲಾ, ಸೆ.11–ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾಗಿ ಜಿ.ಟಿ.ನಾಯ್ಕ ನೇಮಕವಾಗಿರುವುದು ಶ್ಲಾಘನಿಯವಾಗಿದೆ. ಕಾಂಗ್ರೆಸ್ ಪಕ್ಷವು ಬಹುಸಂಖ್ಯಾತ ನಾಮಧಾರಿಗಳಿಗೆ ಈ ಹುದ್ದೆ ನೀಡಿರುವುದು ನಿಜಕ್ಕೂ ಸಂತಸ ಉಂಟಾಗಿದೆ. ಹಾಗೇ ಜಿ.ಟಿ.ನಾಯ್ಕ ಅವರು ಕೂಡ ಸಜ್ಜನ ವ್ಯಕ್ತಿತ್ವದವರಾಗಿದ್ದು ತಮಗೆ ನೀಡಿದ ಹುದ್ದೆಯನ್ನುಅತ್ಯಂತ ಪ್ರಾಮಾಣಿಕವಾಗಿ ನಡೆಸುವ ಭರವಸೆಯಿದೆ. ಇವರ ಆಯ್ಕೆಗೆ ರಾಷ್ಟ್ರೀಯ ಈಡಿಗ ಮಹಾಮಂಡಳಿಯ ತಾಲೂಕು ಅಧ್ಯಕ್ಷ ದಾಮೋದರ ಜಿ. ನಾಯ್ಕ, ಉಪಾಧ್ಯಕ್ಷರಾದ ರಮೇಶ ಎಸ್. ನಾಯ್ಕ, ರಮೇಶ ಎನ್. ನಾಯ್ಕ, ಶ್ರೀಪಾದ ನಾಯ್ಕ, ಯುವಘಟಕದ ಅಧ್ಯಕ್ಷ ಮಂಜುನಾಥ ಕೆ.ನಾಯ್ಕ, ವಸಂತ ನಾಯ್ಕ, ಸಂಜಯ ನಾಯ್ಕ ಸೇರಿದಂತೆ ಹಲವರು ಅಭಿನಂದಿಸಿದ್ದಾರೆ.



# ಗಣೇಶ ಹಬ್ಬ: ಡಿ.ಜೆ-ಸೌಂಡ್ ಸಿಸ್ಟಂ ಸಂಪೂರ್ಣ ನಿಷೇಧ



**ಬಳ್ಳಾರಿ, ಸೆ.11:** ಗೌರಿ–ಗಣೇಶ ಹಬ್ಬದ ಆಚರಣೆ ಹಾಗೂ ವಿಸರ್ಜನಾ ಮೆರವಣಿಗೆಗಳ ಸಂದರ್ಭದಲ್ಲಿ ಸಾರ್ವಜನಿಕ ಶಾಂತಿ, ಕಾನೂನು–ಸುವ್ಯವಸ್ಥೆ ಮತ್ತು ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಬಳ್ಳಾರಿ ಜಿಲ್ಲೆಯಾದ್ಯಂತ ಡಿಜೆ ಮತ್ತು ಹೈ–ಬೇಸ್ ಸೌಂಡ್ ಸಿಸ್ಟಂ ಬಳಕೆಯನ್ನು ಸಂಪೂರ್ಣವಾಗಿ ನಿಷೇಧಿಸಿ ಜಿಲ್ಲಾಧಿ ಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ಕೆ. ನಾಗೇಂದ್ರ ಪ್ರಸಾದ್ ಅವರು ಆದೇಶ ಹೊರಡಿಸಿದ್ದಾರೆ.

ವಿಶೇಷವಾಗಿ ವಿಸರ್ಜನಾ ಮೆರವಣಿಗೆಗಳಲ್ಲಿ ಅತಿಯಾದ ಶಬ್ದ ಉಂಟುಮಾಡುವ ಡಿಜೆ ಬಾಕ್ಸ್‌ಗಳಿಂದ ಉಂಟಾಗುವ ನಿರಂತರ ಶಬ್ದ ಮಾಲಿನ್ಯವು ವಯೋವೃದ್ಧರು, ಚಿಕ್ಕ ಮಕ್ಕಳು, ಬಾಣಂತಿಯರು ಹಾಗೂ ಹೃದಯ ಸಂಬಂಧಿ ಕಾಯಿಲೆಗಳಿಂದ ಬಳಲುತ್ತಿರುವವರ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುವ ಸಾಧ್ಯತೆಯಿದ್ದು ಡಿಜೆ ಸೌಂಡ್ ಸಿಸ್ಟಂ, ಹೈ–ಬೇಸ್ ಸಿಸ್ಟಂ, ಡಿ.ಜೆ ಬಾಕ್ಸ್‌ಗಳು ಹಾಗೂ ಹೆಚ್ಚಿನ ಶಬ್ದ ಉಂಟುಮಾಡುವ ಯಾವುದೇ ಧ್ವನಿವರ್ಧಕ ಉಪಕರಣಗಳ ಬಳಕೆಯನ್ನು ನಿಷೇಧಿಸಲಾಗಿದೆ.

## ಬರದ ನಾಡಿಗೆ ಭದ್ರೆಯ ನೀರು-ಚಿತ್ರದುರ್ಗದ ಜನರ ದಶಕಗಳ ಕನಸು ನನಸಾಗುವ ಐತಿಹಾಸಿಕ ಕ್ಷಣ

# ಜನರ ಹೋರಾಟಕ್ಕೆ ಜನಮಾಧ್ಯಮದ ಧ್ವನಿ-ಭದ್ರಾ ಮೇಲ್ದಂಡೆ ಯೋಜನೆ ಸಾಕಾರಕ್ಕೆ ಮಾಧ್ಯಮಗಳ ಮಹತ್ವದ ಕೊಡುಗೆ

**ಬರದ ನಾಡು–ಮಠಗಳ ಬೀಡು ಎಂದೇ ಗುರುತಿಸಿಕೊಂಡಿರುವ ಚಿತ್ರದುರ್ಗ ಜಿಲ್ಲೆಯ ಜನರು ದಶಕಗಳಿಂದ ಎದುರು ನೋಡುತ್ತಿದ್ದ ಭದ್ರಾ ಮೇಲ್ದಂಡೆ ಯೋಜನೆ ಸಾಕಾರಗೊಳ್ಳುತ್ತಿರುವುದು ಜಿಲ್ಲೆಯ ಇತಿಹಾಸದಲ್ಲಿ ಅತ್ಯಂತ ಮಹತ್ವದ ಹಾಗೂ ಸಂತಸದ ಬೆಳವಣಿಗೆಯಾಗಿದೆ.**

ನೂರಾರು ವರ್ಷಗಳಿಂದ ಬರಗಾಲದ ಸಂಕಷ್ಟಕ್ಕೆ ತುತ್ತಾಗಿರುವ ಚಿತ್ರದುರ್ಗ ಜಿಲ್ಲೆಯ ರೈತರು ಮಳೆಯನ್ನೇ ಅವಲಂಬಿಸಿ, ಅನೇಕ ಸಂದರ್ಭಗಳಲ್ಲಿ ವರ್ಷಕ್ಕೆ ಒಂದೇ ಬೆಳೆ ಬೆಳೆಯುವ ಅನಿವಾರ್ಯ ಪರಿಸ್ಥಿತಿಯನ್ನು ಎದುರಿಸುತ್ತಿದ್ದಾರೆ. ಹಲವಾರು ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯೂ ತೀವ್ರವಾಗಿದ್ದು, ಫ್ಲೋರೈಡ್ಯುಕ್ತ ನೀರನ್ನು ಅವಲಂಬಿಸ ಬೇಕಾದ ಪರಿಸ್ಥಿತಿಯೂ ಜನರನ್ನು ಕಾಡಿದೆ. ಇಂತಹ ಪರಿಸ್ಥಿತಿಯಲ್ಲಿ ಚಿತ್ರದುರ್ಗದ ಬರಡು ಭೂಮಿಗೆ ಭದ್ರೆಯ ನೀರನ್ನು ಹರಿಸಿ, ರೈತರ ಬದುಕಿಗೆ ಹೊಸ ಭರವಸೆ ನೀಡಬೇಕು ಎಂಬ ಮಹದಾಸೆಯಿಂದ ಹಲವು ವರ್ಷಗಳಿಂದ ನಡೆದ ಹೋರಾಟ ಇಂದು ಫಲಪ್ರದವಾಗುತ್ತಿರುವುದು ನಿಜಕ್ಕೂ ಐತಿಹಾಸಿಕ ಸಾಧನೆಯಾಗಿದೆ.

ಇದು ಕೇವಲ ಒಂದು ಯೋಜನೆಯ ಯಶಸ್ಸಲ್ಲ, ಭದ್ರಾ ಮೇಲ್ದಂಡೆ ಯೋಜನೆಯ ಯಶಸ್ಸು ಕೇವಲ ಒಂದು ನೀರಾವರಿ ಯೋಜನೆಯ ಯಶಸ್ಸಲ್ಲ.

ಇದು ಚಿತ್ರದುರ್ಗದ ರೈತರ ಹೋರಾಟದ ಜಯ, ವಿದ್ಯಾರ್ಥಿಗಳ ಹಾಗೂ ಯುವಜನರ ಕನಸಿನ ಜಯ, ಹೋರಾಟಗಾರರ ತ್ಯಾಗ ಮತ್ತು ಪರಿಶ್ರಮದ ಜಯ, ಜನಪ್ರತಿನಿಧಿಗಳ ನಿರಂತರ ಪ್ರಯತ್ನದ ಫಲ, ರಾಜಕೀಯ ನಾಯಕರು ತೋರಿದ ಇಚ್ಛಾಶಕ್ತಿಯ ಪ್ರತಿಫಲ,ಇದು ಅಧಿಕಾರಿಗಳು ಹಾಗೂ ಇಂಜಿನಿಯರ್ಗಳ ಪರಿಶ್ರಮದ ಫಲ. ಮತ್ತು ಮುಖ್ಯವಾಗಿ, ಇದು ಇಡೀ ಚಿತ್ರದುರ್ಗ ಜಿಲ್ಲೆಯ ಜನತೆಯ ಒಗ್ಗಟ್ಟಿನ ಶಕ್ತಿಯ ಜಯ.

ಈ ಯೋಜನೆಗಾಗಿ ನಿರಂತರವಾಗಿ ಹೋರಾಟ ನಡೆಸಿದ ಭದ್ರಾ ಮೇಲ್ದಂಡೆ ಯೋಜನೆ ಹೋರಾಟ ಸಮಿತಿಯ ಎಲ್ಲಾ ಪದಾಧಿಕಾರಿಗಳು ಹಾಗೂ ಸದಸ್ಯರು, ರೈತ ಸಂಘಟನೆಗಳು, ವಿದ್ಯಾರ್ಥಿ ಸಂಘಟನೆಗಳು, ಯುವ 'ಜನರು, ಮಹಿಳೆಯರು ಹಾಗೂ ವಿವಿಧ ಸಂಘಟನೆಗಳ ಪ್ರತಿಯೊಬ್ಬ ಹೋರಾಟಗಾರರಿಗೂ ಹೃದಯ ಪೂರ್ವಕ ಅಭಿನಂದನೆಗಳು. ಯೋಜನೆಗೆ ಸರ್ಕಾರದ ಮಟ್ಟದಲ್ಲಿ ನಿರಂತರವಾಗಿ ಪ್ರಯತ್ನಿಸಿ, ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಗಮನ ಸೆಳೆದು, ಅಗತ್ಯವಾದ ರಾಜಕೀಯ ಹಾಗೂ ಆಡಳಿತಾತ್ಮಕ ಬೆಂಬಲ ಒದಗಿಸಿದ ಎಲ್ಲಾ ಮಾಜಿ ಹಾಗೂ ಹಾಲಿ ಸಚಿವರು, ಸಂಸದರು, ಶಾಸಕರು, ಜನಪ್ರತಿನಿಧಿಗಳು ಹಾಗೂ ರಾಜಕೀಯ ಮುಖಂಡರಿಗೂ ಜಿಲ್ಲೆಯ ಜನತೆಯ ಪರವಾಗಿ ಹೃತ್ಪೂರ್ವಕ ಅಭಿನಂದನೆಗಳು ಮತ್ತು ಕೃತಜ್ಞತೆಗಳನ್ನು ಸಲ್ಲಿಸಲಾಗುತ್ತದೆ. ಅದೇ ರೀತಿ, ಯೋಜನೆ ಯನ್ನು ಅನುಷ್ಠಾನಗೊಳಿಸುವಲ್ಲಿ ಹಗಲಿರುಳು ಶ್ರಮಿಸಿದ ಜಲಸಂಪನ್ಮೂಲ ಇಲಾಖೆಯ ಅಧಿಕಾರಿಗಳು, ಭದ್ರಾ ಮೇಲ್ದಂಡೆ ಯೋಜನೆಯ ಮುಖ್ಯ ಇಂಜಿನಿಯರ್ ಹಾಗೂ ಅವರ ನೇತೃತ್ವದ ತಾಂತ್ರಿಕ ತಂಡ, ಅಧೀಕ್ಷಕ ಇಂಜಿನಿಯರ್ಗಳು, ಕಾರ್ಯಪಾಲಕ ಇಂಜಿನಿಯರ್‌ಗಳು, ಸಹಾಯಕ ಇಂಜಿನಿಯರ್‌ಗಳು, ಕಿರಿಯ ಇಂಜಿನಿಯರ್ ಗಳು, ತಾಂತ್ರಿಕ ಸಿಬ್ಬಂದಿ, ಗುತ್ತಿಗೆದಾರರು ಹಾಗೂ ಕಾಮಗಾರಿಯಲ್ಲಿ ನೇರವಾಗಿ ದುಡಿದ ಕಾರ್ಮಿಕರಿಗೂ ವಿಶೇಷ ಅಭಿನಂದನೆಗಳನ್ನು ಸಲ್ಲಿಸಲಾಗುತ್ತದೆ.

**ಜನರ ಧ್ವನಿಯಾಗಿ ನಿಂತ ಪತ್ರಿಕಾ ಮಾಧ್ಯಮಗಳಿಗೆ ವಿಶೇಷ ಕೃತಜ್ಞತೆ:** ಭದ್ರಾ ಮೇಲ್ದಂಡೆ ಯೋಜನೆಯ ಸಾಕಾರದಲ್ಲಿ ಪತ್ರಿಕಾ ಮಾಧ್ಯಮಗಳ ಪಾತ್ರವನ್ನು ವಿಶೇಷ ವಾಗಿ ಸ್ಮರಿಸಬೇಕಾಗಿದೆ. ಈ ಯೋಜನೆಯ ಅಗತ್ಯತೆ, ಜಿಲ್ಲೆಯ ಬರ ಪರಿಸ್ಥಿತಿ, ರೈತರ ಸಂಕಷ್ಟ, ಯೋಜನೆಯ ಕಾಮಗಾರಿಯ ಪ್ರಗತಿ, ವಿಳಂಬದ ವಿಚಾರಗಳು ಹಾಗೂ ಸಂಬಂಧಿಸಿದ ವಿವಿಧ ಸಮಸ್ಯೆಗಳನ್ನು ಪತ್ರಿಕೆಗಳಲ್ಲಿ ಹಲವಾರು ಬಾರಿ ವರದಿ ಮಾಡುವ ಮೂಲಕ ಸರ್ಕಾರಗಳು, ಜನಪ್ರತಿನಿಧಿಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳ ಗಮನವನ್ನು ಸೆಳೆಯುವಲ್ಲಿ ಪತ್ರಿಕಾ ಮಾಧ್ಯಮಗಳು ಮಹತ್ವದ ಪಾತ್ರ ವಹಿಸಿವೆ. ಕೇವಲ ಸುದ್ದಿಯನ್ನು ಪ್ರಕಟಿಸುವುದಷ್ಟೇ ಅಲ್ಲದೆ, ಜನರ ನೋವಿಗೆ ಧ್ವನಿಯಾಗಿ, ರೈತರ ಬೇಡಿಕೆಗೆ ವೇದಿಕೆಯಾಗಿ, ಕಾಮಗಾರಿಯ ಪ್ರಗತಿಯನ್ನು ನಿರಂತರವಾಗಿ ಜನರ ಮುಂದಿಡುತ್ತಾ, ಅಗತ್ಯವಿದ್ದ ಸಂದರ್ಭದಲ್ಲಿ ಸಂಬಂಧಿಸಿದ ಇಲಾಖೆ ಗಳು ಮತ್ತು ಸರ್ಕಾರಗಳ ಗಮನಕ್ಕೆ ವಿಷಯವನ್ನು ತಲುಪಿಸುವ ಮೂಲಕ ಯೋಜನೆಯ ಕಾಮಗಾರಿಯನ್ನು ಆದಷ್ಟು ಶೀಘ್ರವಾಗಿ ಪೂರ್ಣಗೊಳಿಸುವ ನಿಟ್ಟಿನಲ್ಲಿ ಮಾಧ್ಯಮಗಳು ನೀಡಿದ ಸಹಕಾರ ಅತ್ಯಂತ ಶ್ಲಾಘನೀಯವಾಗಿದೆ.

ವಿಶೇಷವಾಗಿ ಈ ವಿಚಾರಕ್ಕೆ ಸಂಬಂಧಿಸಿದಂತೆ ನಿರಂತರವಾಗಿ ಸುದ್ದಿ, ವರದಿ, ಸಂಪಾದಕೀಯ, ವಿಶೇಷ ಲೇಖನ, ಸಂದರ್ಶನ ಹಾಗೂ ವಿಶ್ಲೇಷಣೆಗಳ ಮೂಲಕ ಭದ್ರಾ ಮೇಲ್ದಂಡೆ ಯೋಜನೆಯ ಮಹತ್ವವನ್ನು ಜನರಿಗೆ ಹಾಗೂ ಸರ್ಕಾರಕ್ಕೆ ಮನವರಿಕೆ ಮಾಡಿಕೊಟ್ಟ ಎಲ್ಲಾ ಪತ್ರಿಕೆಗಳ ಸಂಪಾದಕರು, ಹಿರಿಯ ಪತ್ರಕರ್ತರು, ವರದಿಗಾರರು, ಛಾಯಾಗ್ರಾಹಕರು, ದೃಶ್ಯ ಮಾಧ್ಯಮದ ಪ್ರತಿನಿಧಿಗಳು ಹಾಗೂ ಡಿಜಿಟಲ್ ಮಾಧ್ಯಮದ ಪತ್ರಕರ್ತರಿಗೆ ಹೃತ್ಪೂರ್ವಕ ಅಭಿನಂದನೆಗಳು.

ಪತ್ರಿಕಾ ಮಾಧ್ಯಮವು ಪ್ರಜಾಪ್ರಭುತ್ವದ ನಾಲ್ಕನೇ ಅಂಗ ಮಾತ್ರವಲ್ಲ; ಜನರ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತಲುಪಿಸುವ ಸೇತುವೆಯೂ ಹೌದು ಎಂಬುದನ್ನು ಭದ್ರಾ ಮೇಲ್ದಂಡೆ ಯೋಜನೆಯ ಹೋರಾಟ ಮತ್ತೊಮ್ಮೆ ಸಾಬೀತುಪಡಿ ಸಿದೆ. ಜನರ ಹೋರಾಟಕ್ಕೆ ಮಾಧ್ಯಮದ ಧ್ವನಿ ಸೇರಿದಾಗ ಅದು ಆಡಳಿತದ ಗಮನ ಸೆಳೆಯುತ್ತದೆ; ಆಡಳಿತದ ಗಮನಕ್ಕೆ ಬಂದಾಗ ಅಭಿವೃದ್ಧಿಯ ಕಾರ್ಯಗಳಿಗೆ ವೇಗ ದೊರೆಯುತ್ತದೆ. ಈ ಅರ್ಥದಲ್ಲಿ ಭದ್ರಾ ಮೇಲ್ದಂಡೆ ಯೋಜನೆಯ ಹೋರಾಟದಲ್ಲಿ ಪತ್ರಿಕಾ ಮಾಧ್ಯಮಗಳ ಕೊಡುಗೆ ಕೂಡ ಸ್ಮರಣೀಯವಾದದ್ದು.

**ಭದ್ರೆಯ ನೀರು ಎಂದರೆ ಜಿಲ್ಲೆಯ ಭವಿಷ್ಯದ ಭರವಸೆ:** ಭದ್ರಾ ಮೇಲ್ದಂಡೆ ಯೋಜನೆ ಯಿಂದ ಚಿತ್ರದುರ್ಗ ಜಿಲ್ಲೆಯ ಕೃಷಿ ಚಟುವಟಿಕೆಗಳಿಗೆ ಹೊಸ ಚೈತನ್ಯ ದೊರೆಯುವ ನಿರೀಕ್ಷೆಯಿದೆ. ಬರಡು ಭೂಮಿಗೆ ನೀರು ದೊರೆತು ಹಸಿರು ವಾತಾವರಣ ನಿರ್ಮಾಣವಾಗುವುದ ರೊಂದಿಗೆ ರೈತರ ಆರ್ಥಿಕ ಸ್ಥಿತಿಯಲ್ಲಿ ಸುಧಾರಣೆ, ಗ್ರಾಮೀಣ ಆರ್ಥಿಕತೆಯಲ್ಲಿ ಚೇತರಿಕೆ ಹಾಗೂ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಹೊಸ ಅವಕಾಶಗಳು ಸೃಷ್ಟಿಯಾಗುವ ಆಶಾಭಾವನೆ ಮೂಡಿದೆ.

'ಭದ್ರೆಯ ನೀರು ಚಿತ್ರದುರ್ಗದ ನೆಲವನ್ನು ತಲುಪುವುದು ಎಂದರೆ ಕೇವಲ ನೀರು ಹರಿಯುವುದಲ್ಲ; ಅದು ರೈತನ ಬದುಕಿನಲ್ಲಿ ಭರವಸೆ ಹರಿಯುವುದು'ಎಂಬ ಆಶಯ ದೊಂದಿಗೆ ಈ ಯೋಜನೆಯ ಯಶಸ್ಸನ್ನು ಇಡೀ ಜಿಲ್ಲೆಯ ಜನತೆ ಸ್ವಾಗತಿಸಬೇಕಾಗಿದೆ. ವರ್ಷಗಳ ಹೋರಾಟ, ಪರಿಶ್ರಮ, ತ್ಯಾಗ ಮತ್ತು ನಿರೀಕ್ಷೆಯ ಫಲವಾಗಿ ದೊರೆಯುತ್ತಿರುವ ಈ ಮಹತ್ವದ ಸಾಧನೆಯನ್ನು ಪತ್ರಿಕಾ ಹಾಗೂ ದೃಶ್ಯ ಮಾಧ್ಯಮಗಳು ಇನ್ನಷ್ಟು ವ್ಯಾಪಕವಾಗಿ ಜನರಿಗೆ ತಲುಪಿಸುವ ಮೂಲಕ, ಈ ಐತಿಹಾಸಿಕ ಹೋರಾಟದ ಹಿನ್ನೆಲೆ ಹಾಗೂ ಯೋಜನೆ ಸಾಕಾರಗೊಳಿಸಲು ಶ್ರಮಿಸಿದ ಪ್ರತಿಯೊಬ್ಬರ ಕೊಡುಗೆಯನ್ನು ದಾಖಲಿಸಬೇಕು ಎಂದು ಮನವಿ ಮಾಡಲಾಗಿದೆ. ಭದ್ರಾ ಮೇಲ್ದಂಡೆ ಯೋಜನೆ ಚಿತ್ರದುರ್ಗ ಜಿಲ್ಲೆಯ ಪಾಲಿಗೆ ಕೇವಲ ನೀರಾವರಿ ಯೋಜನೆಯಲ್ಲ. ಇದು ರೈತರ ಬದುಕಿನ ಆಶಾಕಿರಣ, ಬರದ ನಾಡಿನ ಭವಿಷ್ಯದ ಭರವಸೆ, ಇದು ಮುಂದಿನ ಪೀಳಿಗೆಯ ಸಮೃದ್ಧಿಯ ಕನಸು, ಇದು ಜನರ ಹೋರಾಟ, ಜನಪ್ರತಿನಿಧಿಗಳ ಪ್ರಯತ್ನ, ಅಧಿಕಾರಿಗಳ ಪರಿಶ್ರಮ ಹಾಗೂ ಮಾಧ್ಯಮಗಳ ನಿರಂತರ ಧ್ವನಿಯ ಒಟ್ಟಾರೆ ಫಲ. "ಭದ್ರೆ ಹರಿಯಲಿ, ಚಿತ್ರದುರ್ಗ ಹಸಿರಾಗಲಿ, ರೈತನ ಬದುಕು ಸಮೃದ್ಧವಾಗಲಿ, ಮುಂದಿನ ಪೀಳಿಗೆ ನೆಮ್ಮದಿಯಿಂದ ಬದುಕಲಿ" ಭದ್ರಾ ಮೇಲ್ದಂಡೆ ಯೋಜನೆ ಸಾಕಾರಗೊಳಿ ಸಲು ಹೋರಾಟ ಮಾಡಿದ ಪ್ರತಿಯೊಬ್ಬ ಹೋರಾಟಗಾರರಿಗೂ, ಪ್ರಯತ್ನಿಸಿದ ಪ್ರತಿಯೊಬ್ಬ ಜನಪ್ರತಿನಿಧಿಗೂ, ಶ್ರಮಿಸಿದ ಪ್ರತಿಯೊಬ್ಬ ಅಧಿಕಾರಿ ಹಾಗೂ ಇಂಜಿನಿಯರ್ಗೂ ಮತ್ತು ಜನರ ಧ್ವನಿಯಾಗಿ ನಿರಂತರವಾಗಿ ವರದಿ ಮಾಡಿದ ಪ್ರತಿಯೊಬ್ಬ ಪತ್ರಕರ್ತ ಹಾಗೂ ಮಾಧ್ಯಮ ಮಿತ್ರರಿಗೂ ಚಿತ್ರದುರ್ಗ ಜಿಲ್ಲೆಯ ಸಮಸ್ತ ಜನತೆಯ ಪರವಾಗಿ ಹೃತ್ಪೂರ್ವಕ ಅಭಿನಂದನೆಗಳು ಹಾಗೂ ಕೃತಜ್ಞತೆಗಳು ಎಂದು ಮಂಜುನಾಥ ಕೆ. ಮಾಜಿ ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಲೆಕ್ಕಾಧಿಕಾರಿ, ಕೇಂದ್ರ ವಲಯ, ಲೋಕೋಪಯೋಗಿ ಇಲಾಖೆ, ಶಿವಮೊಗ್ಗ ಇವರು ತಿಳಿಸಿದ್ದಾರೆ.

# ಡ್ರೋನ್ ಬೆದರಿಕೆ ತಡೆಯಲು ಸಿಐಎಸ್‌ಎಫ್, ಡಿಎಫ್‌ಐ ನಡುವೆ ಒಪ್ಪಂದ



ರಾಯಚೂರು ನಗರದ ಉಷ್ಣ ವಿದ್ಯುತ್ ಸ್ಥಾವರ ಘಟಕದಲ್ಲಿ ಸಿಐಎಸ್‌ಎಫ್ ಜೊತೆಗೆ ವಿಮಾನ ನಿಲ್ದಾಣಗಳು, ಪರಮಾಣು ವಿದ್ಯುತ್ ಕೇಂದ್ರ, ಬಾಹ್ಯಾಕಾಶ ಕೇಂದ್ರ, ತೈಲ ಸಂಸ್ಕರಣಾಗಾರ ಸೇರಿದಂತೆ ಸೂಕ್ಷ್ಮ ಹಾಗೂ ಪ್ರಮುಖ ಮೂಲಸೌಕರ್ಯಗಳಿಗೆ ಎದುರಾಗುವ ಡ್ರೋಣ್ ಬೆದರಿಕೆ ತಡೆಯಲು ಕೇಂದ್ರ ಕೈಗಾರಿಕಾ ಭದ್ರತಾ ಪಡೆಯೊಂದಿಗೆ ಡ್ರೋಣ್ ಫೆಡರೇಶನ್ ಆಫ್ ಇಂಡಿಯಾ ನಡುವೆ ಸಾಮರಸ್ಯ ಒಪ್ಪಂದ ನಡೆಯಿತು.

**ರಾಯಚೂರು, ಸೆ. 11:** ದೇಶದ ವಿಮಾನ ನಿಲ್ದಾಣಗಳು, ಪರಮಾಣು ವಿದ್ಯುತ್ ಕೇಂದ್ರಗಳು, ಬಾಹ್ಯಾಕಾಶ ಕೇಂದ್ರಗಳು, ತೈಲ ಸಂಸ್ಕರಣಾಗಾರಗಳು ಸೇರಿದಂತೆ 370ಕ್ಕೂ ಹೆಚ್ಚು ಸೂಕ್ಷ್ಮ ಹಾಗೂ ಪ್ರಮುಖ ಮೂಲಸೌಕರ್ಯಗಳಿಗೆ ಎದುರಾಗುವ ಡ್ರೋನ್ ಬೆದರಿಕೆಗಳನ್ನು ತಡೆಯಲು ಕೇಂದ್ರ ಕೈಗಾರಿಕಾ ಭದ್ರತಾ ಪಡೆ (ಸಿಐಎಸ್‌ಎಫ್) ಮತ್ತು ಡ್ರೋನ್ ಫೆಡರೇಶನ್ ಆಫ್ ಇಂಡಿಯಾ (ಡಿಎಫ್‌ಐ) ನಡುವೆ ಸಾಮರಸ್ಯ ಒಪ್ಪಂದ ಮಾಡಿಕೊಳ್ಳಲಾಗಿದೆ. ಈ ಒಪ್ಪಂದದ ಹಿನ್ನೆಲೆಯಲ್ಲಿ ಶಕ್ತಿನಗರದ ರಾಯಚೂರು ಉಷ್ಣ ವಿದ್ಯುತ್ ಸ್ಥಾವರ (ಆರ್‌ಟಿಪಿಎಸ್)ನ ಸಿಐಎಸ್‌ಎಫ್ ಘಟಕದಲ್ಲಿ ವಿಶೇಷ ಸಭೆ ನಡೆಯಿತು.

ಒಪ್ಪಂದದಡಿ ರಾಜಸ್ಥಾನದ ಬೆಹ್ರೋರ್‌ನಲ್ಲಿರುವ ಸಿಐಎಸ್‌ಎಫ್ ನವ ನೇಮಕಾತಿ ತರಬೇತಿ ಕೇಂದ್ರವನ್ನು ಡ್ರೋನ್ ಮತ್ತು ಕೌಂಟರ್-ಡ್ರೋನ್ ವ್ಯವಸ್ಥೆಗಳ ಅತ್ಯುತ್ತಮ ಕೇಂದ್ರವಾಗಿ ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ.

ಈಗಾಗಲೇ 3,000ಕ್ಕೂ ಹೆಚ್ಚು ಸಿಐಎಸ್‌ಎಫ್ ಸಿಬ್ಬಂದಿಗೆ ಡ್ರೋನ್ ತಂತ್ರಜ್ಞಾನದ ಕುರಿತು ತರಬೇತಿ ನೀಡಲಾಗಿದೆ. ಸುಮಾರು 80 ಘಟಕಗಳಲ್ಲಿ ನಿರಂತರ ಕಾವಲು, ಬೆದರಿಕೆ ಪತ್ತೆ ಹಾಗೂ ತರಬೇತಿ ಉದ್ದೇಶಗಳಿಗೆ ಡ್ರೋನ್‌ಗಳನ್ನು ಬಳಸಲಾಗುತ್ತಿದೆ. ಡ್ರೋನ್ ನಿಯೋಜನೆ ಹಾಗೂ ಅಪಾಯಕಾರಿ ಡ್ರೋನ್‌ಗಳನ್ನು ತಡೆಯಲು ಪ್ರಮಾಣಿತ ಕಾರ್ಯಾಚರಣೆ ವಿಧಾನಗಳು ಮತ್ತು ಕಾರ್ಯತಂತ್ರ ರೂಪಿಸುವುದು, ಅನಧಿಕೃತ ಡ್ರೋನ್ ಚಟುವಟಿಕೆಗಳ ತನಿಖೆಗೆ ಸ್ವದೇಶಿ ಫೋರೆನ್ಸಿಕ್ ಉಪಕರಣಗಳ ಅಭಿವೃದ್ಧಿ, ಜಂಟಿ ಮಾಕ್ ಡ್ರಿಲ್‌ಗಳ ಆಯೋಜನೆ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಸಹಕಾರ ನೀಡಲು ನಿರ್ಧರಿಸಲಾಗಿದೆ.

ವಿದ್ಯಾರ್ಥಿಗಳಿಗಾಗಿ ಹ್ಯಾಕಥಾನ್ ಹಾಗೂ ಸವಾಲುಗಳನ್ನು ಆಯೋಜಿಸುವುದರ ಜೊತೆಗೆ ಕಾರ್ಯಾಚರಣೆ ಆಧಾರಿತ ಹೊಸ ತರಬೇತಿ ಮಾಡ್ಯೂಲ್‌ಗಳನ್ನು ರೂಪಿಸುವ ಉದ್ದೇಶವೂ ಇದೆ. ಸಿಐಎಸ್‌ಎಫ್ ಮಹಾನಿರ್ದೇಶಕ ಪ್ರವೀಣ್ ರಂಜನ್ ಮಾತನಾಡಿ, ಗೃಹ ಸಚಿವಾಲಯದ ಮಾರ್ಗದರ್ಶನದಂತೆ ಬೆಹ್ರೋರ್ ತರಬೇತಿ ಕೇಂದ್ರವನ್ನು ಡ್ರೋನ್ ಕ್ಷೇತ್ರದ ಪ್ರಮುಖ ಕೇಂದ್ರವಾಗಿ ಅಭಿವೃದ್ಧಿ ಪಡಿಸಲು ಹಾಗೂ ಪ್ರಸ್ತುತ ವ್ಯವಸ್ಥೆಯಲ್ಲಿನ ನ್ಯೂನತೆಗಳನ್ನು ಗುರುತಿಸಿ ಸರಿಪಡಿಸಲು ಈ ಸಹಕಾರ ನೆರವಾಗಲಿದೆ ಎಂದರು.

ಡಿಎಫ್‌ಐ ಅಧ್ಯಕ್ಷ ಸ್ಮಿತ್ ಶಾ ಮಾತನಾಡಿ, ಭಾರತೀಯ ಡ್ರೋನ್ ಉದ್ಯಮವು ಸ್ವದೇಶಿ ತಂತ್ರಜ್ಞಾನ ಆವಿಷ್ಕಾರಗಳ ಮೂಲಕ ದೇಶದ ನಿರ್ಣಾಯಕ ಮೂಲಸೌಕರ್ಯಗಳ ರಕ್ಷಣೆ ಹಾಗೂ 'ಆತ್ಮನಿರ್ಭರ' ಭದ್ರತಾ ವ್ಯವಸ್ಥೆ ಬಲಪಡಿಸಲು ಬದ್ಧವಾಗಿದೆ ಎಂದು ಹೇಳಿದರು.




ಬೆಂಗಳೂರಿನ ಪೊಲೀಸ್ ಆಯುಕ್ತರ ಕಚೇರಿಯಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಕಾರ್ಪೊರೇಟ್ ಸಾಮಾಜಿಕ ಜವಾಬ್ದಾರಿ (ಸಿಎಸ್‌ಆರ್) ಅಡಿಯಲ್ಲಿ ನ್ಯೂಮೆರೋಸ್ ನಗರದಲ್ಲಿ ಗಸ್ತು ತಿರುಗಲು ದ್ವಿಚಕ್ರ ವಾಹನಗಳ ಕೊಡುಗೆಯನ್ನು ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ವೀಕ್ಷಿಸಿದರು.

## ಸೆ.15ರಿಂದ ಯುವ ಸಂಸತ್ತು ಸಭೆಗೆ ಡಿ.ಸಿ ಡಾ.ಆನಂದ ಚಾಲನೆ

# ವಿದ್ಯಾರ್ಥಿಗಳಿಂದ ವಿಧಾನಸಭೆ ಕಲಾಪದ ಪ್ರದರ್ಶನ



**ವಿಜಯಪುರ, ಸೆ.11–** ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಯುವ ಸಮುದಾಯಕ್ಕೆ ಸಂಸದೀಯ ವ್ಯವಸ್ಥೆಯನ್ನು ಪರಿಚಯಿಸುವ ಉದ್ದೇಶದಿಂದ ಸೆ. 15 ರಂದು ಯುವ ಸಂಸತ್ತು ಸಭೆಗೆ ಚಾಲನೆ ನೀಡಲಾಗುತ್ತದೆ ಎಂದು ಜಿಲ್ಲಾಧಿಕಾರಿ ಡಾ. ಆನಂದ್ ಅವರು ತಿಳಿಸಿದರು.

ಜಿಲ್ಲೆಯ ವಿವಿಧ ಇಲಾಖೆ ಅಧಿಕಾರಿಗಳೊಂದಿಗೆ ನಡೆಸಿದ ವೀಡಿಯೊ ಸಂವಾದದಲ್ಲಿ, ಯುವಕರಲ್ಲಿ ಪ್ರಜಾಪ್ರಭುತ್ವ, ಸಂವಿಧಾನ ಹಾಗೂ ಸಂಸದೀಯ ವ್ಯವಸ್ಥೆಯ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ಜಿಲ್ಲೆಯಲ್ಲಿ ಈ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ. ಈ ಬಾರಿ ಮಾನವ ಸರಪಳಿ ಹಾಗೂ ಬೈಕ್ ರ್‍ಯಾಲಿಗಳ ಬದಲಾಗಿ ಯುವ ಸಂಸತ್ತು ಕಾರ್ಯಕ್ರಮಕ್ಕೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ಸೆ.15ರಂದು ಜಿಲ್ಲಾ ಮಟ್ಟದ ಕಾರ್ಯಕ್ರಮಕ್ಕೆ ಚಾಲನೆ ದೊರೆಯ ಲಿದ್ದು, ವಿಜಯಪುರ ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಮುಖ್ಯ ಕಾರ್ಯಕ್ರಮ ಆಯೋಜಿಸಲು ಉದ್ದೇಶಿಸಲಾಗಿದೆ ತಿಳಿಸಿದ್ದಾರೆ.

ಸೆ. 16ರಿಂದ ನ. 26ರವರೆಗೆ ವಿವಿಧ ಹಂತಗಳಲ್ಲಿ ಕಾರ್ಯಕ್ರಮ ಮುಂದುವರಿಯಲಿದ್ದು, ಜಿಲ್ಲೆಯ ಎಲ್ಲ ತಾಲೂಕುಗಳಲ್ಲಿ ಅಕ್ಟೋಬರ್ 10ರೊಳಗೆ ಯುವ ಸಂಸತ್ತು ಆಯೋಜಿಸಲು ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಸೂಚಿಸಿದರು. ಸೆ.15,ರ ಸಭೆಯಲ್ಲಿ ಸಂಪನ್ಮೂಲ ವ್ಯಕ್ತಿಗಳನ್ನು ಆಹ್ವಾನಿಸಿ ಪ್ರಜಾಪ್ರಭುತ್ವದ ಮಹತ್ವ ಸಾರುವ ಉಪನ್ಯಾಸ ಹಮ್ಮಿಕೊಳ್ಳುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದರು.

## ಪರಿಸರ ಸ್ನೇಹಿ ಗಣೇಶೋತ್ಸವ ಜಲಮೂಲಗಳ ಸಂರಕ್ಷಣೆಗೆ ಸಹಕಾರಕ್ಕೆ ಮನವಿ



**ರಾಯಚೂರು, ಸೆ. 11:** ಪರಿಸರ ಸ್ನೇಹಿ ಗಣೇಶೋತ್ಸವದ ಜತೆಗೆ ಜಿಲ್ಲೆಯ ನದಿ, ಕೆರೆ, ಬಾವಿ ಸೇರಿದಂತೆ ಜಲಮೂಲಗಳ ಸಂರಕ್ಷಣೆಗೆ ಎಲ್ಲರೂ ಸಹಕರಿಸಬೇಕು' ಎಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಸಹಾಯಕ ಪರಿಸರ ಅಧಿಕಾರಿ ಗಿರೀಶ್ ಹೇಳಿದರು.

ಸೋಮವಾರ ಆಯೋಜಿಸಿದ್ದ ಪರಿಸರ ಸ್ನೇಹಿ ಗಣೇಶ ಹಬ್ಬ ಆಚರಣೆ ಕುರಿತ ಜಾಗೃತಿ ಕಾರ್ಯಕ್ರಮದಲ್ಲಿ, ನೈಸರ್ಗಿಕ ಬಣ್ಣಗಳಿಂದ ತಯಾರಿಸಿದ ಮಣ್ಣಿನ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸಿ ಪೂಜಿಸಬೇಕು. ಪ್ಲಾಸ್ಟರ್ ಆಫ್ ಪ್ಯಾರಿಸ್ ಹಾಗೂ ಲೋಹ ಮಿಶ್ರಿತ ಬಣ್ಣಗಳಿಂದ ತಯಾರಿಸಿದ ಮೂರ್ತಿಗಳ ವಿಸರ್ಜನೆಯಿಂದ ಜಲಮೂಲಗಳು ಕಲುಷಿತಗೊಳ್ಳುತ್ತವೆ. ಇದರಿಂದ ನೀರಿನ ಭೌತಿಕ ಹಾಗೂ ರಾಸಾಯನಿಕ ಗುಣಗಳಲ್ಲಿ ಬದಲಾವಣೆಯಾಗಿ ಪರಿಸರದ ಮೇಲೆ ದುಷ್ಪರಿಣಾಮ ಬೀರುತ್ತದೆ ಎಂದರು.

## ಮಾತಾ ಮಾಣಿಕೇಶ್ವರಿ ತಪೋಭೂಮಿ ಯಾನಾಗುಂದಿ ಬೆಟ್ಟದಲ್ಲಿ ಕೋಟಿಲಿಂಗ ಸ್ಥಾಪನೆ ಬೇಡ




**ಕಲಬುರಗಿ, ಸೆ. 11:** ಮಾತಾ ಮಾಣಿಕೇಶ್ವರಿ ಅಮ್ಮನವರ ತಪೋಭೂಮಿಯಾಗಿರುವ ಯಾನಾಗುಂದಿ ಬೆಟ್ಟದಲ್ಲಿ ಉದ್ದೇಶಿತ ಕೋಟಿಲಿಂಗ ಸ್ಥಾಪನೆ ಯೋಜನೆ ತಕ್ಷಣ ಸ್ಥಗಿತಗೊಳಿಸಬೇಕು. ಈ ಯೋಜನೆಗೆ ಸಂಬಂಧಿಸಿದಂತೆ ಮಾತಾ ಮಾಣಿಕೇ ಶ್ವರಿ ಟ್ರಸ್ಟ್ ಅಧ್ಯಕ್ಷ ಶಿವಯ್ಯ, ಕಾರ್ಯದರ್ಶಿ ನಟ್ಟಂ ಸುಮನ್ ಸೇರಿ ಇತರರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ವಿವಿಧ ಮಠಾಧೀಶರು ಹಾಗೂ ಭಕ್ತರು ಆಗ್ರಹಿಸಿದರು.

ನಗರದ ಸರ್ದಾರ್ ವಲ್ಲಭಭಾಯಿ ಪಟೇಲ್ ವೃತ್ತದಲ್ಲಿ ಭಕ್ತರು ಪ್ರತಿಭಟನೆ ನಡೆಸಿ, ಸರ್ದಾರ್ ವಲ್ಲಭಭಾಯಿ ಪಟೇಲ್ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿ ವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿ ಯಾನಾಗುಂದಿ ಬೆಟ್ಟದ ಧಾರ್ಮಿಕ ಹಾಗೂ ಪಾರಂಪರಿಕ ಮಹತ್ವ ಕಾಪಾಡುವಂತೆ ಆಗ್ರಹಿಸಿದರು.

ಯಾನಾಗುಂದಿ ಬೆಟ್ಟದಲ್ಲಿ ಯಾವುದೇ ರೀತಿಯ ಅಕ್ರಮ ನಿರ್ಮಾಣ ಅಥವಾ ಧಾರ್ಮಿಕ ಸ್ವರೂಪ ಬದಲಿಸುವ ಚಟುವಟಿಕೆಗಳಿಗೆ ಅವಕಾಶ ನೀಡಬಾರದು. ಸಂಬಂಧಿಸಿದ ಇಲಾಖೆಗಳ ಅನುಮತಿ ಹಾಗೂ ಕಾನೂನು ನಿಯಮ ಉಲ್ಲಂಘಿಸಿ ಕೋಟಿಲಿಂಗ ಸ್ಥಾಪನೆಗೆ ಮುಂದಾಗಿದ್ದು, ಕಾಮಗಾರಿ ತಡೆದು ಸಮಗ್ರ ತನಿಖೆ ನಡೆಸಬೇಕು. ಯಾನಾಗುಂದಿ ಬೆಟ್ಟದ ಪಾವಿತ್ರತೆ, ಧಾರ್ಮಿಕ ಪರಂಪರೆ ಮತ್ತು ಪರಿಸರ ಸಂರಕ್ಷಣೆ ಎಲ್ಲರ ಜವಾಬ್ದಾರಿ. ಯಾವುದೇ ವ್ಯಕ್ತಿ ಅಥವಾ ಸಂಸ್ಥೆ ತನ್ನ ವೈಯಕ್ತಿಕ ನಿರ್ಧಾರದಿಂದ ಇಂತಹ ಪ್ರದೇಶಗಳಲ್ಲಿ ಚಟುವಟಿಕೆ ಕೈಗೊಳ್ಳಲು ಅವಕಾಶ ನೀಡಬಾರದು

## ಜಿಲ್ಲಾ ವೃತ್ತಿ ನಾಟಕೋತ್ಸವ: ನಾಟಕ ಪರಂಪರೆ ಉಳಿಸಿ, ಬೆಳೆಸೋಣ: ಡಾ. ಕೆ.ವಿ.ನಾಗರಾಜಮೂರ್ತಿ




**ವಿಜಯಪುರ, ಸೆ.11:** ರಾಜ್ಯದಲ್ಲಿ ನಾಟಕಗಳ ಪ್ರದರ್ಶನ ಹಾಗೂ ಪರಂಪರೆ ಉಳಿಸಿ ಬೆಳೆಸಬೇಕಿದೆ. ರಂಗಭೂಮಿ ಕಲಾವಿದರು ಪ್ರದರ್ಶಿಸುವ ನಾಟಕಗಳ ಮೂಲಕ ಅವರನ್ನು ಪ್ರೋತ್ಸಾಹಿಸುವ ಸದುದ್ದೇಶದಿಂದ ರಾಜ್ಯದ ಪ್ರತಿ ಜಿಲ್ಲೆಯಲ್ಲಿ ನಾಟಕೋತ್ಸವಗಳನ್ನು ನಾಟಕ ಅಕಾಡೆಮಿ ಹಮ್ಮಿಕೊಳ್ಳುತ್ತಿದೆ ಎಂದು ಕರ್ನಾಟಕ ನಾಟಕ ಅಕಾಡೆಮಿ ಅಧ್ಯಕ್ಷರಾದ ಡಾ.ಕೆ.ವಿ. ನಾಗರಾಜಮೂರ್ತಿ ಅಭಿಪ್ರಾಯಪಟ್ಟರು.

ಗುರುವಾರ ಸಂಜೆ ನಾಟಕೋತ್ಸವದ ಮೊದಲನೆಯ ದಿನದ ಗ್ರಾಮ ಪಂಚಾಯತ ಗಂಗವ್ವ ನಾಟಕ ಉದ್ಘಾಟಿಸಿ, ನಾಟಕಗಳು ಸಮಾಜದ ವಾಸ್ತವಿಕ ವಿಷಯವನ್ನು ಪ್ರಸ್ತಾಪಿಸಿ ಸಮಾಜಕ್ಕೆ ಬಹುದೊಡ್ಡ ಸಂದೇಶ ನೀಡುತ್ತವೆ. ನಾಟಕ ಪ್ರದರ್ಶನ ಮಾಡುವ ರಂಗಭೂಮಿ ಕಲಾವಿದರಿಗೆ ಪ್ರೋತ್ಸಾಹ ಹಾಗೂ ಅವಕಾಶ ನೀಡುವ ಪ್ರಾಮಾಣಿಕ ಪ್ರಯತ್ನವನ್ನು ನಾಟಕ ಅಕಾಡೆಮಿ ಮಾಡುತ್ತಿರುವುದು ಹೆಮ್ಮೆಯ ವಿಷಯ ಎಂದರು.

ಕರ್ನಾಟಕ ನಾಟಕ ಅಕಾಡೆಮಿಯ ಮಾಜಿ ಅಧ್ಯಕ್ಷರಾದ ಎಲ್.ಬಿ.ಶೇಖ ಮಾಸ್ತರ ಅಧ್ಯಕ್ಷತೆ ವಹಿಸಿ, ರಂಗಭೂಮಿ ಕಲಾವಿದರು ಉತ್ತಮ ತರಬೇತಿ ಹಾಗೂ ತಾಲೀಮು ನಡೆಸಿ ಗುಣಮಟ್ಟದ ನಾಟಕ ಪ್ರದರ್ಶನ ನೀಡಬೇಕು. ಪ್ರೇಕ್ಷಕರ ಮನ ಮುಟ್ಟುವ ಕಥೆಗಳನ್ನು ಆಯ್ಕೆ ಮಾಡಿಕೊಳ್ಳಬೇಕು ಎಂದರು.

ಕರ್ನಾಟಕ ನಾಟಕ ಅಕಾಡೆಮಿ ಉತ್ತಮ ನಾಟಕಗಳನ್ನು ಸದಾ ಪ್ರೋತ್ಸಾಹಿಸುತ್ತಾ ಬಂದಿದೆ. ಕಲಾಭಿಮಾನಿಗಳು ನಾಟಕ ನೋಡುವುದರ ಮೂಲಕ ಬೆಂಬಲಿಸಬೇಕು ಎಂದರು.

# ಅಭಿವೃದ್ಧಿ ಇಲ್ಲದ ಭಿಕ್ಷೆ ಬೇಡ: ಕಾಂಗ್ರೆಸ್ ನಂಟು ತೊರೆದು ಬಿಜೆಪಿ ಸೇರ್ಪಡೆ



ಕಲಬುರಗಿಯ ಬಿಜೆಪಿ ಕಚೇರಿಯಲ್ಲಿ ಅಫಜಲಪುರ ತಾಲ್ಲೂಕಿನ ಗೊಬ್ಬೂರ, ಹಾವನೂರ, ಅವರಳ್ಳಿ, ಬಾದನಳ್ಳಿ ಸೇರಿದಂತೆ ಸುತ್ತಲಿನ ಗ್ರಾಮಗಳ ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು, ಸದ್ಸ್ಯರೂ ಸೇರಿದಂತೆ ಮುಖಂಡರು ಮತ್ತು ನೂರಾರು ಸಂಖ್ಯೆಯ ಕಾಂಗ್ರೆಸ್ ಕಾರ್ಯಕರ್ತರು ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷ ನಿತಿನ್ ಗುತ್ತೇದಾರ ಅವರ ನೇತೃತ್ವದಲ್ಲಿ ಬಿಜೆಪಿ ಸೇರ್ಪಡೆಯದರು. ನಿತಿನ್ ಗುತ್ತೇದಾರ ಅವರು ಎಲ್ಲರನ್ನೂ ಬಿಜೆಪಿ ಶಾಲು ಹೊದಿಸಿ ಬರಮಾಡಿಕೊಂಡರು.

**ಕಲಬುರಗಿ, ಸೆ. 11:** ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಮೂರು ವರ್ಷಗಳು ಕಳೆದಿವೆ. ಒಂದೇ ಒಂದು ರಸ್ತೆ ಮಾಡಿಲ್ಲ, ಸ್ಕೂಲ್ ರೂಮ್ ಕಟ್ಟಿಲ್ಲ, ಶಿಕ್ಷಕರ ನೇಮಕ ಮಾಡಿಲ್ಲ, ಕುಡಿಯುವ ನೀರಿನ ಯೋಜನೆ ಇಲ್ಲ, ನೀರಾವರಿ ಯಂತೂ ಇಲ್ಲವೇ ಇಲ್ಲ. ಬರಗಾಲದಿಂದ ಜನರು ಒದ್ದಾಡುತ್ತಿದ್ದಾರೆ. ಇಂಥ ಪರಿಸ್ಥಿತಿಯಲ್ಲಿ ಸರ್ಕಾರ ಜನರ ನೆರವಿಗೆ ಬಾರದೇ, ಗ್ಯಾರಂಟಿ ಭಿಕ್ಷೆ ಕೊಟ್ಟಿದ್ದೇವಲ್ಲ ಎಂದು ಯಾವುದೇ ಅಭಿವೃದ್ಧಿ ಮಾಡದ ಪಕ್ಷ ನಮಗೆ ಬೇಡ. ನಮಗೆ ಅಭಿವೃದ್ಧಿ ಬೇಕು ಎಂದು ನೂರಕ್ಕೂ ಹೆಚ್ಚು ಮುಖಂಡರು, ಕಾರ್ಯಕರ್ತರು ಕಾಂಗ್ರೆಸ್ ತೊರೆದು ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷ ನಿತಿನ್ ಗುತ್ತೇದಾರ ಅವರ ನೇತೃತ್ವದಲ್ಲಿ ಬಿಜೆಪಿ ಸೇರ್ಪಡೆಯದರು.

ನಗರದ ಬಿಜೆಪಿ ಕಚೇರಿಯಲ್ಲಿ ಬಿಜೆಪಿ ಸೇರ್ಪಡೆ ಇದೊಂದು ದೊಡ್ಡ ಸಮಾರಂಭವಾಗಿತ್ತು. ಅಫಜಲಪುರ ತಾಲೂಕಿನ ಗೊಬ್ಬೂರ, ಹಾವನೂರ, ಅವರಳ್ಳಿ, ಬಾದನಳ್ಳಿ ಗ್ರಾಮಗಳ ನೂರಾರು ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಸ್ವಯಂ ಪ್ರೇರಿತರಾಗಿ ಆಗಮಿಸಿ ಭಾರತೀಯ ಜನತಾ ಪಕ್ಷ ಸೇರ್ಪಡೆಯಾದರು. ಕಾರ್ಯಕ್ರಮದಲ್ಲಿ 150ಕ್ಕೂ ಅಧಿಕ ಕಾರ್ಯಕರ್ತರು, ಮುಖಂಡರನ್ನು ಬಿಜೆಪಿಗೆ ಸ್ವಾಗತಿಸಿ ಮಾತನಾಡಿದ ಜಿಪಂ ಮಾಜಿ ಅಧ್ಯಕ್ಷ ನೀತಿನ್ ಗುತ್ತೇದಾರ್, 35 ವರ್ಷಕ್ಕೂ ಹೆಚ್ಚು ಕಾಲ ಶಾಸಕ ಎಂ.ವೈ.ಪಾಟೀಲ್ ಕುಟುಂಬದ ಜತೆಗಿದ್ದವರು ಇಂದು ಕಾಂಗ್ರೆಸ್ ತೊರೆದು ಬಿಜೆಪಿ ಸೇರ್ಪಡೆಯಾಗಿದ್ದು, ಕಾಂಗ್ರೆಸ್ ದುರಾಡಳಿತ ಮತ್ತು ನಿಷ್ಕ್ರೀಯತೆಗೆ ಸಾಕ್ಷಿಯಗಿದೆ. ನನ್ನನ್ನು ರಾಜಕಾರಣಿಯಾಗಿ ನೋಡದೆ ಮನೆಯ ಮಗ, ಜನರ ಸೇವಕನಾಗಿ ಪರಿಗಣಿಸಬೇಕು ಎಂದು ಕೋರಿದರು.

ಗೊಬ್ಬೂರ ಗ್ರಾಮಕ್ಕೆ ಬಿಜೆಪಿ ಸರ್ಕಾರದಲ್ಲಿ ಮಂಜೂರಾಗಿದ್ದ 500 ಮನೆಗಳನ್ನು ಕಾಂಗ್ರೆಸ್ ಸರ್ಕಾರದಲ್ಲಿ ತಡೆಹಿಡಿದಿದೆ. ಬಡವರಿಗೆ ಮನೆ ಕಟ್ಟಿಸಲು ಹೋರಾಟ ಮಾಡಲಾಗುವುದು ಘೋಷಣೆ ಮಾಡಿದರು. ಗ್ರಾಪಂ ಮಾಜಿ ಅಧ್ಯಕ್ಷ ಬಸಲಿಂಗಪ್ಪ ದೇವತ್ಕಲ್ ಮಾತನಾಡಿ, ಕಾಂಗ್ರೆಸ್ ಸರ್ಕಾರದಲ್ಲಿ ಬಡವರ ಕೆಲಸಗಳು ಆಗುತ್ತಿಲ್ಲ. ನಿರಂತರ ಕಡೆಗಣಿಸಲಾಗುತ್ತಿದೆ. ಆದ್ದರಿಂದ ಬಿಜೆಪಿ ಸೇರ್ಪಡೆ ಆಗಿದ್ದೇವೆ ಎಂದರು.

ದಲಿತ ಮುಖಂಡ ಶಿವು ಬಾದನಳ್ಳಿ ಮಾತನಾಡಿ, ಶಾಸಕ ಎಂ.ವೈ. ಪಾಟೀಲ್ ಪುತ್ರ ಅರುಣ ಕುಮಾರ ಪಾಟೀಲ್ ಅವರ ಆಡಳಿತಕ್ಕೆ ಬೇಸತ್ತು ಕಾಂಗ್ರೆಸ್‌ನಿಂದ ಹೊರ ಬಂದಿದ್ದೇವೆ ಎಂದು ಹೇಳಿದರು.

# ತಂತ್ರಜ್ಞಾನ ಯುಗದಲ್ಲಿ ಭವಿಷ್ಯದ ಸವಾಲುಗಳಿಗೆ ವಿದ್ಯಾರ್ಥಿಗಳು ಸಿದ್ಧರಾಗಲಿ: ರಾಧಾಕೃಷ್ಣ ದೊಡ್ಡಮನಿ




**ಕಲಬುರಗಿ, ಸೆ. 11 :** ಕೃತಕ ಬುದ್ಧಿಮತ್ತೆ, ಡಿಜಿಟಲ್ ಹಾಗೂ ಜೈವಿಕ ತಂತ್ರಜ್ಞಾನದ ಈ ವೇಗದ ಯುಗದಲ್ಲಿ ವಿಶ್ವವಿದ್ಯಾಲಯಗಳು, ವಿದ್ಯಾರ್ಥಿಗಳನ್ನು ಕೇವಲ ಇಂದಿನ ಉದ್ಯೋಗಕ್ಕಷ್ಟೇ ಅಲ್ಲದೆ, ನಾಳೆಯ ಸವಾಲುಗಳು ಹಾಗೂ ಸ್ಪರ್ಧೆಗಳನ್ನು ಎದುರಿಸಲು ಸಿದ್ಧಗೊಳಿಸಬೇಕು ಎಂದು ಲೋಕಸಭಾ ಸದಸ್ಯ ರಾಧಾಕೃಷ್ಣ ದೊಡ್ಡಮನಿ ಹೇಳಿದರು.

ವಿಶ್ವವಿದ್ಯಾಲಯದ 47ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ, ಇಂದು ನಮ್ಮ ಮುಂದಿರುವ ಪ್ರಶ್ನೆ ವಿಶ್ವವಿದ್ಯಾಲಯ ಗತಕಾಲದಲ್ಲಿ ಎಷ್ಟು ದೂರ ಬಂದಿದೆ ಎಂದಲ್ಲ, ಬದಲಾಗಿ ಆಧುನಿಕ ಜಗತ್ತಿಗೆ ತಕ್ಕಂತೆ ಇಲ್ಲಿಂದ ಮುಂದೆ ಎಷ್ಟು ದೂರ ಸಾಗಬಲ್ಲದು ಎಂಬುದು ಮುಖ್ಯ ಎಂದರು.

1970ರಲ್ಲಿ ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದ ಸ್ನಾತಕೋತ್ತರ ಕೇಂದ್ರವಾಗಿ ಆರಂಭಗೊಂಡ ಈ ಸಂಸ್ಥೆಯು, 1980ರಲ್ಲಿ ಪೂರ್ಣ ಪ್ರಮಾಣದ ವಿಶ್ವವಿದ್ಯಾಲಯವಾಗಿ ಬೆಳೆದು ಕಲ್ಯಾಣ ಕರ್ನಾಟಕ ಭಾಗದ ಶೈಕ್ಷಣಿಕ ವಿಕಾಸಕ್ಕೆ ಬಹುದೊಡ್ಡ ಕೊಡುಗೆ ನೀಡಿದೆ. ವಿಶ್ವವಿದ್ಯಾಲಯ 794 ಎಕರೆ ವಿಸ್ತಾರವಾದ ಕ್ಯಾಂಪಸ್ ಹೊಂದಿರುವ ಸಂಸ್ಥೆಯು ಎನ್‌ಎಸಿಸಿ ನಿಂದ ಎ+ ಗ್ರೇಡ್, ಎನ್‌ಐಆರ್‌ಎಫ್ ಶ್ರೇಯಾಂಕ 200+, ಐಸಿಎಆರ್‌ಇ ನಿಂದ 4-ಸ್ಟಾರ್ ರೇಟಿಂಗ್ ಹಾಗೂ ಕ್ಯೂಎಸ್ ರ್‍ಯಾಂಕಿಂಗ್‌ನಲ್ಲಿ 601–650 ಶ್ರೇಣಿ ಸಾಧಿಸಿರುವದು ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ವಿದ್ಯಾರ್ಥಿಗಳು ಸಂಸ್ಥೆಯ ಭಾವಿ ರಾಯಭಾರಿಗಳು. ನೀವು ಪಡೆಯುವ ಹುದ್ದೆಗಿಂತಲೂ ಸಮಾಜದಲ್ಲಿ ತರುವ ಧನಾತ್ಮಕ ಬದಲಾವಣೆಯೇ ನಿಮ್ಮ ನೈಜ ಯಶಸ್ಸು ಎಂದು ವಿದ್ಯಾರ್ಥಿಗಳಿಗೆ ಹೇಳಿದರು.ವಿವಿಯ ಶೈಕ್ಷಣಿಕ ಹಾಗೂ ಆಡಳಿತಾತ್ಮಕ ಕ್ಷೇತ್ರದಲ್ಲಿ ವಿಶಿಷ್ಟ ಸೇವೆ ಸಲ್ಲಿಸಿದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಗೂ ನಿವೃತ್ತ ನೌಕರರಿಗೆ ಸನ್ಮಾನಿಸಿ ಗೌರವಿಸಲಾಯಿತು.

ಕುಲಪತಿ ಶಶಿಕಾಂತ ಪ್ರೊ.ಎಸ್. ಉಡಿಕೇರಿ ಅವರು ಮಾತನಾಡಿ, ವಿಶ್ವವಿದ್ಯಾಲಯದ ವಿಕಾಸಕ್ಕೆ ಶ್ರಮಿಸಿದ ಹಾಲಿ ಹಾಗೂ ನಿವೃತ್ತ ಬೋಧಕ-ಬೋಧಕೇತರ ಸಿಬ್ಬಂದಿಯ ಕೊಡುಗೆ ಅನನ್ಯ. ಸಂಸ್ಥೆಯಲ್ಲಿ ಶೈಕ್ಷಣಿಕ ವಾತಾವರಣ ಸುಧಾರಿಸಲು ನೂತನ ಕೋರ್ಸ್‌ಗಳು ಹಾಗೂ ಸರ್ಟಿಫಿಕೇಟ್ ಕಾರ್ಯಕ್ರಮಗಳನ್ನು ಪ್ರಾರಂಭಿಸಲಾಗುತ್ತಿದೆ ಎಂದರು.

ಆರ್ಥಿಕ ಶಿಸ್ತು ಕಾಪಾಡಿಕೊಂಡು ವಿಶ್ವವಿದ್ಯಾಲಯವನ್ನು ಅಭಿವೃದ್ಧಿಯತ್ತ ಒಯ್ಯಲಾಗುತ್ತಿದೆ. ರಾಜ್ಯ ಸರ್ಕಾರದ ಹುದ್ದೆಗಳ ನೇಮಕಾತಿಯಲ್ಲಿ ನಮ್ಮ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಯ್ಕೆಯಾಗಿ ಪ್ರಥಮ ಸ್ಥಾನ ಗಳಿಸಬೇಕು. ವಿದ್ಯಾರ್ಥಿಗಳು ಹಾಗೂ ಸಂಶೋಧಕರು ಸ್ಪರ್ಧಾತ್ಮಕ ಪರೀಕ್ಷೆಗಳು, ಫೆಲೋಶಿಪ್‌ಗಳು ಮತ್ತು ಜಾಗತಿಕ ಮಟ್ಟದ ಸಮ್ಮೇಳನಗಳಲ್ಲಿ ಯಶಸ್ಸು ಸಾಧಿಸಬೇಕು. ಹಾಗೆಯೇ ನಮ್ಮ ಪ್ರಾಧ್ಯಾಪಕರಿಗೆ ರಾಜ್ಯ-ರಾಷ್ಟ್ರ ಮಟ್ಟದ ಉನ್ನತ ಹುದ್ದೆಗಳಲ್ಲಿ ಹೆಚ್ಚಿನ ಪ್ರಾತಿನಿಧ್ಯ ಸಿಗಬೇಕು ಎಂದು ಆಶಿಸಿದರು.

# ಜಿಪಂ ಸಿಇಒ ಬೇಮಳಖೇಡಾ, ಮೀನಕೇರಾ ಗ್ರಾಮಗಳಿಗೆ ಭೇಟಿ, ಕಾಮಗಾರಿ ಪರಿಶೀಲನೆ



ಬೀದರ ಜಿಲ್ಲಾ ಪಂಚಾಯತ್ ಸಿಇಓ ಗಿತ್ತೆ ಮಾಧವರಾವ್ ವಿಠ್ಠಲ್ ಅವರು ಚಿಟಗುಪ್ಪ ತಾಲ್ಲೂಕಿನ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

**ಬೀದರ, ಸೆ. 11:** ಜಿಲ್ಲಾ ಪಂಚಾಯತ್ ಸಿಇಓ ಗಿತ್ತೆ ಮಾಧವರಾವ್ ವಿಠ್ಠಲ್ ಅವರು ಜಿಲ್ಲೆಯ ಚಿಟಗುಪ್ಪ ತಾಲ್ಲೂಕಿನ ಬೇಮಳಖೇಡಾ ಮತ್ತು ಮೀನಕೇರಾ ಗ್ರಾಮ ಪಂಚಾಯಿತಿ ವ್ಯಾಪ್ತಿಯ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಬೇಮಳಖೇಡಾ ಗ್ರಾಮದಲ್ಲಿನ ಜಲ ಜೀವನ್ ಮಿಷನ್ ಯೋಜನೆಯಿಂದ ಮನೆ ಮನೆಗೆ ಅಳವಡಿಸಿರುವ ನಲ್ಲಿಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿವೆಯೇ ಎಂಬುದನ್ನು ಪರಿಶೀಲಿಸಿ ಗ್ರಾಮಸ್ಥರಿಂದ ನೀರು ಪೂರೈಕೆ ಕುರಿತು ಮಾಹಿತಿ ಪಡೆದರು.

ಗ್ರಾಮದಲ್ಲಿ ನಡೆದ ಜಲ ಜನಜೀವನ ಮಿಷನ್ ಯೋಜನೆಯ ಕಾಮಗಾರಿ ಕಳಪೆ ಆಗಿದೆ. ಸರಿಯಾಗಿ ನೀರು ಸರಬರಾಜು ಆಗುತ್ತಿಲ್ಲ. ಇದರಿಂದಾಗಿ ನಮಗೆ ನಿತ್ಯವೂ ಸಮಸ್ಯೆ ಉಂಟಾಗುತ್ತಿದೆ ಎಂದು ಗ್ರಾಮಸ್ಥರು ಸಿಇಓ ಅವರ ಮುಂದೆ ತಮ್ಮ ಅಳಲು ತೋಡಿಕೊಂಡರು. ಗ್ರಾಮದಲ್ಲಿನ ಪ್ರತಿ ಮನೆ ಮನೆಗೂ ಸಾರಾಗವಾಗಿ ನೀರು ಬರುವಂತೆ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ: ಬೇಮಳಖೇಡಾ ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ, ಚಿಕಿತ್ಸೆ ಪಡೆಯುತ್ತಿದ್ದ ರೋಗಿಗಳ ಆರೋಗ್ಯ ವಿಚಾರಿಸಿದರು. ಈ ಸಂದರ್ಭದಲ್ಲಿ ಆಸ್ಪತ್ರೆಗೆ ಸರಿಯಾಗಿ ವೈದ್ಯರು ಬರುವುದಿಲ್ಲ. ಹೀಗಾಗಿ ನಾವು ಬೀದರ್ ಮತ್ತು ಮನ್ನಾಏಖೇಳಿ ಗ್ರಾಮಗಳಿಗೆ ತೆರಳುವ ಅನಿವಾರ್ಯತೆ ಎದುರಾಗಿದೆ ಎಂದು ಸಾರ್ವಜನಿಕರು ದೂರಿದರು. ನಂತರ ರೋಗಿಗಳಿಗೆ ನೀಡುತ್ತಿರುವ ಚಿಕಿತ್ಸೆಯ ಕುರಿತು ಮಾಹಿತಿ ಪಡೆದರು. ಔಷಧ ದಾಸ್ತಾನು ಕೊಠಡಿಗೆ ತೆರಳಿ ಔಷಧ ಲಭ್ಯತೆಯ ಬಗ್ಗೆ ಪರಿಶೀಲಿಸಿದರು.

ವಸತಿ ನಿಲಯಕ್ಕೆ ಭೇಟಿ: ಗ್ರಾಮದಲ್ಲಿನ ಡಾ.ಬಿ. ಆರ್. ಅಂಬೇಡ್ಕರ್ ವಸತಿ ಶಾಲೆಗೆ ಭೇಟಿ ನೀಡಿ, ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು.

ಕಾಮಗಾರಿ ಪರಿಶೀಲನೆ: ಗ್ರಾಮದ ಹೊರವಲಯದಲ್ಲಿ ನಡೆಯುತ್ತಿದ್ದ ವಿಬಿಜಿ ರಾಮಜಿ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ನಂತರ ಸ್ವತ ಜಿಪಂ ಕಾರ್ಯನಿರ್ವಾಹಕ ಅಧಿಕಾರಿ ಗಿತ್ತ ಮಾಧವರಾಲ್ ವಿಠ್ಠಲ ಅವರು ಕಾರ್ಮಿಕರರೊಂದಿಗೆ ಹೂಳು ತೆಗೆದರು.

# ಬಳ್ಳಾರಿ: ಕೌಲ್ ಬಜಾರ್ ವ್ಯಾಪ್ತಿಯಲ್ಲಿ ಕೋಟ್ಯಂತರ ಮೌಲ್ಯದ ಸರ್ಕಾರಿ ಜಮೀನು ಅತಿಕ್ರಮಣ ತೆರವು– ಜಮೀನು ವಶಕ್ಕೆ ಪಡೆದ ಜಿಲ್ಲಾಡಳಿತ



**ಬಳ್ಳಾರಿ,ಸೆ.11.**ನಗರದ ಕೌಲ್ ಬಜಾರ್ ಸಮೀಪದ ?ನಲ್ಲಚೆರುವು' ವ್ಯಾಪ್ತಿಯಲ್ಲಿ ಅಕ್ರಮವಾಗಿ ಒತ್ತುವರಿಯಾಗಿದ್ದ ಕೋಟ್ಯಂತರ ರೂಪಾಯಿ ಮೌಲ್ಯದ ಸರ್ಕಾರಿ ಜಮೀನನ್ನು ಕಂದಾಯ ಹಾಗೂ ನಗರ ಪಾಲಿಕೆ ಅಧಿಕಾರಿಗಳು ಶುಕ್ರವಾರ ಪೊಲೀಸ್ ಬಂದೋಬಸ್ತ್‌ನಲ್ಲಿ ಯಶಸ್ವಿಯಾಗಿ ವಶಪಡಿಸಿಕೊಂಡಿದ್ದಾರೆ.

ಕೌಲ್ ಬಜಾರ್ ವಾರ್ಡ್ ನಂ. 16, ಟಿ.ಎಸ್. ನಂ. 21/1ಎ1 ವ್ಯಾಪ್ತಿಯ ಸರ್ಕಾರಿ ಜಾಗದಲ್ಲಿ ಅಕ್ರಮವಾಗಿ ಕೃಷಿ ಚಟುವಟಿಕೆಗಳನ್ನು ಕೈಗೊಂಡು, ಕೆರೆಯ ಕೊಳಚೆ ನೀರನ್ನು ಮೋಟಾರ್ ಪಂಪ್‌ಸೆಟ್ ಮೂಲಕ ಹರಿಸಿ ಅತಿಕ್ರಮಣ ಮಾಡಿಕೊಳ್ಳಲಾಗಿತ್ತು. ಈ ಕುರಿತು ಸಾರ್ವಜನಿಕರು ಮತ್ತು ಸ್ಥಳೀಯರಿಂದ ಬಂದ ದೂರುಗಳ ಮೇರೆಗೆ ಎಚ್ಚೆತ್ತ ತಾಲೂಕು ಆಡಳಿತ ಮತ್ತು ಸಂಬಂಧಪಟ್ಟ ಇಲಾಖಾಧಿಕಾರಿಗಳು, ಜೆಸಿಬಿ ಯಂತ್ರಗಳೊಂದಿಗೆ ಸ್ಥಳಕ್ಕೆ ಭೇಟಿ ನೀಡಿ ತೆರವು ಕಾರ್ಯಾಚರಣೆ ನಡೆಸಿದರು. ತೆರವುಗೊಳಿಸಿದ ಜಾಗದಲ್ಲಿ ?ಇದು ಕರ್ನಾಟಕ ಸರ್ಕಾರದ ಸ್ವತ್ತು, ಇದನ್ನು ಅತಿಕ್ರಮಣ ಮಾಡುವುದು ಶಿಕ್ಷಾರ್ಹ ಅಪರಾಧ? ಎಂಬ ಎಚ್ಚರಿಕೆ ನಾಮಫಲಕವನ್ನು ಅಳವಡಿಸಲಾಯಿತು. ಅಕ್ರಮವಾಗಿ ಅಳವಡಿಸಲಾಗಿದ್ದ ನೀರಾವರಿ ಪೈಪ್‌ಗಳು ಹಾಗೂ ಮೋಟಾರ್‌ಗಳನ್ನು ತೆರವುಗೊಳಿಸಿ, ಜಮೀನನ್ನು ಸರ್ಕಾರದ ಸುಪರ್ದಿಗೆ ಪಡೆಯಲಾಯಿತು.

ಅದೇರೀತಿಯಾಗಿ ಸ್ಥಳೀಯ ಕನಕ ದುರ್ಗಮ್ಮ ಗುಡಿಯಿಂದ-ವಾಲ್ಮೀಕಿ ವೃತ್ತಕ್ಕೆ ತೆರಳುವ ಮುಖ್ಯರಸ್ತೆಯ ಪಕ್ಕದಲ್ಲಿದ್ದ ನಿವೇಶನ ಜಾಗದ ಒತ್ತುವರಿ ತೆರವು ಮಾಡಿದರು. ನಗರದ ವ್ಯಾಪ್ತಿಯಲ್ಲೇ ಬರುವ ಈ ಎರಡೂ ಜಾಗಗಳು ಕೋಟ್ಯಂತರ ಮೌಲ್ಯದ್ದಾಗಿವೆ.

ಈ ಸಂದರ್ಭದಲ್ಲಿ ಮಾತನಾಡಿದ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು, ?ಸರ್ಕಾರಿ ಜಮೀನು, ಕೆರೆ-ಕಟ್ಟೆ ಒತ್ತುವರಿ ಮಾಡುವವರ ವಿರುದ್ಧ ಮುಲಾಜಿಲ್ಲದೆ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು. ಯಾವುದೇ ಕಾರಣಕ್ಕೂ ಸಾರ್ವಜನಿಕ ಸ್ವತ್ತು ಅತಿಕ್ರಮಣಕ್ಕೆ ಅವಕಾಶ ನೀಡುವುದಿಲ್ಲ? ಎಂದು ಎಚ್ಚರಿಕೆ ನೀಡಿದ್ದಾರೆ.



ಶ್ರೀ ಡಿ.ಕೆ. ಶಿವಕುಮಾರ್
ಸನ್ಮಾನ್ಯ ಮುಖ್ಯಮಂತ್ರಿಗಳು



ಶ್ರೀ ಸಿದ್ದರಾಮಯ್ಯ
ಮಾನ್ಯ ನಿಕಟಪೂರ್ವ ಮುಖ್ಯಮಂತ್ರಿಗಳು



ಡಾ. ಜಿ. ಪರಮೇಶ್ವರ
ಮಾನ್ಯ ಉಪ ಮುಖ್ಯಮಂತ್ರಿಗಳು

# ರೈತ ಸಂಕಲ್ಪ

## ಕೃಷಿ ಕೈಗಳಿಗೆ ಬೆಂಬಲದ ಬಲ




### ಮುಖ್ಯಮಂತ್ರಿ ನೇಗಿಲ ಯೋಗಿ

3 ಎಕರೆವರೆಗೆ ಜಮೀನು ಇರುವ ರೈತರಿಗೆ ಕೃಷಿ ಯಂತ್ರಗಳನ್ನು ಬಾಡಿಗೆಗೆ ಪಡೆಯಲು ವರ್ಷಕ್ಕೆ ₹4,500ರವರೆಗೆ ಶೇ.50ರಷ್ಟು ಸಹಾಯಧನ ಸಿಗಲಿದೆ. ಮೊಬೈಲ್ ಆ್ಯಪ್ ಮೂಲಕವೇ ಯಂತ್ರಗಳನ್ನು ಬಾಡಿಗೆಗೆ ಪಡೆಯಬಹುದು.

### ಸಿಎಂ ರೈತ ಚೈತನ್ಯ – ಡಿಜಿಟಲ್ ಕೃಷಿ ಮಿಷನ್

ಡ್ರೋನ್ ಮತ್ತು ಉಪಗ್ರಹಗಳ ಮೂಲಕ ಬೆಳೆ ಸಮೀಕ್ಷೆ ನಡೆಸಿ, ರೈತರಿಗೆ ತಮ್ಮ ಜಮೀನಿನ ಬೆಳೆ ಸ್ಥಿತಿಯ ಬಗ್ಗೆ ತಕ್ಷಣದ ಮಾಹಿತಿ ನೀಡಲಾಗುತ್ತದೆ. ಜೊತೆಗೆ ಮಾರುಕಟ್ಟೆಯಲ್ಲಿ ಸಿಗುವ ಬೆಲೆಗಳ ಬಗ್ಗೆಯೂ ಮಾಹಿತಿ ದೊರೆಯಲಿದೆ.

### ಕೃಷಿ, ತೋಟಗಾರಿಕೆ ಮತ್ತು ಸಂಬಂಧಿತ ವಲಯಗಳ ರಫ್ತು ಉತ್ತೇಜನ

ಮಾವು, ದಾಳಿಂಬೆ, ರಾಗಿ, ಸಿರಿಧಾನ್ಯಗಳು, ಅಕ್ಕಿ ಮತ್ತು ತೊಗರಿ ಸೇರಿದಂತೆ ನಮ್ಮ ಪ್ರಮುಖ ಕೃಷಿ ಉತ್ಪನ್ನಗಳನ್ನು ವಿದೇಶಗಳಲ್ಲಿ ಮಾರಾಟ ಮಾಡಲು ಹೆಚ್ಚಿನ ಅವಕಾಶ ಕಲ್ಪಿಸಲಾಗುತ್ತದೆ. ಇದಕ್ಕಾಗಿ KAPPEC ಮೂಲಕ ಹೊಸ ರಫ್ತು ಮಿಷನ್ ಆರಂಭಿಸಲಾಗುತ್ತದೆ.

### ಸಮಗ್ರ ಮಳೆ ಆಧಾರಿತ ಕೃಷಿ ನೀತಿ

ಮಳೆಯಾಶ್ರಿತ ಪ್ರದೇಶಗಳಿಗಾಗಿ ವಿಶೇಷ ನೀತಿ ರೂಪಿಸಲಾಗುತ್ತದೆ. ಮಳೆನೀರನ್ನು ಉಳಿಸುವುದು, ಮಣ್ಣನ್ನು ಕಾಪಾಡುವುದು ಮತ್ತು ಹವಾಮಾನಕ್ಕೆ ತಕ್ಕಂತೆ ಕೃಷಿ ಮಾಡಲು ರೈತರಿಗೆ ನೆರವು ನೀಡಲಾಗುತ್ತದೆ. ಇದರಿಂದ ರೈತರಿಗೆ ಹೆಚ್ಚಿನ ಆದಾಯ ಮತ್ತು ಉದ್ಯೋಗದ ಅವಕಾಶಗಳು ಸಿಗಲಿವೆ.

### ತೇಗದ ಸಿರಿ

ರಸ್ತೆ ಬದಿಯಲ್ಲಿ ತಮ್ಮ ಜಮೀನಿಗೆ ಹೊಂದಿಕೊಂಡಿರುವ ಜಾಗದಲ್ಲಿ ಮರ ಬೆಳೆಸಲು ಭೂಮಾಲೀಕರಿಗೆ ತೇಗ ಸೇರಿದಂತೆ ಉಚಿತ ಸಸಿಗಳನ್ನು ನೀಡಲಾಗುತ್ತದೆ. ಮರ ಬೆಳೆದು ಮಾರಾಟವಾದಾಗ ಸಿಗುವ ಹಣದಲ್ಲಿ ಶೇ.70ರಷ್ಟು ಭೂಮಾಲೀಕರಿಗೆ ಸಿಗಲಿದೆ.

### ಕರ್ನಾಟಕ ಪ್ರೋಟೀನ್ ಮಿಷನ್

ಮೊಟ್ಟೆ, ಕೋಳಿ, ಮೀನು, ಕುರಿ ಮತ್ತು ಮೇಕೆ ಸಾಕಾಣಿಕೆಗೆ ಹೆಚ್ಚಿನ ಉತ್ತೇಜನ ನೀಡಲಾಗುತ್ತದೆ. ಇದರಿಂದ ಗ್ರಾಮೀಣ ಕುಟುಂಬಗಳಿಗೆ ಹೆಚ್ಚಿನ ಆದಾಯ ಸಿಗುವುದರ ಜೊತೆಗೆ ಜನರಿಗೆ ಪೌಷ್ಟಿಕ ಆಹಾರವೂ ದೊರೆಯಲಿದೆ.

### ಗ್ರಾಮಾನುಭವ - ಗ್ರಾಮೀಣ ಬದುಕು ನೇರವಾಗಿ ಅರಿಯುವ ಕಾರ್ಯಕ್ರಮ

ನಗರ ಪ್ರದೇಶಗಳ ಶಾಲಾ-ಕಾಲೇಜು ವಿದ್ಯಾರ್ಥಿಗಳು ಕೆಲವು ದಿನ ಗ್ರಾಮಗಳಲ್ಲಿ ವಾಸ್ತವ್ಯ ಹೂಡಿ, ಕೃಷಿ, ಪಶುಸಂಗೋಪನೆ, ಗ್ರಾಮೀಣ ಬದುಕು ಮತ್ತು ಜಾನಪದ ಸಂಸ್ಕೃತಿಯನ್ನು ನೇರವಾಗಿ ತಿಳಿದುಕೊಳ್ಳುವ ಅವಕಾಶ ಪಡೆಯಲಿದ್ದಾರೆ.

ದೃಢ ಕರ್ನಾಟಕದ ಸಂಕಲ್ಪ
ಶತಕದ ಪಥ ಪ್ರಗತಿಯ ರಥ

100 ದಿನ - 100 ಹೆಜ್ಜೆ - ಒಂದೇ ಸಂಕಲ್ಪ

## ದೃಢ ಕರ್ನಾಟಕದ ಸಂಕಲ್ಪ

ಗೃಹಲಕ್ಷ್ಮಿ | ಅನ್ನಭಾಗ್ಯ | ಗೃಹ ಜ್ಯೋತಿ | ಯುವನಿಧಿ | ಶಕ್ತಿ

ನಮ್ಮ ವೈವಿಧ್ಯಮಯ ಸಂಸ್ಕೃತಿ ಮತ್ತು ಪರಂಪರೆಯನ್ನು ಗೌರವಿಸುವುದು ಮತ್ತು ಕಾಪಾಡುವುದು ಪ್ರತಿಯೊಬ್ಬ ಭಾರತೀಯರ ಸಂವಿಧಾನಬದ್ಧ ಮೂಲಭೂತ ಕರ್ತವ್ಯ.

CMofKarnataka

https://dipr.karnataka.gov.in/

Karnatakavarthe

ಕರ್ನಾಟಕ ವಾರ್ತೆ